ಮೊದಲ ಪುಟದಿಂದ

## ಜೈಲು ಶಿಕ್ಷೆ ಖಚಿತ

ಹೋರಾಟ ಮಾಡುತ್ತಿಲ್ಲ. ಸಿದ್ದರಾಮಯ್ಯ ಉದಾಹರಣೆ ಇಟ್ಕೊಂಡು ಎಲ್ಲವೂ ತನಿಖೆ ಆಗಬೇಕು. ತನಿಖೆ ಆದರೆ ಸಿದ್ದರಾಮಯ್ಯ, ಪ್ರಭಾವಿ ರಾಜಕಾರಣಿಗಳು ಜೈಲಿಗೆ ಹೋಗುವುದು ಖಚಿತ ಎಂದು ಹೇಳಿದರು. ಇಂದು ಹೈಕೋರ್ಟ್‌ನಲ್ಲಿ ವಿಚಾರಣೆ ಇದೆ. ಶೇಕಡಾ 99 ರಷ್ಟು ಆದೇಶ ಹೊರಬರಬಹುದು" ಎಂಬ ವಿಶ್ವಾಸವಿದೆ ಎಂದರು.

## ಮುಂದುವರೆಯುತ್ತಿರುವುದು ಅಧರ್ಮ

ನೇಮಿಸಿ, ಪರಿಶೀಲನೆ ಮಾಡಬೇಕು. ಮೈಕ್ರೋ ಫೈನಾನ್ಸ್ ಆರ್‌ಬಿಐ ಗೈಡ್‌ಲೈನ್ಸ್‌ಗೆ ಒಳಪಡುತ್ತದೆ. ಯಾವ ಕಂಪನಿಗಳು ಆರ್‌ಬಿಐ ನೀತಿಗೆ ಒಳಪಡಲ್ಲವೋ ಅಂತ ಕಂಪನಿಗಳ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು. ಗೈಡ್‌ಲೈನ್ಸ್ ನಿಯಮ ಪಾಲಿಸಿಲ್ಲ ಅನ್ನೋ ಕಂಪನಿಗಳ ಬಗ್ಗೆ ಕೂಡಲೇ ಕ್ರಮ ತೆಗೆದುಕೊಳ್ಳಬೇಕು. ಪೊಲೀಸರ ಆಶ್ರಯವನ್ನು ಪಡೆದೇ ಕಿರುಕುಳ ನೀಡುತ್ತಿದ್ದಾರೆ ಎನ್ನುವ ಆರೋಪ ಇದ್ದು, ಇದನ್ನು ರಾಜ್ಯ ಸರ್ಕಾರ ಸರಿಪಡಿಸಬೇಕು ಎಂದರು.: ಕಾಂಗ್ರೆಸ್ ಅಧಿಕಾರಕ್ಕೆ ಬಂದು ಒಂದೂವರೆ ವರ್ಷ ಆಗಿದೆ. 5 ವರ್ಷ ಈ ಸರ್ಕಾರ ಇರಲಿ ಅನ್ನೋದು ಜನರ ಆಶಯ. ಆದರೆ ಅವರು ಮಾತ್ರ ಕಚ್ಚಾಟದಲ್ಲೇ ಇದ್ದಾರೆ. ರಾಜ್ಯದಲ್ಲಿ ಏನೇ ಆದರೂ ಕೇಂದ್ರ ಸರ್ಕಾರ ಹಾಗೂ ಹಿಂದಿನ ಬಿಜೆಪಿ ಕಾರಣ ಅಂತಾರೆ. ಮಳೆ ಬಂದರೂ ಬಿಜೆಪಿ ಕಾರಣ, ಬಾರದೆ ಇದ್ದರೂ ಬಿಜೆಪಿ ಕಾರಣ ಅಂತಾರೆ. ಇದನ್ನು ಬಿಟ್ಟು ಜನರ ಹಿತದೃಷ್ಟಿ ಕಾಯಬೇಕು. ರಾಜ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ತೊಡಗಿದ್ದರಿಂದ ಅವರ ಕಂಟ್ರೋಲ್‌ಗೆ ಏನು ಸಿಗ್ತಿಲ್ಲ ಎಂದು ಜೋಶಿ ಆರೋಪ ಮಾಡಿದರು.

## ಸಿಎಂಗೆ ದೊಡ್ಡ ಹಿನ್ನಡೆ

ಮುಖ್ಯಮಂತ್ರಿಗಳ ಧರ್ಮಪತ್ನಿಯವರು 14 ನಿವೇಶನ ಹಿಂತಿರುಗಿಸುತ್ತೇವೆ ಎಂದು ರಾತ್ರೋರಾತ್ರಿ ಮೂಡಕ್ಕೆ ಪತ್ರ ಬರೆದಿದ್ದರು. ಆ ಪತ್ರದ ಮೂಲಕ ಮೂಲಕ ಹಗರಣದಿಂದ ಹೊರಕ್ಕೆ ಬಂದ ಭ್ರಮೆಯಲ್ಲಿ ಮುಖ್ಯಮಂತ್ರಿಗಳೂ ಇದ್ದರು. ಇವತ್ತಿನ ಇ.ಡಿ. ನೋಟಿಸ್, ಇದರಿಂದ ಆಘಾತ ಆಗಿರುವುದರಲ್ಲಿ ಎರಡು ಮಾತಿಲ್ಲ ಎಂದು ನುಡಿದರು.

ಇ.ಡಿಗೆ ಅವರದೇ ಆದ ನಿಯಮಗಳಿರುತ್ತವೆ. ಅದರ ಪ್ರಕಾರ ಅವರು ಮುಂದುವರೆಯುತ್ತಾರೆ. ಇ.ಡಿ. ನೋಟಿಸ್ ರಾಜಕೀಯಪ್ರೇರಿತ ಎಂಬುದಕ್ಕಿಂತ ಹೆಚ್ಚಾಗಿ ಕಾಂಗ್ರೆಸ್ ಆಡಳಿತಾವಧಿಯಲ್ಲಿ ಸಾವಿರಾರು ಕೋಟಿ ಬಡವರ ಪಾಲಾಗಬೇಕಾದ ನಿವೇಶನಗಳ ಅಕ್ರಮ ಹಂಚಿಕೆ ನಡೆದಿತ್ತು. ಈ ದೊಡ್ಡ ಹಗರಣದ ಪರಿಣಾಮವನ್ನು ಮುಂದಿನ ದಿನಗಳಲ್ಲಿ ಎದುರಿಸಬೇಕಾಗುತ್ತದೆ ಎಂದು ಪ್ರಶ್ನೆಗೆ ಉತ್ತರವಾಗಿ ತಿಳಿಸಿದರು.ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆತುರಾತುರವಾಗಿ ಲೋಕಾಯುಕ್ತ ಸಂಸ್ಥೆಯಿಂದ ಬಿ ರಿಪೋರ್ಟ್ ಪಡೆದು ಮುಡಾ ಹಗರಣದಿಂದ ಹೊರಕ್ಕೆ ಬರಬಹುದೆಂಬ ಲೆಕ್ಕಾಚಾರದಲ್ಲಿದ್ದರು. ಇದೇ ಸಂದರ್ಭದಲ್ಲಿ ಇ.ಡಿ. (ಜಾರಿ ನಿರ್ದೇಶನಾಲಯ) ಮುಖ್ಯಮಂತ್ರಿಗಳ ಧರ್ಮಪತ್ನಿಗೂ ನೋಟಿಸ್ ಕೊಟ್ಟಿದೆ ಹಾಗೂ ತನಿಖೆಗೆ ಹಾಜರಾಗಲು ತಿಳಿಸಿದೆ ಎಂದು ವಿವರಿಸಿದರು.ಜೊತೆಗೇ ಸಚಿವ ಬೈರತಿಗೂ ಇ.ಡಿ. ನೋಟಿಸ್ ಕೊಟ್ಟಿದೆ. ಹಾಗಾಗಿ ಅನಿವಾರ್ಯವಾಗಿ ಬೈರತಿ ಸುರೇಶ್, ಮುಖ್ಯಮಂತ್ರಿಗಳ ಧರ್ಮಪತ್ನಿ ಅವರು ತನಿಖಾ ಸಂಸ್ಥೆಯಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗುವುದಿಲ್ಲ ಎಂದು ವಿಶ್ಲೇಷಿಸಿದರು.ಲೋಕಾಯುಕ್ತ ಕೊಟ್ಟ ವರದಿಯ ಮಾಹಿತಿ ಇಲ್ಲ; ರಾಜ್ಯ ಹೈಕೋರ್ಟ್‌ಗೆ ಲಕೋಟೆಯಲ್ಲಿ ವರದಿ ನೀಡಿದ ಮಾಹಿತಿಗಳು ಬರುತ್ತಿವೆ. ನಾನು ಡಿ.ಕೆ.ಶಿವಕುಮಾರ್ ಅವರ ಹೇಳಿಕೆಯನ್ನೂ ಗಮನಿಸಿದ್ದೇನೆ. ರಾಜಕೀಯಪ್ರೇರಿತ ಇ.ಡಿ. ಎಂದು ಅವರು ಹೇಳಿದ್ದಾರೆ. ಅವರ ಮುಖದಲ್ಲಿ ಮಂದಹಾಸವೂ ಕಾಣುತ್ತಿದೆ ಎಂದು ತಿಳಿಸಿದರು. ಅಬ್ಬಾ ಸಿದ್ದರಾಮಯ್ಯನವರ ಕುಟುಂಬಕ್ಕೆ ಇ.ಡಿ. ನೋಟಿಸ್ ಕೊಟ್ಟಿದೆ ಎಂಬ ಸಂತೋಷ ಅವರ ಮುಖದಲ್ಲಿತ್ತು ಎಂದು ಹೇಳಿದರು.

## ಆತ್ಮಹತ್ಯೆಗೆ ಶರಣು

ಪ್ರತಿ ಬಜೆಟ್‌ನಲ್ಲೂ ಅನುದಾನ ಶೇ.20 ರಷ್ಟು ಹೆಚ್ಚಾಗಬೇಕು. 2022–23 ರಲ್ಲಿ ಬಿಜೆಪಿ ಸರ್ಕಾರ ಕೃಷಿ ಇಲಾಖೆಗೆ 7,288 ಕೋಟಿ ರೂ. ನೀಡಿದರೆ, ಕಾಂಗ್ರೆಸ್ ಸರ್ಕಾರ 5,035 ಕೋಟಿ ರೂ. ನೀಡಿದೆ. ಅಂದರೆ 2,253 ಕೋಟಿ ರೂ. ಕೊರತೆಯಾಗಿದೆ. ಇದು ರೈತರ ಬದುಕಿನ ಮೇಲೆ ಪರಿಣಾಮ ಬೀರಿದೆ. ತೋಟಗಾರಿಕಾ ಇಲಾಖೆಗೆ ಬಿಜೆಪಿ 1,374 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 1,207 ಕೋಟಿ ರೂ. ನೀಡಿದೆ. ಕೃಷಿ, ತೋಟಗಾರಿಕೆ, ಗ್ರಾಮೀಣಾಭಿವೃದ್ಧಿ, ಸಹಕಾರಿ ಎಲ್ಲ ಸೇರಿ ಬಿಜೆಪಿ 15,383 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 14,768 ಕೋಟಿ ರೂ. ನೀಡಿದೆ. ಇದರಿಂದ 614 ಕೋಟಿ ರೂ. ಕೊರತೆಯಾಗಿದೆ. ಕಂದಾಯ ಇಲಾಖೆಗೆ ಬಿಜೆಪಿ 1534 ಕೋಟಿ ರೂ.ನೀಡಿದರೆ, ಕಾಂಗ್ರೆಸ್‌ನಿಂದ 940 ಕೋಟಿ ರೂ. ನೀಡಲಾಗಿದೆ. 594 ಕೋಟಿ ರೂ. ಕೊರತೆಯಾಗಿದೆ. ಲೋಕೋಪಯೋಗಿ ಇಲಾಖೆಗೆ ಬಿಜೆಪಿ 12,410 ಕೋಟಿ ರೂ. ನೀಡಿದರೆ, ಕಾಂಗ್ರೆಸ್‌ನಿಂದ 9,699 ಕೋಟಿ ರೂ. ನೀಡಲಾಗಿದೆ. 2,710 ಕೋಟಿ ರೂ. ಕೊರತೆಯಾಗಿದೆ. ನೀರಾವರಿಗೆ ಬಿಜೆಪಿ 19,610 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 16,834 ಕೋಟಿ ರೂ. ನೀಡಿದೆ. ಇದರಿಂದ 2755 ಕೋಟಿ ರೂ. ಕೊರತೆಯಾಗಿದೆ ಎಂದು ತಿಳಿಸಿದರು. ಮೈಕ್ರೋ ಫೈನಾನ್ಸ್‌ನ ಮೀಟರ್ ಬಡ್ಡಿ ದಂಧೆಯಲ್ಲಿ ರೌಡಿಗಳು ಈವರೆಗೆ ಸುಮ್ಮನಿದ್ದರು. ಕಾಂಗ್ರೆಸ್ ಸರ್ಕಾರದಿಂದಾಗಿ ರೌಡಿಗಳಿಗೆ ಉದ್ಯೋಗ ಸಿಕ್ಕಿದೆ. ಬಡ ಜನರು ಸಾಲ ಮಾಡಿದರೆ ಮನೆ ಬಿಟ್ಟು ಹೊರಡಬೇಕಾಗಿದೆ. ಜನರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಹಿಂದಿನ ಬಿಜೆಪಿ ಸರ್ಕಾರ ಸಾಲ ನೀಡುತ್ತಿತ್ತು. ಈಗ ಕಾಂಗ್ರೆಸ್ ಸರ್ಕಾರ ನಿಗಮಗಳ ಮೂಲಕ ಸಾಲ ನೀಡದೆ, ಜನರು ಅನಿವಾರ್ಯವಾಗಿ ಮೈಕ್ರೋ ಫೈನಾನ್ಸ್‌ಗಳ ಮೊರೆ ಹೋಗಿದ್ದಾರೆ ಎಂದು ದೂರಿದರು. ಮೈಕ್ರೋ ಫೈನಾನ್ಸ್‌ನಲ್ಲಿ 10 ಜನರ ಗುಂಪು ರಚಿಸಿ, ಪ್ರತಿಯೊಬ್ಬರಿಗೂ 50 ಸಾವಿರ ರೂ. ಸಾಲ ನೀಡುತ್ತಾರೆ. ಒಬ್ಬರಿಗೆ ಉಳಿದವರು ಶೂರಿಟಿ ಕೊಡಬೇಕಾಗುತ್ತದೆ. ಪ್ರತಿ ತಿಂಗಳು ಅಧಿಕ ಬಡ್ಡಿ ಕಟ್ಟಬೇಕಾಗುತ್ತದೆ. 50 ಸಾವಿರ ರೂ. ಸಾಲ ಪಡೆದರೆ 67 ಸಾವಿರ ರೂ. ವಾಪಸ್ ನೀಡಬೇಕು. ಎರಡು ತಿಂಗಳು ಕಟ್ಟಲಿಲ್ಲವೆಂದರೆ ರೌಡಿಗಳು ಮನೆಗೆ ಹೋಗಿ ಗಲಾಟೆ ಮಾಡುತ್ತಾರೆ. ಅನೇಕ ಹಳ್ಳಿಗಳಲ್ಲಿ ಜನರು ಮನೆ ಬಿಟ್ಟು ವಲಸೆ ಹೋಗಿದ್ದಾರೆ ಎಂದರು. ಕೋಟೆ ಲೂಟಿಯಾದ ನಂತರ ಬಾಗಿಲು ಹಾಕಿದರು ಎಂಬಂತೆ, ಸಿಎಂ ಸಿದ್ದರಾಮಯ್ಯ ಈಗ ಹೊಸ ಕಾನೂನು ತರಲು ಮುಂದಾಗಿದ್ದಾರೆ. ನೋಟಿಸ್ ಕೊಡದೆ ಜನರನ್ನು ಮನೆಯಿಂದ ಹೊರಕ್ಕೆ ಕಳುಹಿಸಲಾಗಿದೆ. ಇಂತಹ ಸಮಯದಲ್ಲಿ ಪೊಲೀಸರು ಕ್ರಮ ಕೈಗೊಳ್ಳಬೇಕಿತ್ತು. ಆದರೆ ಪೊಲೀಸರು ಕೂಡ ಇದಕ್ಕೆ ಸಹಕಾರ ನೀಡಿದ್ದಾರೆ. ಕಂಟ್ರೋಲ್ ರೂಮ್ ರೂಪಿಸಿದರೂ ಅದರಿಂದ ಜನರಿಗೆ ಪ್ರಯೋಜನವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಿಎಂ ಸಿದ್ದರಾಮಯ್ಯ ಸಾಲ ಮನ್ನಾ ಬಗ್ಗೆ ಹೇಳಿದ್ದರಿಂದ ಡಿಸಿಸಿ ಬ್ಯಾಂಕ್‌ಗಳಿಗೆ ನಷ್ಟವಾಗಿದೆ. ಸಾಲ ಪಡೆದವರು ಕಾಂಗ್ರೆಸ್ ಸರ್ಕಾರವನ್ನು ನಂಬಿಕೊಂಡು ಕೂತಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಾಂಗಲ್ಯ ಕಿತ್ತುಕೊಳ್ಳುತ್ತಾರೆಂದು ಪ್ರಧಾನಿ ಮೋದಿ ಹೇಳಿದ್ದು ಈಗ ನಿಜವಾಗಿದೆ. ಗೃಹಲಕ್ಷ್ಮಿಯ ಹಣ ಮಹಿಳೆಯರಿಗೆ ನಿಜವಾಗಿಯೂ ಸಿಕ್ಕಿದ್ದರೆ ಏಕೆ ಮೈಕ್ರೋ ಫೈನಾನ್ಸ್‌ಗೆ ಹೋಗುತ್ತಾರೆ ಎಂದು ಪ್ರಶ್ನೆ ಮಾಡಿದರು. ಸಿಎಂ ಸಿದ್ದರಾಮಯ್ಯ ಬಜೆಟ್ ಮಂಡಿಸಲು ಕೇಂದ್ರ ಸರ್ಕಾರ ಹಣ ಕೊಡಬೇಕಿದೆ. ಇದರ ಜೊತೆಗೆ ಬೆಂಗಳೂರಿಗೆ ಅನುದಾನ ನೀಡಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಕೇಳಿದ್ದಾರೆ. ಈಗ ಮೈಕ್ರೋ ಫೈನಾನ್ಸ್ ವಿರುದ್ಧ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳಬೇಕಂತೆ. ಎಲ್ಲವನ್ನೂ ಪ್ರಧಾನಿ ನರೇಂದ್ರ ಮೋದಿ ಮಾಡುವುದಾದರೆ ಇಲ್ಲಿ ಕಾಂಗ್ರೆಸ್ ಏಕೆ ಅಧಿಕಾರದಲ್ಲಿದೆ? ಎಂದು ಪ್ರಶ್ನೆ ಮಾಡಿದರು.

## ಸೂಚಿಸಿದ ಸದಸ್ಯರು

ವಕ್ಫ್ (ತಿದ್ದುಪಡಿ) ಮಸೂದೆ, 2024 ಅನ್ನು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಲೋಕಸಭೆಯಲ್ಲಿ ಮಂಡಿಸಿದ ನಂತರ ಆಗಸ್ಟ್ 8 ರಂದು ಅದನ್ನು ಮುಂದಿನ ಪರಿಶೀಲನೆಗಾಗಿ ಸಂಸತ್ತಿನ ಜಂಟಿ ಸಮಿತಿಗೆ ಕಳುಹಿಸಲಾಯಿತು. ವಕ್ಫ್ ಆಸ್ತಿಗಳನ್ನು ನಿಯಂತ್ರಿಸುವಲ್ಲಿ ಮತ್ತು ನಿರ್ವಹಿಸುವಲ್ಲಿನ ಸಮಸ್ಯೆಗಳು ಮತ್ತು ಸವಾಲುಗಳನ್ನು ಪರಿಹರಿಸಲು 1995 ರ ವಕ್ಫ್ ಕಾಯ್ದೆಗೆ ತಿದ್ದುಪಡಿ ತರುವ ಗುರಿಯನ್ನು ಈ ಮಸೂದೆ ಹೊಂದಿದೆ.

## ಓಟ್ ಮಾಡಲು ಮನವಿ

ತಾವು ಸ್ವೀಕರಿಸುವ ಒಟಿಪಿ ನಮೂದಿಸಿ, ನಂತರ Resend. OTP/ Submitted ಇದರಲ್ಲಿ submitt ಕ್ಲಿಕ್ ಮಾಡಿ, ಎಲ್ಲಾ ಸ್ತಬ್ಧಚಿತ್ರಗಳ ಮಾಹಿತಿ ಕಾಣುತ್ತದೆ.Lakkundi : cradle of stone craft ಕ್ಲಿಕ್ ಮಾಡಿ ತಮ್ಮ ಮತವನ್ನು ದಾಖಲಿಸಬಹುದು.ತಮ್ಮ ನೋಂದಾಯಿತ ಮೊಬೈಲ್ ಸಂಖ್ಯೆಯಿಂದ MYGOVPOLL 357037,12 ಟೈಪ್ ಮಾಡಿ 7738299899 ಓಟ ಮಾಡಬಹುದಾಗಿದೆ.

# ಅಂಧರ ಸೂಪರ್ ಲೀಗ್ ತಮಿಳುನಾಡು ತಂಡ ಚಾಂಪಿಯನ್



**ಬೆಂಗಳೂರು:**ಅಶ್ವಿನಿ ಅಂಗಡಿ ಟ್ರಸ್ಟ್ ಮತ್ತು ಭಾರತೀಯ ಅಂಧರ ಪುಟ್ ಬಾಲ್ ಸಂಸ್ಥೆಯ ಸಹಯೋಗದಲ್ಲಿ ಅಂತರಾಷ್ಟ್ರೀಯ ಸೂಪರ್ ಲೀಗ್ ಅಂಧರ ಪುಟ್ ಬಾಲ್ ಪಂದ್ಯಾವಳಿಯ ಫೈನಲ್ ದಿನದಾಟದ ಫಲಿತಾಂಶ.

ಪುರುಷರ ಫೈನಲ್ ಪಂದ್ಯದಲ್ಲಿ ತಮಿಳುನಾಡು ಮತ್ತು ಅರುಣಚಲ ಪ್ರದೇಶದ ನಡುವಿನ ಪಂದ್ಯದಲ್ಲಿ ತಮಿಳುನಾಡು ತಂಡ ಗೆದ್ದು ಮೊದಲನೇಯ ಬಹುಮಾನ 1ಲಕ್ಷ ರೂಪಾಯಿ ಪಾರಿತೋಷಕ ಮುಡಿಗೇರಿಸಿಕೊಂಡಿತು.

ಮಹಿಳೆಯ ವಿಭಾಗದಲ್ಲಿ ತಮಿಳುನಾಡು ಮತ್ತು ಕರ್ನಾಟಕ ನಡುವಿನ ಪಂದ್ಯದಲ್ಲಿ ತಮಿಳುನಾಡು ಮಹಿಳೆಯರ ತಂಡ ಜಯಭೇರಿ ಬಾರಿಸಿತು.

ಶಾಸಕರಾದ ಡಾ.ಸಿ.ಎನ್.ಅಶ್ವಥ್ ನಾರಾಯಣ್, ಆಶ್ವಿನಿ ಅಂಗಡಿರವರು ವಿಜೇತ ತಂಡಗಳಿಗೆ ನಗದು ಪುರಸ್ಕಾರ ಮತ್ತು ಪಾರಿತೋಷಕ ವಿತರಿಸಲಾಯಿತು.

## ಲಾಲ್ ಬಾಗ್ ನಲ್ಲಿ ಸಮುದಾಯ ಪ್ರಾಣಿಗಳ ಕುರಿತು ಜಾಗೃತಿ ಅಭಿಯಾನ:

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಸಮುದಾಯ ಪ್ರಾಣಿಗಳ ಕುರಿತು ನಾಗರೀಕರಲ್ಲಿ ಅರಿವು ಮೂಡಿಸಲು ಜಾಗೃತಿ ಅಭಿಯಾನವನ್ನು ನಡೆಸಲಾಗುತ್ತಿದ್ದು, ಲಾಲ್‌ಬಾಗ್‌ನಲ್ಲಿ ಅಭಿಯಾನ ನಡೆಸಲಾಯಿತು. ಬಿಬಿಎಂಪಿ ಪಶುಪಾಲನೆ ವಿಭಾಗದಿಂದ "ಪ್ರಾಣಿಗಳ ಆರೋಗ್ಯದ ಮೂಲಕ ಸಾರ್ವಜನಿಕ ಆರೋಗ್ಯ"ದ ಶೀರ್ಷಿಕೆಯಡಿ ಸಮುದಾಯ ಪ್ರಾಣಿಗಳ ಸಹಬಾಳ್ವೆ ಮೂಡಿಸುವ ನಿಟ್ಟಿನಲ್ಲಿ ಎಲ್ಲಾ ವಲಯಗಳಲ್ಲೂ ಜಾಗೃತಿ ಅಭಿಯಾನ ನಡೆಸಲಾಗುತ್ತಿದೆ. ್ದು, ಅದಕ್ಕಾಗಿ



ಸಹಸ್ರಾರು ಮಂದಿ ಸೇರುವ ಹಿನ್ನೆಲೆಯಲ್ಲಿ ಸಮುದಾಯ ಪ್ರಾಣಿಗಳ ಕುರಿತು ಜಾಗೃತಿ ಮೂಡಿಸಲಾಯಿತು.ಈ ವೇಳೆ ಪಶುಪಾಲನಾ ವಿಭಾಗದ ಸಹಾಯಕ ನಿರ್ದೇಶಕರಾದ ಡಾ. ಶ್ರೀನಾಥ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



**ಯಲಹಂಕ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಿಂಗನಾಯಕನಹಳ್ಳಿಯಲ್ಲಿ ಫೈವ್‌ಸ್ಟಾರ್ ನೂತನ ಪಾರ್ಕ್ ಹೋಟೆಲ್ ಉದ್ಘಾಟನೆ ಸಮಾರಂಭವನ್ನು ಯಲಹಂಕ ವಿಧಾನಸಭಾ ಕ್ಷೇತ್ರದ ಶಾಸಕ ವಿಶ್ವನಾಥ್ ಮತ್ತು ಮಾಜಿ ಮುಖ್ಯಮಂತ್ರಿ ಸದಾನಂದ ಗೌಡ ಅವರು ಉದ್ಘಾಟಿಸಿದರು. ಹೋಟೆಲ್ ಮಾಲೀಕ ರಮೇಶ್ ಈ ವೇಳೆ ಹಾಜರಿದ್ದರು.**

# ಕ್ಯಾಲೆಂಡರ್‌ನಲ್ಲಿ ಜಲಮಂಡಳಿಯ 60ವರ್ಷಗಳ ಸಾರ್ಥಕ ಸೇವೆಯ ಅನಾವರಣ

**ಬೆಂಗಳೂರು:** ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು 2025ರ ನೂತನ ವರ್ಷದ ಕ್ಯಾಲೆಂಡರ್ ಗಳನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೋಮವಾರ ಬಿಡುಗಡೆಗೊಳಿಸಿದರು.

ವಜ್ರಮಹೋತ್ಸವದ ಸಂಭ್ರಮದಲ್ಲಿರುವ ಬೆಂಗಳೂರು ಜಲಮಂಡಳಿಯು ಸಾರ್ಥಕ 60 ಸಾಧನೆ ಮತ್ತಷ್ಟು ಎಂಬ ಘೋಷವ್ಯಾಕ್ಯದೊಂದಿಗೆ ಕ್ಯಾಲೆಂಡರ್ ಹೊರತಂದಿದೆ.

ಸದರಿ ಕ್ಯಾಲೆಂಡರ್ ನಲ್ಲಿ ಬೆಂಗಳೂರು ಎಂಬ ಮಾಯಾನಗರಿಗೆ 1896ರಿಂದ ಹೆಸರಘಟ್ಟದಿಂದ ಹಾಗೂ 1933ರ ತಿಪ್ಪೆಗೊಂಡನಹಳ್ಳಿಯಿಂದ ನೀರು ಸರಬರಾಜುವಿನ ಅಪರೂಪದ ಚಿತ್ರಗಳು,

1964ರಲ್ಲಿ ಜಲಮಂಡಳಿ ಸ್ಥಾಪನೆ, ಕಾವೇರಿ ನದಿಯಿಂದ ಬೆಂಗಳೂರಿಗೆ ನೀರು ಪೂರೈಸುವ ಮೊದಲ ಹಂತದ ಯೋಜನೆಯಿಂದಿಡಿದು ಐದನೇ ಹಂತದ ಯೋಜನೆಯುವರೆಗಿನ, ಮಳೆ ನೀರು



ಸುಗ್ಗಿ ಕೇಂದ್ರ,ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳು ಅಪರೂಪದ, ಅತ್ಯಾಕರ್ಷಕ ಚಿತ್ರಗಳನ್ನು ಸದರಿ ಕ್ಯಾಲೆಂಡರ್ ಒಳಗೊಂಡಿದೆ. ಬೆಂಗಳೂರಿಗೆ ಸಮರ್ಪಕ ನೀರು ಸರಬರಾಜು ಮಾಡುವ ನಿಟ್ಟಿನಲ್ಲಿ ಇದುವರೆಗೆ ಕೈಗೊಂಡಿರುವ ಕ್ರಮಗಳನ್ನು ವಿವರಿಸಲಾಗಿದೆ. ಬಿಡುಗಡೆ ಮಾಡಿದ ನಂತರ ಕ್ಯಾಲೆಂಡರ್ ನೋಡಿ ಉಪಮುಖ್ಯಮಂತ್ರಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವ ಕೆ.ಸುಧಾಕರ್, ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಡಾ.ವಿ.ರಾಮ್ ಪ್ರಸಾತ್ ಮನೋಹರ್, ಮಂಡಳಿಯ ಮುಖ್ಯ ಆಡಳಿತಾಧಿಕಾರಿಗಳು ಹಾಗೂ ಕಾರ್ಯದರ್ಶಿಗಳಾದ ಮದನ್ ಮೋಹನ್, ಪ್ರಧಾನ ಮುಖ್ಯ ಎಂಜನಿಯರ್ ಸುರೇಶ,ಮುಖ್ಯ ಎಂಜನಿಯರ್ ಗಳು,ಜಲಮಂಡಳಿ ನೌಕರರ ಸಂಘದ ಅಧ್ಯಕ್ಷ ಬಿ.ಕೆ. ಮರಿಯಪ್ಪ,ಪ್ರಧಾನ ಕಾರ್ಯದರ್ಶಿ ಗೋವಿಂದರಾಜಲು ಸೇರಿದಂತೆ ಅಧಿಕಾರಿಗಳು ಇದ್ದರು.

ಇದೇ ಸಂದರ್ಭದಲ್ಲಿ ಜಲಮಂಡಳಿ ವತಿಯಿಂದ ಉಪಮುಖ್ಯಮಂತ್ರಿಗಳು ಕ್ರಿಕೆಟ್ ಪಂದ್ಯವೊಂದರಲ್ಲಿ ಬ್ಯಾಟ್ ಮಾಡುತ್ತಿರುವ ಅಪರೂಪದ ಅವರ ಚಿತ್ರವನ್ನು ನೆನಪಿನ ಕಾಣಿಕೆಯಾಗಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

# ವಾಲ್ಮೀಕಿ ಸಮುದಾಯಕ್ಕೆ ಮೆಡಿಕಲ್, ಇಂಜಿನಿಯರಿಂಗ್ ಕಾಲೇಜು ಬೇಕು



**ಬೆಂಗಳೂರು:** ವಾಲ್ಮೀಕಿ ಸಮುದಾಯದಲ್ಲಿ ಅತಿ ಹೆಚ್ಚು ಶಾಸಕರು, ಸಂಸದರಿದ್ದರೂ ಒಬ್ಬರೂ ಸಮುದಾಯದ ಶಿಕ್ಷಣದ ಕಡೆಗೆ ಗಮನಹರಿಸುತ್ತಿಲ್ಲ. ಸಮುದಾಯಕ್ಕೆ ಒಂದು ಮೆಡಿಕಲ್ ಕಾಲೇಜು ಹಾಗೂ ಒಂದು ಇಂಜಿನಿಯರಿಂಗ್ ಕಾಲೇಜು ಸ್ಥಾಪಿಸಬೇಕು. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಬರುವ ಬಜೆಟ್ ನಲ್ಲಿ ಕಾರ್ಯೋನ್ಮುಖವಾಗಬೇಕು ಎಂದು ಒಕ್ಕೊರಲಿನಿಂದ ಆಗ್ರಹಿಸಲಾಯಿತು. ವಾಲ್ಮೀಕಿ ಸಮುದಾಯ ವಿಧಾನ ಪರಿಷತ್ ಮಾಜಿ ಸದಸ್ಯ ವಿ.ಎಸ್. ಉಗ್ರಪ್ಪ ನೇತೃತ್ವದಲ್ಲಿ ಇಂದು ಶಾಸಕರ ಭವನದಲ್ಲಿ ವಿಶೇಷ ಸಭೆ ನಡೆಸಿತು. ಈ ಸಭೆಯಲ್ಲಿ ಬುದ್ದಿಜೀವಿಗಳು, ವಿವಿಧ ಪ್ರಾಧ್ಯಾಪಕರು ಸಾಹಿತಿಗಳು, ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು. ಸಭೆಯ ಬಳಿಕ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ವಿ.ಎಸ್. ಉಗ್ರಪ್ಪ, ಜಾತಿ ಸಮೀಕ್ಷೆ ಬಿಡುಗಡೆ ದಿನೇ ದಿನೆ ವಿಳಂಭವಾಗುತ್ತಿದೆ. ರಾಜ್ಯ ಸರ್ಕಾರ ತಕ್ಷಣ ಜಾತಿ ಸಮೀಕ್ಷೆ ಬಿಡುಗಡೆ ಮಾಡಬೇಕು. ಆ ಮೂಲಕ ಮುಂದಿನ ಬಜೆಟ್ ನಲ್ಲಿ ಜಾತಿ ಜನಸಂಖ್ಯೆಗೆ ಅನುಗುಣವಾಗಿ ಬಜೆಟ್ ಮಂಡನೆ ಮಾಡಬೇಕು. ವಾಲ್ಮೀಕಿ ಸಮುದಾಯ ಲೇಖನಿ ಸಂಸ್ಕೃತಿಯ ಸಮುದಾಯ. ಅನೇಕ ರಾಜಮನೆತನಗಳನ್ನು ಕಟ್ಟಿ ಬೆಳೆಸಿದವರು. ಆದರೆ ಈಗ ಅನೇಕ ವಿಚಾರಗಳಲ್ಲಿ ಹಿಂದುಳಿದಿದೆ. ಇದಕ್ಕೆ ಜನಪ್ರತಿನಿಧಿಗಳೂ ಕಾರಣ. ಆದರೆ ಇನ್ನು ಹಾಗಾಗಬಾರದು. ರಾಮಾಯಣದ ಮೂಲಕ ಇಡೀ ನಾಡಿಗೆ ಸಂಸ್ಕೃತಿ, ಸಂಸ್ಕಾರ ನೀಡಿದವರು ನಾವು. ನಮ್ಮ ವಾಲ್ಮೀಕಿ ಸಮುದಾಯ ಉತ್ತರ ಭಾರತದಲ್ಲಿ ಪರಿಶಿಷ್ಟ ಜಾತಿಯಲ್ಲಿದೆ. ಕರ್ನಾಟಕ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಎಸ್ಟಿ ಗೆ ಸೇರಿದೆ. ತೆಲಂಗಾಣ, ಆಂದ್ರದಲ್ಲಿ ಒಬಿಸಿ ಪಟ್ಟಿಯಲ್ಲಿದೆ. ಆದರೆ ಕರ್ನಾಟಕದಲ್ಲಿ ಈಗ ನಾಯಕ ಜನಂಗದ ಹೆಸರಿನಲ್ಲಿ ನಕಲಿ ಜಾತಿ ಪ್ರಮಾಣ ಪತ್ರಗಳು ಹೆಚ್ಚಾಗಿವೆ ಎಂದು ಹೇಳಿದರು.

ಇದಕ್ಕೂ ಮುನ್ನ ನಡೆದ ಸಮುದಾಯದ ಸಭೆಯಲ್ಲಿ ರಾಜಕಾರಣಿಗಳು ಹಾಗೂ ರಾಜನಹಳ್ಳಿ ಪ್ರಸನ್ನಾನಂದಪುರಿ ಸ್ವಾಮೀಜಿ ವಿರುದ್ಧ ಅನೇಕರು ಆಕ್ರೋಶ ವ್ಯಕ್ತಪಡಿಸಿದರು. ಪ್ರಸನ್ನಾನಂದಪುರಿ ಸ್ವಾಮೀಜಿ ಕೇವಲ ಜನರನ್ನು ದಿಕ್ಕುತಪ್ಪಿಸಿ ಜಾತ್ರಾ ಸಂಸ್ಕೃತಿ ಬಿತ್ತುತ್ತಿದ್ದಾರೆ. ಸಮಾಜದ ಏಳಿಗೆಯ ಬಗ್ಗೆ ಗಮನಹರಿಸುತ್ತಿಲ್ಲ. ರಾಜನಹಳ್ಳಿ ಮಠದಲ್ಲಿ ಇದ್ದ ಕಾಲೇಜುಗಳನ್ನೂ ಮುಚ್ಚಿಕೊಂಡಿದ್ದಾರೆ. ರಾಜನಹಳ್ಳಿ ಮಠದಲ್ಲಿ ಇರುವ ಬೆರಳೆಣಿಕೆಯ ಮಕ್ಕಳಿಗೆ ಸರಿಯಾದ ಶಿಕ್ಷಣ ವ್ಯವಸ್ಥೆಯಿಲ್ಲ.

ಅವರಿಗೆ ಮೂಲ ಸೌಲಭ್ಯಗಳನ್ನೂ ಒದಗಿಸುತ್ತಿಲ್ಲ. ಕೇವಲ ಹಣ ಮಾಡುವ ಖಯಾಲಿ ಶುರು ಮಾಡಿದ್ದಾರೆ. ಅನೇಕ ಕಡೆಗಳಲ್ಲಿ ಅವರ ವಿರುದ್ಧ ಧ್ವನಿ ಎತ್ತಿದರೆ ಯಾರು ಪ್ರಶ್ನಿಸುವರೋ ಅಂತಹವರ ವಿರುದ್ಧ ದೂರು ಕೊಡಿಸುವ ಕೆಲಸ ಮಾಡುತ್ತಿದ್ದಾರೆ. ಇದು ಸ್ವಾಮೀಜಿಯ ಸರಿಯಾದ ಕ್ರಮವಲ್ಲ ಎಂದು ಆಕ್ರೋಶ ಹೊರ ಹಾಕಿದರು. ಇದೇ ವೇಳೆ ಸರ್ಕಾರದಲ್ಲಿ ಖಅಕ / ಖಖಕ ಹಣವನ್ನು ಬೇರೆ ಕಾರ್ಯಗಳಿಗೆ ಬಳಸಿಕೊಳ್ಳಲಾಗುತ್ತಿದೆ. ಅದರ ವಿರುದ್ಧ ಯಾರೂ ಧ್ವನಿ ಎತ್ತುತ್ತಿಲ್ಲ. ಜನಪ್ರತಿನಿಧಿಗಳು ಸಮುದಾಯಕ್ಕೆ ಅನ್ಯಾಯವಾಗುತ್ತಿದ್ದರೂ ಅದರ ಬಗ್ಗೆ ತಲೆ ಕೆಡಿಸಿಕೊಳ್ಳುತ್ತಿಲ್ಲ. ಇದು ತೀರಾ ಅಪಾಯಕಾರಿ ಸ್ಥಿತಿ. ಆದ್ದರಿಂದ ಮುಂದಿನ ಬಜೆಟ್ ನಲ್ಲು ವಾಲ್ಮೀಕಿ ಸಮುದಾಯದ ಮಕ್ಕಳ ಶಿಕ್ಷಣದ ಕಡೆಗೆ ಹೆಚ್ಚು ಗಮನಹರಿಸಬೇಕು. ಬೆಂಗಳೂರು ಹಾಗೂ ಉತ್ತರ ಕರ್ನಾಟಕದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕೇಂದ್ರ ಸ್ಥಾಪಿಸಿ ಮಕ್ಕಳನ್ನು ಉತ್ತೇಜಿಸಬೇಕು. ಸ್ವಸಹಾಯ ಸಂಘಗಳು ಅಥವಾ ಸೊಸೈಟಿಯ ಮೂಲಕ ಸಮುದಾಯದ ಬಡ ಜನರಿಗೆ ಆರ್ಥಿಕ ಸಹಾಯ ಮಾಡಿ ಅವರನ್ನು ಆರ್ಥಿಕವಾಗಿ ಮೇಲೆತ್ತುವ ಕೆಲಸ ಮಾಡಬೇಕು ಎಂದು ಒತ್ತಾಯಿಸಿದರು. ನಂತರ ಸಭೆಯಲ್ಲಿ ಕೈಗೊಂಡ ಆರು ನಿರ್ಣಯಗಳನ್ನು ಮಾಧ್ಯಮಗಳಿಗೆ ವಿ.ಎಸ್. ಉಗ್ರಪ್ಪ ತಿಳಿಸಿದರು. ಈ ಎಲ್ಲ ನಿರ್ಣಯಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ತಿಳಿಸುವ ಕೆಲಸ ಮಾಡಲಾಗುತ್ತದೆ. ವಾಲ್ಮೀಕಿ ಸಮುದಾಯದ ಚಿಂತಕರ ಒಂದು ನಿಯೋಗದ ಮೂಲಕ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಈ ಎಲ್ಲ ಬೇಡಿಕೆಗಳನ್ನು ಮನವರಿಕೆ ಮಾಡಿಕೊಡಲಾಗುವುದಯ ಎಂದು ಹೇಳಿದರು.

**ಗಣಿದಣಿಗಳ ಬಣ್ಣ ಬಯಲಾಗುತ್ತಿದೆ:** ಗಣಿದಣಿಗಳ ಬಗ್ಗೆ ಹಿಂದೆ ನಾನೇ ವರದಿ ತಯಾರಿಸಿ ಸರ್ಕಾರಕ್ಕೆ ನೀಡಿದ್ದೆ. ಈಗ ಶ್ರೀರಾಮುಲು ಹಾಗೂ ಜನಾರ್ಧನ ರೆಡ್ಡಿ ಇಬ್ಬರೂ ಒಬ್ಬರ ಬಣ್ಣವನ್ನು ಇನ್ನೊಬ್ಬರು ಬಯಲು ಮಾಡುತ್ತಿದ್ದಾರೆ. ಇದು ಒಳ್ಳೆಯ ಬೆಳವಣಿಗೆ. ಜನತೆಗೆ ಸತ್ಯ ಗೊತ್ತಾಗುತ್ತಿದೆ. ಆದರೆ ಇದು ಸಂಪೂರ್ಣ ಬಿಜೆಪಿ ಒಳಗಿನ ಸಮಸ್ಯೆ. ಒಳಗಿನ ಜಗಳ ಈಗ ಹೊರಗೆ ಬಿದ್ದಿದೆ. ಅದರ ಬಗ್ಗೆ ಹೆಚ್ಚು ಗಮನಹರಿಸಬೇಕಾದ ಅಗತ್ಯವಿಲ್ಲ ಎಂದು ಉಗ್ರಪ್ಪನವರು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದರು. ಸಮಾನ ಮನಸ್ಕರ ಸಭೆಯಲ್ಲಿ ವಾಲ್ಮೀಕಿ ಮಹಾಸಭಾ ಮಾಜಿ ಅಧ್ಯಕ್ಷರಾದ ಎಂ. ನರಸಿಂಹಯ್ಯ, ರಾಜ್ಯದ ವಾಲ್ಮೀಕಿ ಸಮುದಾಯದ ವಿವಿಧ ಮಠಗಳ ಮಠಾಧೀಶರು, ವಿವಿಧ ಸಂಘಟನೆಗಳು ಮುಖಂಡರು, ಬುದ್ದಿಜೀವಿಗಳು, ಸಾಹಿತಿಗಳು ಉಪಸ್ಥಿತರಿದ್ದರು.

# ಆರನೇ ಭಾಗ್ಯ ಗೂಂಡಾಗಳ ಭಾಗ್ಯ"

**ಮೈಸೂರು :** ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಸರ್ಕಾರ ಬಂದ ಮೇಲೆ ಗೂಂಡಾಗಳಿಗೂ ಕೆಲಸ ಸಿಕ್ಕಿದ್ದು, ಅವರು ನಿಷ್ಠೆಯಿಂದ ಕೆಲಸ ಮಾಡುತ್ತಿದ್ದಾರೆ. ಸಿದ್ದರಾಮಯ್ಯನವರ ಆರನೇ ಭಾಗ್ಯ ಗೂಂಡಾಗಳ ಭಾಗ್ಯ ಎಂದು ಮೈಕ್ರೋ ಫೈನಾನ್ಸ್‌ನವರ ಕಿರುಕುಳದ ಬಗ್ಗೆ ವಿಪಕ್ಷ ನಾಯಕ ಆರ್ ಅಶೋಕ್ ವಾಗ್ದಾಳಿ ನಡೆಸಿದರು.

ನಗರದಲ್ಲಿ ಭಾನುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಅಜಾಗರೂಕತೆ ಇದೆ. ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದಿದ್ದು, ರಾಜ್ಯ ಸರ್ಕಾರ ದಿವಾಳಿಯಾಗಿದೆ. ರಾಷ್ಟ್ರೀಕೃತ ಬ್ಯಾಂಕ್ ಗಳಲ್ಲಿ ಸಾಲ ನೀಡ್ತಿಲ್ಲ. ಹೀಗಾಗಿ ಜನ ಮೈಕ್ರೋ ಫೈನಾನ್ಸ್‌ನಲ್ಲಿ ಸಾಲ ಮಾಡ್ತಿದ್ದಾರೆ ಎಂದರು.

ಬಿಜೆಪಿಯಲ್ಲಿ ಬಣ ಬಡಿದಾಟ ವಿಚಾರವಾಗಿ ಪ್ರತಿಕ್ರಿಯಿಸಿ, ಮಾಜಿ ಸಚಿವರಾದ ಬಿ ಶ್ರೀರಾಮುಲು ಹಾಗೂ ಗಾಲಿ ಜನಾರ್ದನ ರೆಡ್ಡಿ ಜೊತೆ ಮಾತನಾಡಿದ್ದೇನೆ. ಅವರಿಬ್ಬರೂ ಒಳ್ಳೆ ಸ್ನೇಹಿತರು. ಸಣ್ಣಪುಟ್ಟ ಗೊಂದಲದಿಂದ ಈ ರೀತಿ ಆಗಿದೆ. ಇಬ್ಬರೂ ಕೂಡ ಇದನ್ನು ಇಲ್ಲಿಗೇ ನಿಲ್ಲಿಸುತ್ತಾರೆ. ಶ್ರೀರಾಮುಲು ಜೊತೆ ಇವತ್ತು ಮಾತನಾಡಲು ಕರೆದಿದ್ದೆ. ಯಾರೋ ತೀರಿ ಹೋಗಿದ್ದಾರೆ ಅಲ್ಲಿಗೆ ಹೋಗ್ಬೇಕು ಎಂದು ಹೇಳಿದರು. ನಾಳೆ, ನಾಡಿದ್ದರಲ್ಲಿ ಎಲ್ಲವೂ ಕೂಡ ಸರಿಯಾಗುತ್ತೆ. ರೆಡ್ಡಿ ಮತ್ತು ಶ್ರೀರಾಮುಲು ಒಂದೇ ಜೀವ ಎರಡು ದೇಹ ಇದ್ದ ಹಾಗೆ. ಸಣ್ಣಪುಟ್ಟ ಭಿನ್ನಾಭಿಪ್ರಾಯದಿಂದ ಈ ರೀತಿ ಆಗಿದೆ ಎಂದು ಹೇಳಿದರು. ಹೈಕೋರ್ಟ್‌ನಲ್ಲಿ ಮುಡಾ ಪ್ರಕರಣ ವಿಚಾರಣೆ ಕುರಿತು ಮಾತನಾಡಿ, ನಾವು ಹೋರಾಟ ಮಾಡಿದ್ದು ಸಿಬಿಐಗೆ ಕೇಸ್ ವಹಿಸಿ ಅಂತ. ಲೋಕಾಯುಕ್ತ ತನಿಖೆ ಪಾರದರ್ಶಕದಿಂದ ಆಗಿಲ್ಲ. ಸಿದ್ದರಾಮಯ್ಯ ಪರವಾಗಿ ಲೋಕಾಯುಕ್ತ ಅಧಿಕಾರಿಗಳು ವರದಿ ಕೊಡ್ತಾರೆ. ಅಧಿಕಾರಿಗಳಿಗೆ ಪ್ರಮೋಶನ್ ಬೇಕು. ವಿಚಾರಣೆಗೆ ಸಿಎಂ ಟೈಮ್ ಫಿಕ್ಸ್ ಮಾಡಿಕೊಂಡು ಬರ್ತಾರೆ. ಟೈಮ್ ಫಿಕ್ಸ್ ಮಾಡಿಕೊಂಡು ಹೋಗ್ತಾರೆ ಅಂದ್ರೆ ಅರ್ಥ ಏನು? ಎಂದು ಪ್ರಶ್ನಿಸಿದರು.

ಸಿಎಂ ಸಿದ್ದರಾಮಯ್ಯ ಪರವಾಗಿ ಲೋಕಾಯುಕ್ತ ರಿಪೋರ್ಟ್ ಕೊಡ್ತಾರೆ ಬರೆದಿಟ್ಟುಕೊಳ್ಳಿ. ನಾನು ಈಗಲೇ ಹೇಳುತ್ತಿದ್ದೇನೆ. ಎಲ್ಲಿಂದಲೋ ಬಂದ ಇಡಿ ಇಲ್ಲಿ ಆಸ್ತಿ ಮುಟ್ಟುಗೋಲು ಹಾಕುತ್ತೆ, ಇಲ್ಲೇ ಇರುವಂತಹ ಲೋಕಾಯುಕ್ತ ಏಕೆ ಸುಮ್ಮನೆ ಕೂತಿದೆ ಎಂದು ಲೋಕಾಯುಕ್ತ ಪೊಲೀಸರ ವಿರುದ್ಧ ಅಶೋಕ್ ಗುಡುಗಿದರು.

# ಭಾರತ ಮುಂಚೂಣಿ ರಾಷ್ಟ್ರವಾಗಿ ಬೆಳೆಯುತ್ತಿದೆ

**ಶಿಡ್ಲಘಟ್ಟ:** ನೂರಾರು ಭಾಷೆ, ಸಾವಿರಾರು ಜಾತಿ, ಹತ್ತಾರು ಧರ್ಮಗಳಿರುವ ಈ ದೇಶವು ಅಂಬೇಡ್ಕರ್ ಅವರ ಸಂವಿಧಾನದಿಂದ ಒಗ್ಗೂಡಿದೆ. 140 ಕೋಟಿ ಜನ ಸಂಖ್ಯೆಯಿರುವ ಭಾರತವು ಜಗತ್ತಿನಲ್ಲಿ ಮುಂಚೂಣಿ ರಾಷ್ಟ್ರವಾಗಿ ಬೆಳೆಯುತ್ತಿದೆ ಎಂದು ಬಿಜೆಪಿ ಮುಖಂಡ ಸೀಕಲ್ ರಾಮಚಂದ್ರಗೌಡ ತಿಳಿಸಿದರು.

ನಗರದ ಮಯೂರ ವೃತ್ತದಲ್ಲಿನ ಬಿಜೆಪಿಯ ಸೇವಾ ಸೌಧ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ 76ನೇ ಗಣ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಇಂದಿನ ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಗೂ ಯುವ ಪೀಳಿಗೆಗೆ ಸ್ವಾತಂತ್ರ್ಯ ಹೋರಾಟ, ಬ್ರಿಟೀಷರ ವಿರುದ್ಧ ಸ್ವಾತಂತ್ರ್ಯ ಹೋರಾಟದಲ್ಲಿ ತನು, ಧನ ,ಮನ ಅರ್ಪಿಸಿ ಹುತಾತ್ಮರಾದ ದೇಶ ಪ್ರೇಮಿಗಳ ಬದುಕು, ಆದರ್ಶ, ಅವರ ತ್ಯಾಗದ ದೇಶ ಭಕ್ತಿಯ ಕುರಿತು ಅರಿವು ಮೂಡಿಸಬೇಕು ಎಂದರು. ದೇಶದ ಕೋಟ್ಯಾಂತರ ಕುಟುಂಬಗಳಲ್ಲಿ ಗಣ ರಾಜ್ಯೋತ್ಸವ ದಿನಾಚರಣೆ ಆಚರಿಸುವಂತಾಗಬೇಕು, ಅಂಬೇಡ್ಕರ್ ಅವರು ನಮಗೆ ನೀಡಿದ ಸಂವಿಧಾನದ ಆಶಯದಂತೆ ನಾವೆಲ್ಲರೂ ಪ್ರಾಮಾಣಿಕವಾಗಿ ನಡೆದುಕೊಳ್ಳುವಂತಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು.



ನೂರಾರು ಭಾಷೆ, ಸಾವಿರಾರು ಜಾತಿ, ಹತ್ತಾರು ಧರ್ಮಗಳ ಜನರಿದ್ದರೂ ಸಂವಿಧಾನದಡಿ ಎಲ್ಲರೂ ಸಾಮರಸ್ಯದಿಂದ ಬದುಕುತ್ತಿದ್ದೇವೆ. ಬಾಳುತ್ತಿದ್ದೇವೆ. ಅಷ್ಟರ ಮಟ್ಟಿಗೆ ನಮ್ಮ ಸಂವಿಧಾನವು ಜಗತ್ತಿನಲ್ಲೇ ಶ್ರೇಷ್ಠವಾಗಿದೆ. ಅದಕ್ಕೆ ಚ್ಯುತಿ ಬರುವಂತೆ ಎಂದಿಗೂ ನಾವು ನೀವು ನಡೆದುಕೊಳ್ಳಬಾರದು ಎಂದು ಮನವಿ ಮಾಡಿದರು.

ಇದೇ ವೇಳೆ ಮಹಾತ್ಮಗಾಂಧಿ,ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಮಿಸಿ ಪುಷ್ಪ ನಮನ ಸಲ್ಲಿಸಲಾಯಿತು,ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಸಿಹಿ ಹಂಚಲಾಯಿತು ಹಾಗು ನಗರದ ಕೋಟೆ ಸರ್ಕಲ್ ನಲ್ಲಿರುವ ಶ್ರೀ ವೇಣುಗೋಪಾಲ ಸ್ವಾಮಿ ದೇವಾಲಯದ ಆವರಣದಲ್ಲಿ ಸ್ವಚ್ಚತೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಗ್ರಾಮಾಂತರ ಮಂಡಲ ಅಧ್ಯಕ್ಷ ಸೀಕಲ್ ಆನಂದಗೌಡ, ನಿಕಟಪೂರ್ವ ಅಧ್ಯಕ್ಷ ಕಂಬದಹಳ್ಳಿ ಸುರೇಂದ್ರಗೌಡ, ನಗರ ಘಟಕದ ಅಧ್ಯಕ್ಷ ನರೇಶ್, ನಗರಸಭೆ ಸದಸ್ಯ ನಾರಾಯಣಸ್ವಾಮಿ, ಬಂಗಾರುರಾಮಕೃಷ್ಣಪ್ಪ, ಮಧು, ಅಭಿ, ಮೌನೀಶ್, ಸುಬ್ಬು, ಚಾತುರ್ಯ ಮತ್ತಿತರರು ಹಾಜರಿದ್ದರು.

# ಏಕತೆಯಿಂದ ಬಾಳುತ್ತಿರುವುದು ಈ ದೇಶದ ಹಿರಿಮೆ

**ಆನೇಕಲ್:** ಪ್ರಪಂಚದಲ್ಲೇ ಅತಿ ದೊಡ್ಡ ಗಣತಂತ್ರ ವ್ಯವಸ್ಥೆಯನ್ನು ಹೊಂದಿರುವ ಭಾರತ ದೇಶವು ಎಲ್ಲಾ ಕ್ಷೇತ್ರದಲ್ಲೂ ಪ್ರಗತಿಯತ್ತ ಮುನ್ನಡೆಯುತ್ತಿದೆ ಮತ್ತು ದೇಶದಲ್ಲಿ ಅನೇಕ ಜಾತಿ, ಮತ, ಪಂಥ, ಭಾಷೆ, ಹಲವಾರು ಪ್ರಾಂತ್ಯಗಳಿದ್ದರೂ ಸಹ ಎಲ್ಲರೂ ಏಕತೆಯಿಂದ ಬಾಳುತ್ತಿರುವುದು ಈ ದೇಶದ ಹಿರಿಮೆ ಎಂದು ಸರ್ಜಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಮತಾ ರಮೇಶ್ ತಿಳಸಿದರು.

ಅವರು ಸರ್ಜಾಪುರ ಪಟ್ಟಣದ ಡಾ॥ ಬಿ.ಆರ್ ಅಂಬೇಡ್ಕರ್ ಆಟದ ಮೈದಾನದಲ್ಲಿ ಸರ್ಜಾಪುರ ಗ್ರಾಮ ಪಂಚಾಯಿತಿ ವತಿಯಿಂದ ಆಯೋಜಿಸಿದ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೇರವೇರಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಈ ದೇಶದ ಮುಂಧಿನ ಭವಿಷ್ಯತ್ತಾಗಿದ್ದು ತಮ್ಮ ಜೀವನದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರವರು ನೀಡಿದ ಸಂವಿಧಾನದ ಆಶಯದಂತೆ ಸರ್ವರನ್ನು ಸಮಾನವಾಗಿ ಕಾಣವ ನಿಷ್ಕಲ್ಮಷ ಗುಣವನ್ನು ಬೆಳಸಿಕೊಳ್ಳಬೇಕು ಜೊತೆಗೆ ದೇಶಕ್ಕಾಗಿ ಮತ್ತು ನಾಡಿಗಾಗಿ ಮಡಿದ ವೀರರ ಬಗ್ಗೆ ಗೌರವ ಮತ್ತು ದೇಶಾಭಿಮಾನವನ್ನು ಬೆಳೆಸಿಕೊಳ್ಳಬೇಕು ಎಂದರು.

ಮಾಜಿ ಅಧ್ಯಕ್ಷ ಎಸ್.ಎಂ ಶ್ರೀನಿವಾಸ್ ಮಾತನಾಡಿ, ಬಲಿಷ್ಠ ಮತ್ತು ಸದೃಢ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೊಂದಿರುವ ದೇಶ ನಮ್ಮದಾಗಿದ್ದು. ವಿಶ್ವದಾದ್ಯಂತ ಎಲ್ಲಾ ರಂಗದಲ್ಲಿಯೂ ಸಹ ನಮ್ಮ ಮಣ್ಣಿನ ಮಕ್ಕಳು ಮನ್ನೆಡೆಯುತ್ತಿದ್ದು ಆದರಂತೆ ನಮ್ಮ ಯುವ ಸಮುದಾಯವು ದೇಶದ ಅಭಿವೃದ್ಧಿಗಾಗಿ ಉತ್ತಮ ಶಿಕ್ಷಣ ಪಡೆಯುವ ಮೂಲಕ ಭಾರತ ದೇಶವನ್ನು ಇನ್ನಾಷ್ಟು ಗಟ್ಟಿಗೊಳಿಸಬೇಕು ಎಂದರು.



ಮಾಜಿ ಉಪಾಧ್ಯಕ್ಷ ಎ.ಸತೀಶ್ ಕುಮಾರ್ ಮಾತನಾಡಿ, ಬ್ರಿಟೀಷರಿಂದ ಸ್ವಾತಂತ್ರ್ಯ ಪಡೆದ ಬಳಿಕ ನಮ್ಮ ರಾಷ್ಟ್ರ ತನ್ನದೇ ಆದ ಪ್ರಜಾಸತ್ತಾತ್ಮಕ ಗಣತಂತ್ರ ವ್ಯವಸ್ಥೆಯನ್ನು ರೂಢಿಸಿಕೊಂಡು ಸಂವಿಧಾನವನ್ನು ಜಾರಿಗೆ ತಂದ ದಿನವನ್ನು ನಾವು ಗಣರಾಜ್ಯೋತ್ಸವವಾಗಿ ಆಚರಿಸುತ್ತಿದ್ದೇವೆ. ಸಂವಿಧಾನದ ರಚನೆ ಮಾಡಲು ಡಾ॥ ಬಿ.ಆರ್ ಅಂಬೇಡ್ಕರ್ ರವರು ಹಗಲಿರುಳು ಶ್ರಮಿಸಿ ಸರ್ವ ಕಾಲಕ್ಕೂ ಉತ್ತಮವಾಗಿರುವ ಕರಡನ್ನು ನೀಡಿದ್ದು ಪ್ರತಿಯೋಬ್ಬರು ಸ್ಮರಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಸರ್ಜಾಪುರ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎಸ್.ವಿ ಶ್ರೀನಿವಾಸ್ ಬುಡಗಪ್ಪ, ಉಪಾಧ್ಯಕ್ಷರಾದ ಓಂ ಶಕ್ತಿ ಮಂಜುನಾಥ್, ಸದಸ್ಯರಾದ ಗಾಯಿತ್ರಿ ಪ್ರಸಾದ್, ಗಣೇಶ್, ಚಿನ್ನು ರಾಮಸ್ವಾಮಿ, ಕಲಾವತಿ ಮೂರ್ತಿಕುಮಾರ್, ಸರಸ್ವತಮ್ಮ, ಶಿವಕುಮಾರ್, ಪಿಡಿಒ ಸುಭಾನ್ ಖಾನ್, ಕಾರ್ಯದರ್ಶೀ ನಂಜಾರೆಡ್ಡಿ ಹಾಗೂ ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ಭಾರತ ಜಗತ್ತಿನ ಶಕ್ತಿಶಾಲಿ ದೇಶವಾಗುತ್ತಿದೆ

**ಕೆ.ಆರ್.ಪೇಟೆ.:** ಸ್ವಾತಂತ್ರ್ಯ ನಂತರ ಭಾರತ ದೇಶ ಜಗತ್ತಿನ ಅತಿ ಶಕ್ತಿಶಾಲಿ ದೇಶವಾಗುವತ್ತ ದಾಪುಗಾಲು ಹಾಕುತ್ತಿದೆ ಎಂದು ಶಾಸಕ ಹೆಚ್.ಟಿ.ಮಂಜು ಅಭಿಪ್ರಾಯಪಟ್ಟರು.

ಅವರು ಪಟ್ಟಣದ ನಾಲ್ವಡಿ ಕೃಷ್ಣರಾಜ ಒಡೆಯರ್ ತಾಲ್ಲೂಕು ಕ್ರೀಡಾಂಗಣದಲ್ಲಿ ಏರ್ಪಡಿಸಿದ್ದ 76ನೇ ಗಣರಾಜ್ಯೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಂವಿಧಾನವು 26 ಜನವರಿ 1950 ರಂದು ಜಾರಿಗೆ ಬಂದಿತು ಮತ್ತು ಈ ದಿನವನ್ನು ದೇಶದಾದ್ಯಂತ ಗಣರಾಜ್ಯೋತ್ಸವ ಎಂದು ಆಚರಿಸಲಾಗುತ್ತದೆ. ಪ್ರಪಂಚದ ಎಲ್ಲಾ ಲಿಖಿತ ಸಂವಿಧಾನಗಳಲ್ಲಿ ಭಾರತದ ಸಂವಿಧಾನವು ಅತ್ಯಂತ ಉದ್ದವಾದ ಹಾಗೂ ವಿಸ್ತಾರವಾದ, ಮತ್ತು ವಿವರವಾದ ಸಂವಿಧಾನವಾಗಿದೆ. ಗ ಣ ರಾ ಜ್ಯೋ ತ್ಸ ವ ವು ವಿವಿಧತೆಯಲ್ಲಿ ದೇಶದ ಏಕತೆಯನ್ನು ಬಿಂಬಿಸುವ ಪ್ರತಿಬಿಂಬದ ಸಂಕೇತವಾಗಿದ್ದು. ಗಣರಾಜ್ಯೋತ್ಸವದ ಪರೇಡ್ ಮತ್ತು ಆಚರಣೆಗಳು ಭಾರತೀಯರಾಗಿ ನಮ್ಮ ಗುರುತನ್ನು ಗೌರವಿಸಲು ಜೀವನದ ವಿವಿಧ ಹಂತಗಳನ್ನು ಒಟ್ಟಿಗೆ ತರುತ್ತವೆ, ದೇಶಭಕ್ತಿ ಮತ್ತು ಹೆಮ್ಮೆ: ಗಣರಾಜ್ಯೋತ್ಸವವು ಎಲ್ಲಾ ಭಾರತೀಯರು ಒಂದಾಗಲು ಮತ್ತು ತಮ್ಮ ರಾಷ್ಟ್ರದ ಬಗ್ಗೆ ಹೆಮ್ಮೆ ಪಡುವ ಕ್ಷಣವಾಗಿದೆ. ಪ್ರತಿಯೊಬ್ಬ ಭಾರತೀಯನ ಹೃದಯದ ಅಂತರಾಳದಲ್ಲಿ ದೇಶಾಭಿಮಾನ ಬಂದಾಗಲೇ ಗಣರಾಜ್ಯದ ಹಬ್ಬಕ್ಕೆ ಸಾರ್ಥಕತೆ ಸಿಗುತ್ತದೆ ಎಂದರು.



ಧ್ವಜಸಂದೇಶ ನೀಡಿ ಮಾತನಾಡಿದ ತಹಶೀಲ್ದಾರ್ ಲೆಫ್ಟಿನೆಂಟ್ ಕರ್ನಲ್ ಡಾ.ಎಸ್. ಯು.ಅಶೋಕ್ ಮಾತನಾಡಿ ಭಾರತದೇಶ ಇಂದು ಎಲ್ಲಾ ಕ್ಷೇತ್ರಗಳಲ್ಲಿಯೂ ವಿಶ್ವದ ಎಲ್ಲಾ ದೇಶಗಳಿಗೂ ಸರಿಸಮನಾಗಿ ನಿಲ್ಲುವ ಹಂತಕ್ಕೆ ಬೆಳೆದು ನಿಂತಿದೆ. ಪ್ರಪಂಚವೇ ಭಾರತದ ಕಡೆಗೆ ತಿರುಗಿ ನೋಡುವಂಥಹ ಹಂತಕ್ಕೆ ಬೆಳೆದು ನಿಂತಿದೆ. ಸಂವಿಧಾನದಲ್ಲಿ ಅಡಕವಾಗಿರುವ ಅಂಶಗಳು ಭಾರತೀಯರಿಗೆ ಸಮಾನ ಅವಕಾಶಗಳನ್ನು ಒದಗಿಸಿಕೊಡಲು ಕಾರಣವಾಗಿವೆ. ಗಣರಾಜ್ಯೋತ್ಸವವು ಎಲ್ಲಾ ಭಾರತೀಯರು ಒಂದಾಗಲು ಮತ್ತು ತಮ್ಮ ರಾಷ್ಟ್ರದ ಬಗ್ಗೆ ಹೆಮ್ಮೆ ಪಡುವ ಕ್ಷಣವಾಗಿದೆ. ಎಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಅಭಿನಂದಿಸಲಾಯಿತು. ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ದೇಶಭಕ್ತಿಯ ಸಂಕೇತಗಳಂತೆ ಮೂಡಿಬಂದವು.

ಕಾರ್ಯಕ್ರಮದಲ್ಲಿ ಪುರಸಭಾ ಉಪಾದ್ಯಕ್ಷೆ ಸೌಭಾಗ್ಯ ಉಮೇಶ್. ಪುರಸಭಾಸದಸ್ಯ ತಿಮ್ಮೆಗೌಡ. ತಾಪಂ ಇಓ ಸುಷ್ಮ. ಜಿಪಂ ಮಾಜಿ ಸದಸ್ಯ ರಾಮದಾಸ್. ನೀರಾವರಿ ಇಲಾಖೆಯ ಇಇ ಚಂದ್ರೇಗೌಡ. ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಶಶಿಧರ್. ಬಿಇಓ ತಿಮ್ಮೇಗೌಡ. ಸಿಡಿಪಿಓ ಅರುಣ್‌ಕುಮಾರ್. ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಆನಂದ್‌ಕುಮಾರ್. ಗೌರವಾದ್ಯಕ್ಷ ವಿಶ್ವನಾಥ್.ಪಿ. ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಹೆಚ್. ಎಸ್.ದೇವರಾಜು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಅಜಿತ್. ತಾಪಂ ಯೋಜನಾಧಿಕಾರಿ. ಶ್ರೀನಿವಾಸ್. ಪೋಲಿಸ್ ನಿರೀಕ್ಷಕಿ ಸುಮಾರಾಣಿ. ಬಿಸಿಎಂ ಅಧಿಕಾರಿ ವೆಂಕಟೇಶ್. ಅಗ್ನಿಶಾಮಕ ಠಾಣಾಧಿಕಾರಿ ಚಂದ್ರಶೇಖರ್. ಸೇರಿದಂತೆ ಹಲವರಿದ್ದರು.

# ಸಂವಿಧಾನ ಗೌರವಿಸುವುದು ಎಲ್ಲರ ಕರ್ತವ್ಯ

**ಚಾಮರಾಜನಗರ:** ಸಮಾಜದಲ್ಲಿ ಉನ್ನತವಾಗಿ ಬಾಳುವ ಹಕ್ಕು ನೀಡಿದ ಸಂವಿಧಾನವನ್ನು ಪ್ರತಿಯೊಬ್ಬರು ಗೌರವಿಸುವುದು ಕರ್ತವ್ಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ತಿಳಿಸಿದರು.

ಚಾಮರಾಜನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದ ವತಿಯಿಂದ ಆಯೋಜಿಸಿದ್ದ 76ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಕವಾಯಿತು ಪರಿವೀಕ್ಷಣೆ ಮಾಡಿ ಬಳಿಕ ವಿವಿಧ ತುಕಡಿಗಳಿಂದ ಗೌರವ ವಂದನೆ ಸ್ವೀಕರಿಸಿ ಮಾತನಾಡಿ, ಸ್ವಾತಂತ್ರ ಹೋರಾಟಗಾರರ ಅವಿರತ ಶ್ರಮದ ಫಲವಾಗಿ ನಮ್ಮ ದೇಶ ಬ್ರಿಟಿಷರ ಕಪಿಮುಷ್ಟಿಯಿಂದ 1947 ಆಗಸ್ಟ್ 15 ಸ್ವಾಂತ್ರಗೊಂಡಿದೆ. ಸ್ವಾತಂತ್ರ ನಂತರ ನಮಗೆ ನಮ್ಮದೇ ಆದಂತಹ ಸಂವಿಧಾನ ಇರಲಿಲ್ಲ. ಜನವರಿ 26, 1950 ರಲ್ಲಿ ಭಾರತವು ಗಣತಂತ್ರ ದೇಶ ಎಂದು ಘೋಷಿಸಿಕೊಂಡು ಇಂದಿಗೆ 75 ವರ್ಷಗಳು ಕಳೆದಿದೆ ಎಂದರು.

ನಮ್ಮದೇ ಆದ ಸಂವಿಧಾನವನ್ನು ಜಾರಿಗೊಳಿಸಿದ ದಿನವಾದ ಜನವರಿ 26ರಂದು ಗಣರಾಜ್ಯೋತ್ಸವ ದಿನವನ್ನಾಗಿ ನಾವೆಲ್ಲರೂ ಪ್ರತಿವರ್ಷವೂ ಹೆಮ್ಮೆಯಿಂದ ಆಚರಿಸುತ್ತಿದ್ದೇವೆ. ದೇಶಕ್ಕೆ ಲಿಖಿತ ಹಾಗೂ ಅತಿದೊಡ್ಡ ಸಂವಿಧಾನವನ್ನು ಅಳವಡಿಸಿಕೊಂಡ ಉದ್ದೇಶವು ದೇಶದ ಪ್ರತಿಯೊಬ್ಬ ನಾಗರೀಕರಿಗೂ ಮೂಲಭೂತ ಹಕ್ಕುಗಳಾದ ಸಮಾನತೆ, ಸ್ವಾತಂತ್ರ್ಯ, ಧರ್ಮ, ಸಾಂಸ್ಕೃತಿಕ, ಶಿಕ್ಷಕ ಮತ್ತು ಇತರ ಹಕ್ಕುಗಳನ್ನು ತಾರತಮ್ಯವಿಲ್ಲದೆ ನೀಡುವುದಾಗಿರುತ್ತದೆ ಸರ್ಮತೆಯನ್ನು ಕಾಪಾಡಲು ಸಂವಿಧಾನದ ಘನತೆ ಗೌರವವನ್ನು ಎತ್ತಿ ಹಿಡಿಯಬೇಕಾದದ್ದು ಪ್ರತಿಯೊಬ್ಬ ಪಡೆಯ ಕರ್ತವ್ಯವಾಗಿದೆ ಎಂದರು.

ಪೆರೇಡ್, ಪಥ ಸಂಚಲನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದವರಿಗೆ ಬಹುಮಾನ ವಿತರಣೆ ಮಾಡಲಾಯಿತು.

ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ಪ್ರವಾಸಿ ತಾಣಗಳು, ಆರಣ್ಯ ಸಂಪತ್ತನ್ನು ಹೊಂದಿರುವ ಚಾಮರಾಜನಗರ ಜಿಲ್ಲೆಗೆ ತನ್ನದೇ ಆದ ವೈಶಿಷ್ಟ್ಯವಿದೆ, ಜಾನಪದ ಕಲಾ ಪರಂಪರೆ, ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳಿವೆ ಎಂದರು.

ಈ ಸಂದರ್ಭದಲ್ಲಿ ಸಂಸದ ಸುನೀಲ್ ಬೋಸ್, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ , ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ವಿ.ಚಂದ್ರು, ಚುಡಾ ಅಧ್ಯಕ್ಷ ಮಹಮ್ಮದ್, ಆಸ್ಕರ್, ನಗರಸಭಾ ಅಧ್ಯಕ್ಷ ಸುರೇಶ್, ಉಪಾಧ್ಯಕ್ಷೆ ಮಮತಾ, ನಗರಸಭಾ ಸದಸ್ಯ ಬಂದ್ರಶೇಖರ್, ಜಿಲ್ಲಾಧಿಕಾರಿ ಶಿಲ್ಪನಾಗ ಜಿಪಂ ಸಿಇಒ ಮೋನಾ ರೋಡ್, ಎಸ್ಪಿ ಡಾ.ಬಿ.ಟಿ.ಕವಿತಾ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಸೇರಿದಂತೆ ಇತರರಿದ್ದರು.



# ಮಂಡಲಾಭಿಷೇಕ ಪೂಜಾ ಮಹೋತ್ಸವ



**ಶಿಡ್ಲಘಟ್ಟ:** ಬೆಂಡಿಗಾನಹಳ್ಳಿ ಗ್ರಾಮದಲ್ಲಿ ಶ್ರೀ ಅಭಯ ಆಂಜನೇಯಸ್ವಾಮಿ ದೇವಾಲಯದಲ್ಲಿ ಮಂಡಲಾಭಿಷೇಕ ಪೂಜಾ ಮಹೋತ್ಸವ ವೈಭವದಿಂದ ನಡೆಯಿತು.

ಮಂಡಲಾಭಿಷೇಕ ಪೂಜಾ ಮಹೋತ್ಸವದಲ್ಲಿ ಎಬಿಡಿ ಸಂಸ್ಥಾಪಕ ಅಧ್ಯಕ್ಷ ಬಿ.ವಿ.ರಾಜೀವ್ ಗೌಡ ಮಾತನಾಡಿ, ಬೆಳಿಗ್ಗೆಯಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಭಗವಂತನ ಕೃಪೆಗೆ ಪಾತ್ರರಾಗಿದ್ದಾರೆ, ಅವರ ಇಷ್ಟಾರ್ಥಗಳು ಸಿದ್ಧಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದರು.

ಮುಂದಿನ ದಿನಗಳಲ್ಲಿ ಭಗವಂತ ಎಲ್ಲರಿಗೂ ದೇವರ ಸೇವೆ ಮಾಡಲು ಶಕ್ತಿ ಕೊಡಲಿ ಹಾಗೆ ಸಮಸ್ತ ನಾಡಿನ ಜನತೆಗೆ ಶ್ರೀಅಭಯ ಆಂಜನೇಯಸ್ವಾಮಿ ಒಳ್ಳೇದು ಮಾಡಲಿ ಎಂದು ಕೋರಿದರು.

ದೇವಾಲಯದಲ್ಲಿ ಮಂಡಲಾಭಿಷೇಕ ಪೂಜಾ ಮಹೋತ್ಸವ ಕಾರ್ಯಕ್ರಮದಲ್ಲಿ ಬೆಳಗ್ಗೆಯಿಂದಲೇ ಸ್ವಸ್ತಿವಾಚನ, ದೇವತಾ ಪ್ರಾರ್ಥನೆ,ಯಜಮಾನ ಸಂಕಲ್ಪ, ಮಹಾಗಣಪತಿ ಪ್ರಾರ್ಥನೆ, ವಿಶ್ವಕ್ಷೇನ ಪೂಜೆ, ಪುಣ್ಯಾಹವಾಚನ, ಅಂಜನೇಯ ಸ್ವಾಮಿಯವರಿಗೆ ಪಂಚಾಮೃತ ಅಭಿಷೇಕ, ಅಗ್ನಿ ಪ್ರತಿಷ್ಠೆ, ಕಲಶಾರಾಧನೆ, ಮಹಾಗಣಪತಿ ಹೋಮ, ನವಗ್ರಹ ಹೋಮ, ಪಂಚಸೂಕ್ತ ಹೋಮ, ವಾಯುಸೂಕ್ತ, ಮನ್ಯುಸೂಕ್ತ ಹೋಮ, ಆಂಜನೇಯ ಸ್ವಾಮಿ ಗಾಯತ್ರಿ ಹೋಮ, ಧಾತಾದಿ ಸಾಮಾನ್ಯ ಹೋಮ, ಮಹಾಪೂರ್ಣಾಹುತಿ, ಕಲಶ ಅಭಿಷೇಕ, ಅಲಂಕಾರ, ನೈವೇದ್ಯ, ಮಹಾಮಂಗಳಾರತಿ, ತೀರ್ಥ, ಪ್ರಸಾದ ವಿನಿಯೋಗ ನಡೆಯಿತು.

ಪೂಜೆಯಲ್ಲಿ ಬಿ.ವಿ.ರಾಜೀವ್ ಗೌಡ ಅವರ ತಂದೆಯಾದ ವರದಪ್ಪ, ಮುಖಂಡರಾದ ಹೊಸಪೇಟೆ ಗುಡಿಯಪ್ಪ, ಬೆಂಡಿಗಾನಹಳ್ಳಿ ಮುನಿರಾಜು, ನಾರಾಯಣಸ್ವಾಮಿ, ಮುನೇಗೌಡ, ಡಾಲ್ಫಿನ್ ಶಾಲೆಯ ನಾಗರಾಜ್, ಗುತ್ತಿಗೆದಾರರಾದ ನಟರಾಜ್, ಕಾಳನಾಯಕನಹಳ್ಳಿ ಭೀಮೇಶ್, ರವಿ, ನಾಗರಾಜ್ (ಪಂಪ್), ತಮ್ಮಣ್ಣ, ಬೈರೇಗೌಡ, ಆನಂದ್ ಮುಂತಾದವರು ಪಾಲ್ಗೊಂಡಿದ್ದರು.

# ವಿಶ್ವಕ್ಕೆ ಮಾದರಿಯಾದ ಪ್ರಜಾಪ್ರಭುತ್ವ

ಕೊಪ್ಪಳ: ಭಾರತದ ಪ್ರಜಾಪ್ರಭುತ್ವ ಇಡೀ ವಿಶ್ವಕ್ಕೆ ಮಾದರಿಯಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್ ತಂಗಡಗಿ ಹೇಳಿದರು.

ಅವರು ಭಾನುವಾರ ಕೊಪ್ಪಳ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕೊಪ್ಪಳ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡಿದ್ದ 76ನೇ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಮಂಗಲ ಪಾಂಡೇ, ನೇತಾಜಿ ಸುಭಾಷಚಂದ್ರ ಭೋಸ್, ಭಗತ್‌ಸಿಂಗ್, ಮಹಾತ್ಮ ಗಾಂಧೀಜಿ, ಸರ್ದಾರ್ ವಲ್ಲಬ್ ಬಾಯ್ ಪಟೇಲ್ ಸೇರಿದಂತೆ ಇನ್ನೂ ಅನೇಕ ಮಹನೀಯರ ತ್ಯಾಗ, ಬಲಿದಾನದಿಂದ 1947ರ ಆಗಸ್ಟ್ 15 ರಂದು ನಮ್ಮ ದೇಶ ಸ್ವಾತಂತ್ರ್ಯ ಕಂಡಿತು. ಬಳಿಕ ಸಂವಿಧಾನ ಕರಡು ರಚನಾ ಸಮಿತಿ ಅಧ್ಯಕ್ಷರಾಗಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ ಅವಿರತ ಪರಿಶ್ರಮದ ಫಲವಾಗಿ 1950ರ ಜನವರಿ 26 ರಂದು ಭಾರತದ ಆಡಳಿತಕ್ಕೆ ಕೈಗನ್ನಡಿಯಾಗಿರುವ ಭಾರತದ ಸಂವಿಧಾನವನ್ನು ಅಂಗೀಕರಿಸಲಾಯಿತು. ಈ ದಿನವನ್ನು ನಾವು ಗಣರಾಜ್ಯ ದಿನವನ್ನಾಗಿ ಆಚರಿಸುತ್ತಾ ಬಂದಿದ್ದೇವೆ ಎಂದರು.

ಭಾರತೀಯರಾದ ನಾವು ದೇಶವನ್ನು ಸರ್ವಸ್ವತಂತ್ರ, ಸಮಾಜವಾದಿ, ಜಾತ್ಯಾತೀತ ಗಣರಾಜ್ಯವನ್ನಾಗಿ ರೂಪಿಸುವುದಾಗಿ ಘೋಷಿಸಿದ್ದು, ಇದಕ್ಕೆ ಪೂರಕವಾಗಿ ಸ್ವಾತಂತ್ರ್ಯ, ಸಮಾನತೆ ಹಾಗೂ ನ್ಯಾಯವನ್ನು ರಕ್ಷಿಸುವುದಾಗಿ ಸಂವಿಧಾನದ ಪ್ರಸ್ತಾವನೆಯಲ್ಲಿ ತಿಳಿಸಲಾಗಿದೆ. ನಮ್ಮ ಸಂವಿಧಾನವು ವಿಶ್ವದ ಬೃಹತ್ ಸಂವಿಧಾನವಾಗಿದ್ದು, 448 ವಿಧಿಗಳು, 12 ಪರಿಚ್ಛೇಧಗಳು, 103ಕ್ಕೂ ಹೆಚ್ಚು ಬಾರಿ ತಿದ್ದುಪಡಿಗಳನ್ನು ಒಳಗೊಂಡ ಸಂವಿಧಾನವಾಗಿರುತ್ತದೆ. ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯು ಇಡೀ ಜಗತ್ತಿಗೆ ಮಾದರಿ ಅನಿಸಿದೆ. ಎಂತಹ ಸವಾಲುಗಳು ಬಂದರೂ ಅವುಗಳನ್ನು ಎದುರಿಸಿ ನಮ್ಮ ಪ್ರಜಾಪ್ರಭುತ್ವದ ವ್ಯವಸ್ಥೆಯ ನೆಲೆಗಟ್ಟು ಭದ್ರವಾಗಿ ನಿಂತಿದೆ. ಇದಕ್ಕೆ ಸಂವಿಧಾನದ ಅಡಿಪಾಯ ಹಾಕಿದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರಿಗೆ ನಾವೆಲ್ಲರೂ ಚಿರ ಋಣಿಗಳಾಗಿರಬೇಕು ಎಂದು ಹೇಳಿದರು.



ಕೊಪ್ಪಳ ಜಿಲ್ಲೆಯ ತೊಗಲುಗೊಂಬೆಯಾಟ ಕಲಾವಿದೆ ಭೀಮವ್ವ ಶಿಳ್ಳೇಕ್ಯಾತರ ಅವರು 2025ನೇ ಸಾಲಿನ ಪದ್ಮಶ್ರೀ ಪ್ರಶಸ್ತಿಗೆ ಭಾವನಾಗಿರುವುದಕ್ಕೆ ಕೊಪ್ಪಳ ಜಿಲ್ಲೆ ಹಾಗೂ ನಮ್ಮ ಕರ್ನಾಟಕ ರಾಜ್ಯಕ್ಕೆ ಹೆಮ್ಮೆಯ ವಿಷಯವಾಗಿದೆ.

ಸುಮಾರ 7 ದಶಕಗಳಿಗೂ ಅಧಿಕ ಕಾಲ ತೊಗಲುಗೊಂಬೆಯಾಟವನ್ನೇ ತನ್ನ ಬದುಕಿನ ಹಾದಿಯಾಗಿಸಿಕೊಂಡು, ನೆಲದ ಕಲೆಯನ್ನು ದೇಶ-ವಿದೇಶಗಳಲ್ಲಿ ಪರಿಚಯಿಸಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೂಲಕ ರಾಜ್ಯ ಸರ್ಕಾರವು ಪದ್ಮಶ್ರೀ ಪ್ರಶಸ್ತಿಗಾಗಿ ಭೀಮವ್ವ ಶಿಳ್ಳೇಕ್ಯಾತರ ಅವರ ಹೆಸರನ್ನು ಕೇಂದ್ರಕ್ಕೆ ಶೀಫಾರಸ್ಸು ಮಾಡಿತ್ತು. ಇದರ ಜೊತೆಗೆ ಮುನಿರಾಬಾದ್ ಐ.ಆರ್.ಬಿ ಕಮಾಂಡೆಂಟ್ ಬಿ.ಎಂ.ಪ್ರಸಾದ್ ಅವರಿಗೆ ರಾಷ್ಟ್ರಪತಿಯವರ ವಿಶಿಷ್ಟ ಸೇವಾ ಪದಕ ಲಭಿಸಿದ್ದು, ಈ ಎರಡು ಸಾಧಕರಿಗೆ ಕೊಪ್ಪಳ ಜಿಲ್ಲೆ ಮತ್ತು ಈ ನಾಡಿನ ಜನತೆಯ ಪರವಾಗಿ ವಿಶೇಷ ಅಭಿನಂಧನೆಯನ್ನು ಸಲ್ಲಿಸುತ್ತೇನೆ ಎಂದರು.

ಸ್ವಾತಂತ್ರ್ಯ ಹೋರಾಟಗಾರ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಹುತಾತ್ಮ ದಿನದ ಪ್ರಯುಕ್ತ ಧ್ವಜಾರೋಹಣ ಕಾರ್ಯಕ್ರಮಕ್ಕೂ ಪೂರ್ವದಲ್ಲಿ ಸಚಿವರು ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು.

76ನೇ ಗಣರಾಜ್ಯೋತ್ಸವ ದಿನಾಚರಣೆ ನಿಮಿತ್ತ ಪೊಲೀಸ್ ಇಲಾಖೆ, ಸಶಸ್ತ್ರ ಮೀಸಲು ಪಡೆ, ಗೃಹ ರಕ್ಷಕದಳ, ಭಾರತ ಸೇವಾದಳ, ಎನ್.ಸಿ.ಸಿ, ಭಾರತ್ ಸ್ಕೌಟ್ಸ್ & ಗೈಡ್ಸ್ ತಂಡಗಳು ಜಿಲ್ಲಾ ಕ್ರೀಡಾಂಗಣದಲ್ಲಿ ಆಕರ್ಷಕ ಪಥಸಂಚಲನ ನಡೆಸಿ, ಸಚಿವರಿಗೆ ಗೌರವ ವಂದನೆ ಸಲ್ಲಿಸಿದವು.

ಸಮಾರಂಭದ ಅಧ್ಯಕ್ಷತೆಯನ್ನು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಶ್ರೀನಿವಾಸ್ ಗುಪ್ತಾ, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಕೊಪ್ಪಳ ಪ್ರಾದೇಶಿಕ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಾವ್ಯ ಚತಿರ್ವೇದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್ ಕುಮಾರ್, ಕೊಪ್ಪಳ ತಹಶಿಲ್ದಾರ ವಿಠ್ಠಲ ಚೌಗಲಾ ಸೇರಿದಂತೆ ವಿವಿಧ ಇಲಾಖೆಗಳ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಪ್ರಜಾಪ್ರಭುತ್ವ ಸದೃಢಗೊಳಿಸಲು ಎಲ್ಲರೂ ಮತ ಚಲಾಯಿಸುವಂತಾಗಬೇಕು:ಭವಾನಿ

ಚಿಕ್ಕಬಳ್ಳಾಪುರ: ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಸದೃಢಗೊಳಿಸಲು ದೇಶದ ಪ್ರತಿಯೊಬ್ಬ ಅರ್ಹ ಮತದಾರರೂ ಕಡ್ಡಾಯವಾಗಿ ಸಂವಿಧಾನ ನೀಡಿರುವ ಮತಾಧಿಕಾರವನ್ನು ಚಲಾಯಿಸಬೇಕು ಎಂದು ಚಿಕ್ಕಬಳ್ಳಾಪುರ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶೆ ನೇರಳೆ ವೀರಭದ್ರಯ್ಯ ಭವಾನಿ ಅವರು ತಿಳಿಸಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಜಿಲ್ಲಾ ಪಂಚಾಯತ್ ನ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ದೇಶದ ಸಮಗ್ರ ಅಭಿವೃದ್ಧಿ ಹಾಗೂ ಸದೃಢ ರಾಷ್ಟ್ರ ನಿರ್ಮಾಣಕ್ಕಾಗಿ ಪ್ರಜಾಪ್ರಭುತ್ವವನ್ನು ಬಲಪಡಿಸಲು ಪ್ರತಿಯೊಬ್ಬರೂ ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ಚಲಾಯಿಸಬೇಕು. ಒಂದು ಮತವೂ ಕೂಡಾ ಅತ್ಯಮೂಲ್ಯ ಎಂಬುದನ್ನು ಅನೇಕ ಚುನಾವಣೆಗಳಲ್ಲಿ ಅಭ್ಯರ್ಥಿಗಳ ಸೋಲು ಗೆಲುವುಗಳು ಸಾಬೀತು ಮಾಡಿವೆ.ಆದ್ದರಿಂದ ಮತದಾನದ ಮಹತ್ವವನ್ನು ಎಲ್ಲರೂ ಅರಿತುಕೊಳ್ಳಬೇಕು.ದೇಶಕ್ಕೆ ಬೇಕಾಗಿರುವ ಹಾಗೂ ಜನರಿಗೆ ಬೇಕಾಗಿರುವ ಬೇಡಿಕೆಗಳನ್ನು,

ಕೆಲಸಗಳನ್ನು ಮಾಡುವಂತಹ ಅಭ್ಯರ್ಥಿ ಗಳನ್ನು ಆಯ್ಕೆ ಮಾಡಿಕೊಳ್ಳಬೇಕೆಂದರೆ ನಮಗಿರುವ ಮತದಾನದ ಶಕ್ತಿಯನ್ನು ಎಲ್ಲರೂ ಚಲಾಯಿಸಬೇಕು,ಆದರೆ ಈವರೆಗೆ ನಡೆದಿರುವ ಬಹುತೇಕ ಚುನಾವಣೆಗಳನ್ನು ಗಮನಿಸಿದರೆ ಶೇ 60 ರಿಂದ 70ರಷ್ಟು ಜನರು ಮಾತ್ರ ಮತದಾನ ಮಾಡುತ್ತಿದ್ದಾರೆ. ಉಳಿದವರು ಚುನಾವಣಾ ಪ್ರಕ್ರಿಯೆಗಳಿಂದ ದೂರ ಉಳಿಯುತ್ತಿರುವುದು ಒಳ್ಳೆಯ ಬೆಳವಣಿಗೆಯಲ್ಲ. ನಾನು ಮತ ಚಲಾಯಿಸಿದ ಅಭ್ಯರ್ಥಿ ಸೋಲುತ್ತಾರೋ ಗೆಲ್ಲುತ್ತಾರೋ ಎಂಬ ಭಾವನೆ ಬಗ್ಗೆ ತಲೆ ಕೆಡಿಸಿಕೊಳ್ಳಬಾರದು,ನನ್ನ ಒಂದು ಮತದಿಂದ ಯಾವ ಪರಿಣಾಮ ಬೀರುವುದಿಲ್ಲ ಎಂಬ ನಿರ್ಲಕ್ಷ ಧೋರಣೆಗಳನ್ನು ಮತದಾರರು ಹೊಂದಬಾರದು.ನನಗೆ 18 ವರ್ಷ ತುಂಬಿ ಮತದಾರರ ಪಟ್ಟಿಗೆ ಸೇರ್ಪಡೆಯಾದ ಅಂದಿನಿಂದ ಇಂದಿನವರೆಗೆ ಪ್ರತಿ ಚುನಾವಣೆಗಳಲ್ಲೂ ತಪ್ಪದೆ ಮತದಾನ ಮಾಡಿದ್ದೇನೆ ಮುಂದೆಯೂ ಸಹ ನನ್ನ ಮತ ಅಧಿಕಾರವನ್ನು ಚಲಾಯಿಸುತ್ತೇನೆ, ಬನ್ನಿ ಎಲ್ಲರೂ ಮುಂಬರುವ ಎಲ್ಲ ಚುನಾವಣೆಗಳಲ್ಲಿ ಪಾಲ್ಗೊಂಡು ಮತ ಚಲಾಯಿಸುವ ಮೂಲಕ ಸುಸ್ಥಿರ,ಸುಭದ್ರ ಹಾಗೂ ಸರ್ವಾಂಗೀಣ ಅಭಿವೃದ್ಧಿಯ ದೇಶ ನಿರ್ಮಾಣದ ಭಾಗವಾಗೋಣ ಎಂದು ಕರೆ ನೀಡಿದರು.

ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮಾತನಾಡಿ, ದೇಶ ಅಭಿವೃದ್ಧಿ ಪಥದಲ್ಲಿ ಸಮರ್ಥವಾಗಿ ಮುನ್ನಡೆಯಲು ಅಗತ್ಯ ಕಾನೂನು ಕಟ್ಟಳೆಗಳನ್ನು ರೂಪಿಸಿ ಜಾರಿ ಮಾಡುವ ಯೋಗ್ಯ ಜನಪ್ರತಿನಿಧಿಗಳನ್ನು ಆಯ್ಕೆ ಮಾಡಲು ಹೆಣ್ಣು,ಗಂಡು ಅಥವಾ ಇತರೆ ಎಂಬ ತಾರತಮ್ಯವಿಲ್ಲದೇ ಸಂವಿಧಾನ 18 ವರ್ಷ ತುಂಬಿದ ಪ್ರತಿಯೊಬ್ಬರನ್ನೂ ಅರ್ಹ ಮತದಾರರೆಂದು ಪರಿಗಣಿಸಿ ಮತದಾನದ ಹಕ್ಕನ್ನು ನೀಡಿದೆ. ಮತದಾನದ ಹಕ್ಕು ದೊಡ್ಡ ಜವಾಬ್ದಾರಿ ಎಂಬುದನ್ನು ಮರೆಯಬಾರದು,ಇತ್ತೀಚಿನ ದಿನಗಳಲ್ಲಿ ಪುರುಷರಿಗಿಂತ ಮಹಿಳೆಯರೇ ಚುನಾವಣಾ ಪ್ರಕ್ರಿಯೆಗಳಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳುತ್ತಿದ್ದಾರೆ,ನಮ್ಮ ಜಿಲ್ಲೆಯಲ್ಲೂ ಸಹ ಮಹಿಳಾ ಮತದಾರರು ಮದರಪಟ್ಟಿಯಲ್ಲಿ ಅಧಿಕ ಸಂಖ್ಯೆಯಲ್ಲಿರುವುದು ಒಳ್ಳೆಯ ಬೆಳವಣಿಗೆ ಎಂದರು.

ರಾಷ್ಟ್ರೀಯ ಮತದಾನದ ಅಂಗವಾಗಿ ಜಿಲ್ಲಾಡಳಿತ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆ, ರಸಪ್ರಶ್ನೆ, ಬಿತ್ತಿ ಪತ್ರ ರಚನಾ ಸ್ಪರ್ಧೆ, ಚುನಾವಣಾ ಜಾಗೃತಿಯ ರೀಲ್ಸ್ ಸ್ಪರ್ಧೆ ಸೇರಿದಂತೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಜಿಲ್ಲೆಯ ವಿವಿಧ ಪ್ರೌಢಶಾಲೆ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಮತ್ತು ಉತ್ತಮವಾಗಿ ಕಾರ್ಯನಿರ್ವಹಿಸಿದ ಮತಗಟ್ಟೆ ಅಧಿಕಾರಿಗಳಿಗೆ (ಃಐಔ) ಪ್ರಶಂಸ ಪ್ರಮಾಣ ಪತ್ರಗಳನ್ನು ನೀಡಿ ಗೌರವಿಸಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿ ನ್ಯಾಯಾಧೀಶೆ ಶಿಲ್ಪ ಅವರು ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಮತದಾರರ ದಿನದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಈ ವೇಳೆ ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್, ಉಪವಿಭಾಧಿಕಾರಿ ಅಶ್ವಿನ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಅತೀಕ್ ಪಾಷ,ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.



## ಸಂವಿಧಾನ: ನಮ್ಮ ರಾಷ್ಟ್ರದ ಸರ್ವೋಚ್ಚ ಕಾನೂನು



**ಚಾಮರಾಜನಗರ:** ಚಾಮರಾಜನಗರ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಪಕ್ಷದ ಜಿಲ್ಲಾ ಸಮಿತಿಯ ವತಿಯಿಂದ 76 ನೇ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಜಿಲ್ಲಾ ಕಛೇರಿಯ ಮುಂಭಾಗದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಕಲೀಲ್ ಉಲ್ಲಾ ಅವರು ಮಾತನಾಡಿ, ಸಂವಿಧಾನ– ನಮ್ಮ ರಾಷ್ಟ್ರದ ಸರ್ವೋಚ್ಚ ಕಾನೂನು. ಅದಕ್ಕೆ ಎಲ್ಲರೂ ಗೌರವಿಸಬೇಕು, ಅದರ ನಿಯಮಗಳನ್ನು ಪಾಲಿಸಬೇಕು. ನಮ್ಮ ಸಂವಿಧಾನವು ರಷ್ಯಾ, ಬ್ರಿಟನ್, ಅಮೆರಿಕಾ, ಇತರೆ ದೇಶಗಳ ಸಂವಿಧಾನಗಳ ಅಂಶಗಳನ್ನು ಹೊಂದಿರುವ ಬೃಹತ್ ಸಂವಿಧಾನವಾಗಿದೆ. ಇದರ ಜಾರಿಗೆ ಮಹತ್ವದ ಕೊಡುಗೆ ನೀಡಿದವರು ಡಾ.ಬಿ.ಆರ್.ಅಂಬೇಡ್ಕರ್ ರವರು ಆದ್ದರಿಂದ ಅಂಬೇಡ್ಕರ್ ರನ್ನು ಭಾರತ ಸಂವಿಧಾನದ ಪಿತಾಮಹ ಎಂದು ಕರೆಯುತ್ತೇವೆ. ಅಂದಹಾಗೆ ಈ ದಿನಕ್ಕೆ ಅಷ್ಟೊಂದು ಮಹತ್ವ ಏಕೆ ಎಂದರೆ ಭಾರತದಲ್ಲಿ ಸಂವಿಧಾನ ಜಾರಿಗೆ ಬಂದ ಕಾರಣದಿಂದಲೇ ದೇಶದ ಪ್ರತಿ ಪ್ರಜೆಯೂ ಶಿಕ್ಷಣದ ಹಕ್ಕು, ಪ್ರತಿಯೊಬ್ಬರಿಗೂ ಬೇಕಾದ ಮೂಲಭೂತ ಹಕ್ಕು, ಧಾರ್ಮಿಕ ಹಕ್ಕು, ಇತರೆ ಹಲವು ಹಕ್ಕುಗಳು ದೊರೆತಿವೆ .ದೇಶದ ಪ್ರಜೆಗಳ ಸಾಂವಿಧಾನಿಕ ಹಕ್ಕುಗಳನ್ನು ಕುಸಿಯುವ ಪ್ರಯತ್ನ ಮಾಡುತ್ತಿರುವ ಎಲ್ಲಾ ದುಷ್ಟಶಕ್ತಿಗಳನ್ನು ಶಮನ ಮಾಡಿ ಹಸಿವು ಮತ್ತು ಭಯ ಮುಕ್ತ ರಾಷ್ಟ್ರ ನಿರ್ಮಾಣದ ಶಪಥ ಮಾಡೋಣ. ನಮಗೆ ಸಿಕ್ಕ ಸ್ವಾತಂತ್ರ್ಯವನ್ನು ಅನುಭವಿಸುವಾಗ, ಅದಕ್ಕಾಗಿ ತ್ಯಾಗ ಮಾಡಿದ ನಮ್ಮ ಪೂರ್ವಜರನ್ನು ಮರೆಯದಿರೋಣ ಎಂದು ತಿಳಿಸಿದರು.

ಪಕ್ಷದ ಜಿಲ್ಲಾ ಉಪಾಧ್ಯಕ್ಷ ಸಿ.ಕೆ.ನಯಾಜ್ ಉಲ್ಲಾ ಮಾತನಾಡಿ ಸ್ವಾತಂತ್ರ್ಯ, ಸಮಾನತೆ, ಏಕತೆ, ಭ್ರಾತೃತ್ವ, ಸಹೋದರತ್ವ, ನಮ್ಮ ಸಂವಿಧಾನದಲ್ಲಿ ಇರುವ ಪ್ರಮುಖ ಮೌಲ್ಯಗಳಾಗಿವೆ. ಇಂತಹ ಮೌಲ್ಯಗಳನ್ನು ನೀಡಿದ ಸಂವಿಧಾನ ಜಾರಿಗೆ ಬಂದ ದಿನದ ಈ ರಾಷ್ಟ್ರೀಯ ಹಬ್ಬವು ದೇಶದ ಏಕತೆ ಮತ್ತು ಹೆಮ್ಮೆಯನ್ನು ಕಾಪಾಡಿಕೊಳ್ಳಲು, ಎತ್ತಿಹಿಡಿಯಲು, ಮೆಲುಕು ಹಾಕಲು ನಮಗೆಲ್ಲರಿಗೂ ಅವಕಾಶವನ್ನು ನೀಡಿದೆ. ಇದೇ ಮಂತ್ರವನ್ನು ನಾವೆಲ್ಲರೂ ಸಹ ಜಪಿಸುತ್ತಾ, ಸದಾ ನೆನಪಿನಲ್ಲಿ ಇಟ್ಟುಕೊಂಡು, ಚೆನ್ನಾಗಿ ಓದಿ, ಈ ದೇಶವನ್ನು ಇನ್ನಷ್ಟು ಸುಸ್ಥಿತಿಯ ಕಡೆಗೆ ಕೊಂಡೊಯ್ಯುಬೇಕು ಎಂದು ತಿಳಿಸಿದರು.

ತಮಿಳು ಸಂಘದ ಜಿಲ್ಲಾಧ್ಯಕ್ಷರಾದ ಜಗದೀಶನ್ ರವರು ಮಾತನಾಡಿ ನಾವು ಈ ದೇಶದ ಉತ್ತಮ ಪ್ರಜೆಗಳೇ ಆಗಿದ್ದರೆ, ಉತ್ತಮ ಪ್ರಜೆಗಳು ಎಂದು ಎನಿಸಿಕೊಳ್ಳಬೇಕು ಎಂದರೆ ನಾವು ಈ ಸಂವಿಧಾನವನ್ನು ಗೌರವಿಸಬೇಕು. ಅದರಲ್ಲಿನ ನಿಯಮಗಳನ್ನು ಪಾಲಿಸಬೇಕು. ಮೂಲಭೂತ ಹಕ್ಕುಗಳಂತೆ, ದೇಶದ ಪ್ರಜೆಗಳಾಗಿ ಇದರಲ್ಲಿ ನೀಡಲಾದ ಮೂಲಭೂತ ಕರ್ತವ್ಯಗಳನ್ನು ಸಹ ಪಾಲಿಸಬೇಕು.ಭಾರತ ಜಾತ್ಯಾತೀತ ರಾಷ್ಟ್ರ. ಭಾರತದಲ್ಲಿ ಎಲ್ಲ ಪ್ರಜೆಗಳಿಗೂ ಸಮಾನ ಹಕ್ಕಿದೆ. ಶಿಕ್ಷಣ, ಸಮಾನತೆ, ವಾಕ್ ಸ್ವಾತಂತ್ರ್ಯ , ಇಚ್ಛೆಯ ಧರ್ಮವನ್ನು ಸ್ವೀಕರಿಸುವ ಹಕ್ಕುಗಳು, ಎಲ್ಲಿ ಬೇಕಾದರೂ ಜೀವಿಸುವ ಹಕ್ಕುಗಳ ಹೀಗೆ ಇಷ್ಟೆಲ್ಲ ಸ್ವತಂತ್ರ ಹಕ್ಕುಗಳಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಮಹೇಶ್ ,ಸಂಘಟನಾ ಕಾರ್ಯದರ್ಶಿ ನಸ್ರುಲ್ಲಾ ಖಾನ್,ಕಾರ್ಯದರ್ಶಿ ಜಬೀನೂರ್ ಜಿಲ್ಲಾ ಸಮಿತಿಯ ಸದಸ್ಯರಾದ ಸಿ.ಎಸ್.ಸೈಯದ್ ಆರೀಫ್,ಮೊಹಮ್ಮದ್ ಉಮ್ಮರ್ ಹಾಗೂ ಟೌನ್ ಕಾರ್ಯದರ್ಶಿ ಮೊಹಮ್ಮದ್ ತೌಸೀಫ್ ಹಾಜರಿದ್ದರು.

## ಅದ್ದೂರಿಯಾಗಿ 76ನೇ ಗಣರಾಜ್ಯೋತ್ಸವ ಆಚರಣೆ



**ಮುಳಬಾಗಿಲು:** 76ನೇ ಗಣರಾಜ್ಯೋತ್ಸವ ಆಚರಣೆ ನಗರದ ನೇತಾಜಿ ಕ್ರೀಡಾಂಗಣದಲ್ಲಿ ಅದ್ದೂರಿಯಾಗಿ ಆಚರಣೆ ಮಾಡಲಾಯಿತು ಮುಳಬಾಗಿಲು ಕ್ಷೇತ್ರದ ಶಾಸಕರಾದ ಸಮೃದ್ಧಿ ವಿ ಮಂಜುನಾಥ್ ಹಾಗೂ ತಹಸೀಲ್ದಾರ್ ವಿ ಗೀತಾ ರವರು ಧ್ವಜಾರೋಹಣ ನೆರವೇರಿಸಿದರು.

ಧ್ವಜಾರೋಹಣ ನೆರ್ವೇರಿಸಿದ ಶಾಸಕ ಸಮೃದ್ಧಿ ಮಂಜುನಾಥ ವಂದನೆ ಸ್ವೀಕರಿಸಿ ಪೆರೇಡ್ ಪರೀ ವೀಕ್ಷಣೆ ನಡೆಸಿದರು ಮಹಿಳಾ ಪೌರ ಕಾರ್ಮಿಕರು. ಸ್ಕೌಟ್ ಮತ್ತು ಗೈಡ್ಸ್. ಹಾಗೂ ವಿವಿಧ ಶಾಲಾ–ಕಾಲೇಜುಗಳ ಮಕ್ಕಳಿಂದ ಆಕರ್ಷಕ ಪಥಸಂಚಲನ ನಡೆಯಿತು .

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ನಿವೃತ್ತಿಯನ್ನು ಹೊಂದಿದ ಅಧಿಕಾರಿಗಳಿಗೂ ಸನ್ಮಾನಿಸಲಾಯಿತು. ಕ್ಷೇತ್ರದ ಶಾಸಕರಾದ ಸಮೃದ್ಧಿ ವಿ. ಮಂಜುನಾಥ್ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಭಾರತ ದೇಶದ ಪ್ರತಿಯೊಬ್ಬ ಪ್ರಜೆಗೂ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಾಮಾಜಿಕ ನ್ಯಾಯವನ್ನು ನೀಡಿದರು.

ಭಾರತ ದೇಶದ ಕಾನೂನು ಮತ್ತು ಹಕ್ಕುಗಳನ್ನು 145ಕೋಟಿ ದೇಶದ ಜನರಿಗೆ ನೀಡಿದರು ಭಾರತ ಸರ್ಕಾರದಲ್ಲಿ ಒಕ್ಕೂಟ ವ್ಯವಸ್ಥೆಯನ್ನು ಜಾರಿಗೆ ತರುವ ಮೂಲಕ ಶ್ರೀಮಂತ ರಾಜರ ಆಳ್ವಿಕೆಗೆ ನಾಂದಿ ಹಾಡಿದರು ಭಾರತ ದೇಶಕ್ಕೆ ಇಡೀ ಪ್ರಪಂಚದಲ್ಲಿಯೇ ಅತ್ಯುತ್ತಮವಾದ ಶ್ರೇಷ್ಠ ಸಂವಿಧಾನವನ್ನು ಬರೆದು ಕೊಟ್ಟರು ಹೆಣ್ಣು ಮಕ್ಕಳನ್ನು ಮನೆಯಿಂದ ಹೊರಗೆ ಕಳುಹಿಸದೆ ಹಲವಾರು ಕಟ್ಟುಪಾಡುಗಳನ್ನು ವಿಧಿಸಿ ಹೆಣ್ಣಿಗೆ ಶಿಕ್ಷಣ ಸ್ವಾತಂತ್ರ್ಯ ಸಮಾನತೆ ನೀಡದೇ ಮನೆಯಲ್ಲೇ ಕೂಡಿ ಹಾಕಿದ್ದ ಕಾಲದಲ್ಲಿ ಹೆಣ್ಣಿಗೆ ಕಡ್ಡಾಯ ಶಿಕ್ಷಣ ಸಮಾನ ಕಾನೂನುಗಳು ಗಂಡಿಗೆ ಸರಿ ಸಮನಾಗಿ ಜೀವಿಸುವ ಹಕ್ಕು ಸಂವಿಧಾನ ಬದ್ದ ಎಲ್ಲಾ ಹಕ್ಕುಗಳನ್ನು ಹೆಣ್ಣಿಗೆ ನೀಡಿದ್ದು ಈ ದಿನ ಪ್ರತಿಯೊಬ್ಬ ಹೆಣ್ಣು ಅಂಬೇಡ್ಕರ್ ರವರಿಗೆ ಸದಾ ಪೂಜೆ ಮಾಡಬೇಕು. ಡಾಕ್ಟರ್ ಬಿ ಆರ್. ಅಂಬೇಡ್ಕರ್ ಇಡೀ ಪ್ರಪಂಚದಲ್ಲಿ ಯಾರು ಓದಲಾಗದಂತ ಯಾರು ಪಾಸು ಮಾಡಲಾಗದಷ್ಟು ಪದವಿಗಳು ಸ್ನಾತಕೋತರ ಪದವಿಗಳನ್ನು ಪಡೆದಿದ್ದಾರೆ ನಮ್ಮ ಮನುಷ್ಯರನ್ನು ತುಂಬಾ ಕೀಳಾಗಿ ನೋಡುವ ಕಾಲದಲ್ಲಿ ಶೋಷಣೆ ದಬ್ಬಾಳಿಕೆ ಅನ್ಯಾಯ ಅಸಮಾನತೆ ಅಸ್ಪೃಶ್ಯತೆ ಜಾತಿ ವ್ಯವಸ್ಥೆಯ ವಿರುದ್ಧ ನಿರಂತರ ಹೋರಾಟ ಮಾಡಿದ ರೆಂದು ತಿಳಿಸಿದರು.



ಈ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿ ಹಾಗೂ ತಹಸಿಲ್ದಾರ್ .ವಿ ಗೀತಾ. ನಗರಸಭೆಯ ಪೌರಾಯುಕ್ತಾರಾದ ವಿ ಶ್ರೀಧರ್, ತಾಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಡಾ. ಸರ್ವೇಶ್. ನಾಗರ ಠಾಣೆಯ ಸಿಪಿಐ ರಾಜಣ್ಣ, ನಗರಸಭೆಯ ಅಧ್ಯಕ್ಷ ಶಬಾನಬೇಗಂ, ವಕೀಲರಾದ ಎಂ ಎಸ್ ಶ್ರೀನಿವಾಸ ರೆಡ್ಡಿ, ಕ್ಷೇತ್ರ ಶಿಕ್ಷಣಾಧಿಕಾರಿ ಮೋಹನ್ ಬಾಬು, ಭೂ ಮಜುರಾತಿ ಕಮಿಟಿ ಸದಸ್ಯ ಜಮುನಳ್ಳಿ ಕೃಷ್ಣಪ್ಪ, ರೋಟರಿ ಕ್ಲಬ್ ಅಧ್ಯಕ್ಷ ನಾಗವಾರ ಸತ್ಯಣ್ಣ, ಮಾಜಿ ಸದಸ್ಯರಾದ ಶಾಮೇಗೌಡ, ನಗರಸಭಾ ಸದಸ್ಯರಾದ ಸೋಮಣ್ಣ, ಮುನಿರಾಜು, ಪದ್ಮ ರಘು, ಜಬಿವುಲ್ಲಾ, ಅಕ್ಮಲ್ ಬೇಗ್, ಎಂ ಜೆ ಮಲ್ಲಿಕಾರ್ಜುನ್, ಬೆಸ್ಕಾಂ ಎಡಬ್ಲ್ಯೂ ರಮೇಶ್ ಹಾಗೂ ಇನ್ನು ಮುಂತಾದ ಮುಖಂಡರು ಹಾಜರಿದ್ದರು

## ಪ್ರತಿಯೊಂದು ಮಗುವಿಗೂ ಗುಣಮಟ್ಟದ ಶಿಕ್ಷಣ ಸಿಗಬೇಕು



**ಶಿಡ್ಲಘಟ್ಟ:** ಪ್ರತಿಯೊಂದು ಮಗುವಿಗೂ ಗುಣಮಟ್ಟದ ಶಿಕ್ಷಣ ಸಿಗಬೇಕು, ಶಿಕ್ಷಕರು ಮಕ್ಕಳಲ್ಲಿ ರಾಷ್ಟ್ರಪ್ರೇಮ ಮತ್ತು ರಾಷ್ಟ್ರದ ಹಿರಿಮೆಯ ಬಗ್ಗೆ ತಿಳುವಳಿಕೆ ನೀಡುವ ಜೊತೆಗೆ ದೇಶದ ಸಂವಿಧಾನದ ಉದ್ದೇಶಗಳು, ರಚನೆ ಮಾಡಿದ ರೀತಿ, ಅದನ್ನು ಅನಸರಿಸಬೇಕಾದಂತಹ ಅನಿವಾರ್ಯತೆ ಕುರಿತು ಮಕ್ಕಳಿಗೆ ಮನವರಿಕೆ ಮಾಡಿಕೊಡಬೇಕು ಎಂದು ಶಾಸಕ ಬಿ.ಎನ್.ರವಿಕುಮಾರ್ ತಿಳಿಸಿದರು.

ನಗರದ ನೆಹರೂ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ಹಾಗೂ ನಾಡ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಆಯೋಜನೆ ಮಾಡಲಾಗಿದ್ದ 76ನೇ ವರ್ಷದ ಗಣರಾಜ್ಯೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅತಿ ಹೆಚ್ಚು ಮಾನವ ಸಂಪನ್ಮೂಲವನ್ನು ಹೊಂದಿರುವ ಹಾಗೂ ಯುವಶಕ್ತಿಯಿಂದ ಕೂಡಿರುವ ರಾಷ್ಟ್ರವಾದ ಭಾರತವನ್ನು ಎಲ್ಲಾ ದೇಶಗಳಿಗಿಂತಲೂ ಅತ್ಯುನ್ನತ ಸ್ಥಿತಿಗೆ ಕರೆದೊಯ್ಯಬೇಕಾದಂತಹ ಹೊಣೆಗಾರಿಕೆ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

ತಂದೆ ,ತಾಯಿ,ಗುರು ಹಾಗು ಹಿರಿಯರೊಂದಿಗೆ ಗೌರವದಿಂದ ನಡೆದುಕೊಳ್ಳಬೇಕು ಹಾಗು ದೇಶಾಭಿಮಾನದ ಆತ್ಮ ಗೌರವ ಬೆಳೆಸಿಕೊಂಡು ಕೀರ್ತಿ ತರವಂತ ಕೆಲಸ ಈಗಿನ ಯುವ ಪೀಳಿಗೆ ಮಾಡಿದ್ದಲ್ಲಿ ದೇಶ ಅಭಿವೃದ್ಧಿ ಪಥದತ್ತ ಸಾಗಲಿದೆ ಎಂದರು.

ದೇಶದ ಪ್ರತಿಯೊಬ್ಬ ಪ್ರಜೆಗೂ ಸಮಾನ ಶಿಕ್ಷಣ, ಆರೋಗ್ಯ, ಮೂಲಭೂತ ಹಕ್ಕುಗಳು, ಶಿಕ್ಷಣ ಹಕ್ಕುಗಳು, ಧಾರ್ಮಿಕ ಹಕ್ಕುಗಳು ಇವೆಲ್ಲವೂ ಸಹ ಸಿಕ್ಕಿದ್ದು ನಮ್ಮ ಸಂವಿಧಾನದಿಂದ ಕಟ್ಟಕಡೆಯ ಪ್ರಜೆಗೂ ಸಮಾನ ಹಕ್ಕನ್ನು ನೀಡಿದ ಸಂವಿಧಾನ ಬರೆದ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಮಡಿದ ಮಹನೀಯರುಗಳಿಗೆ ನಾವು ಋಣಿಯಾಗಿರಬೇಕು ಎಂದರು.

ಅತಿ ಹೆಚ್ಚು ಮಾನವ ಸಂಪನ್ಮೂಲವನ್ನು ಹೊಂದಿರುವ ಹಾಗೂ ಯುವಶಕ್ತಿಯಿಂದ ಕೂಡಿರುವ ರಾಷ್ಟ್ರವಾದ ಭಾರತವನ್ನು ಎಲ್ಲಾ ದೇಶಗಳಿಗಿಂತಲೂ ಅತ್ಯುನ್ನತ ಸ್ಥಿತಿಗೆ ಕರೆದೊಯ್ಯಬೇಕಾದಂತಹ ಹೊಣೆಗಾರಿಕೆ ಪ್ರತಿಯೊಬ್ಬರ ಮೇಲಿದೆ ಎಂದು ನುಡಿದರು.

ತಹಶೀಲ್ದಾರ್ ಬಿ.ಎನ್.ಸ್ವಾಮಿ ಮಾತನಾಡಿ,ದೇಶದ ಪ್ರತಿಯೊಬ್ಬರೂ ನಾವು ಭಾರತೀಯರು ಎಂಬ ಭಾವನೆ ಬೆಳೆಸಿಕೊಂಡು ದೇಶವನ್ನು ಪ್ರಗತಿಯತ್ತ ಕೊಂಡೊಯ್ಯಬೇಕು,ಗಣತಂತ್ರ ವ್ಯವಸ್ಥೆಯ ಚೌಕಟ್ಟಿನಲ್ಲಿ, ಜಾತ್ಯತೀತ ಮೌಲ್ಯಗಳ ಪರಧಿಯಲ್ಲಿ ಮತ್ತು ಭ್ರಾತೃತ್ವದ ಬೆಸುಗೆಯಲ್ಲಿ ಸತ್ಯ,ನಿಷ್ಠೆ, ಪ್ರಾಮಾಣಿಕತೆಯಿಂದ ರಾಷ್ಟ್ರೀಯ ಭಾವೈಕ್ಯತೆಯನ್ನು ಸಾಕಾರಗೊಳಿಸಲು ಮತ್ತಷ್ಟು ಸಾಂಘಿಕವಾಗಿ ಶ್ರಮಿಸೋಣ,ಈ ಮೂಲಕ ಪ್ರಜಾಸತ್ತಾತ್ಮಕ ವ್ಯವಸ್ಥೆಯ ಆದರ್ಶಗಳನ್ನು ಎತ್ತಿ ಹಿಡಿಯೋಣ ಎಂದರು.

ಇದೇ ವೇಳೆ ವಿವಿಧ ಶಾಲಾ ಮಕ್ಕಳಿಂದ ಪಥಸಂಚಲನ ಹಾಗೂ ವಿವಿಧ ಮಾದರಿಯ ಕವಾಯತುಗಳನ್ನು ಆಯೋಜನೆ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಇಓ ಆರ್.ಹೇಮಾವತಿ, ಪೌರಾಯುಕ್ತ ಮಂಜುನಾಥ್, ನಗರಸಭೆ ಅಧ್ಯಕ್ಷ ಎಂ.ವಿ.ವೆಂಕಟಸ್ವಾಮಿ, ಕ್ಷೇತ್ರ ಶಿಕ್ಷಣಾಧಿಕಾರಿ ನರೇಂದ್ರಕುಮಾರ್, ಬಂಕ್ ಮುನಿಯಪ್ಪ, ತಾದೂರು ರಘು, ನವೀನ್,ಫುಡ್ ಮನೋಹರ್, ಸರ್ಕಲ್ ಇನ್ಸ್ ಪೆಕ್ಟರ್ ಶ್ರೀನಿವಾಸ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ವೆಂಕಟೇಶಮೂರ್ತಿ, ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ.ಎನ್.ಸುಬ್ಬಾರೆಡ್ಡಿ,ರಾಜ್ಯ ರೈತ ಸಂಘದ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಭೈರೇಗೌಡ,ರೈತ ಮುಖಂಡರಾದ ಬೆಳ್ಳೂಟಿ ಮುನಿಕೆಂಪಣ್ಣ, ರವಿಪ್ರಕಾಶ್, ಪ್ರತೀಷ್ ಮುಂತಾದವರು ಹಾಜರಿದ್ದರು.

## ರೈತ ನಾಯಕರ ಕೈ ಶುದ್ಧವಾಗಿರಲಿ



**ಕುಕನೂರು:** ರೈತ ಮುಖಂಡರು, ನಾಯಕರೆನಿಸಿಕೊಂಡವರು ಮೊದಲು ತಮ್ಮ ಕೈಗಳನ್ನು ಶುದ್ಧವಾಗಿಟ್ಟುಕೊಳ್ಳಬೇಕು, ಯಾವುದೇ ಫಲಾಪೇಕ್ಷೆ ಇಲ್ಲದೇ ರೈತರ ಸಮಸ್ಯೆಗಳ ಹೋರಾಟಕ್ಕೆ, ರೈತರ ಕಲ್ಯಾಣಕ್ಕಾಗಿ ರೈತ ಸಂಘವನ್ನು ಕಟ್ಟಿದ್ದೇನೆ, ನಾವು ಯಾವುದೇ ಪಕ್ಷಗಳ ದಾಸರಾಗಿರುವುದಿಲ್ಲ ರೈತರ ಬೆನ್ನೆಲುಬಾಗಿ ಕೆಲಸಮಾಡುತ್ತಿದ್ದೇವೆ ಎಂದು ರೈತ ಸಂಘ ಹಸಿರು ಸೇನೆಯ ರಾಜ್ಯಾದ್ಯಕ್ಷ ವಿ ಆರ್ ನಾರಾಯಣ ರೆಡ್ಡಿ ಹೇಳಿದರು.

ಕುಕನೂರು ಪಟ್ಟಣದ ಅನ್ನದಾನೇಶ್ವರ ಮಠದ ಆವರಣದಲ್ಲಿ ತಾಲೂಕು ಮತ್ತು ನಗರ ಘಟಕಗಳ ಉದ್ಘಾಟನೆ ಮತ್ತು ಪದಗ್ರಹಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಹಿಂದಿನ ಬಿಜೆಪಿ, ಈಗಿನ ಕಾಂಗ್ರೆಸ್ ಸರಕಾರದಲ್ಲಿ ತಮಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ಕೊಡುಲು ಮುಂದೆ ಬಂದರು ಅದನ್ನು ತಿರಸ್ಕಾರ ಮಾಡಿದ್ದೇನೆ, ನನಗೆ ರೈತರ ಪರ ಚಿಂತನೆಗಳು, ರೈತ ಪರ ಹೋರಾಟ ಮುಖ್ಯವಾಗಿದೆ. ರೈತರು ಆರ್ಥಿಕ ಪ್ರಗತಿ ಸಾಧಿಸಬೇಕು, ಅವರ ಸಮಸ್ಯೆ ಗಳಿಗೆ ಸ್ಪಂದಿಸಿ ಅವರ ಬೆಂಬಲವಾಗಿ ನಿಲ್ಲಬೇಕೆಂನ್ನುವುದು ನನ್ನ ನಿಲುವು ಎಂದು ವಿ ಆರ್ ನಾರಾಯಣ ರೆಡ್ಡಿ ಹೇಳಿದರು.

ತಾಲೂಕು ನೂತನ ಅಧ್ಯಕ್ಷ ದೇವಪ್ಪ ಸೊಬನದ್ ಮಾತನಾಡಿ, ಎಲ್ಲರ ಸಹಕಾರದಿಂದ ತಾಲೂಕಿನ ರೈತರ ಸಮಸ್ಯೆಗಳ ಪರಿಹಾರಕ್ಕೆ ಶ್ರಮಿಸುವುದಾಗಿ ತಿಳಿಸಿದರು.

ರಾಜ್ಯ ಉಪಾಧ್ಯಕ್ಷ ಅಂದಪ್ಪ ಹುರಳಿ ಮಾತನಾಡಿ, ರೈತರು ಯಾವುದೇ ಕಾರಣಕ್ಕೂ ತಮ್ಮ ಜಮೀನನ್ನು ವಿಂಡ್ ಪವರ್, ಸೋಲಾರ್ ವಿದ್ಯುತ್, ರಿಯಲ್ ಎಸ್ಟೇಟ್ ಗಳಿಗೆ ಮಾರಿಕೊಳ್ಳಬೇಡಿ, ಸಮಸ್ಯೆಗಳಾದರೆ ರೈತ ಸಂಘದ ಗಮನಕ್ಕೆ ತನ್ನಿ ಎಂದು ರೈತರಿಗೆ ಸಲಹೆಕೊಟ್ಟರು. ಇದಕ್ಕೂ ಮೊದಲು ಎತ್ತಿನ ಬಂಡಿ, ಟ್ರ್ಯಾಕ್ಟರ್ ಮೂಲಕ ನೂರಾರು ರೈತರೊಂದಿಗೆ ಮೆರವಣಿಗೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಅನ್ನದಾನಿಶ್ವರ ಮಠದ ಮಹಾದೇವ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಬಸಲಿಂಗಪ್ಪ ಬೂತೆ, ರಾಮಣ್ಣ ಬಜೇಂತ್ರಿ, ಶರಣಗೌಡ ಹೊರಪೇಟಿ, ಮಲ್ಲಿಕಾರ್ಜುನ ಬಿನ್ನಾಳ್, ವಜಿರ್ ಸಾಬ್ ತಳಕಲ್, ಅನೇಕರು ಉಪಸ್ಥಿತರಿದ್ದರು.

## ಗಣತಂತ್ರ ವ್ಯವಸ್ಥೆಯ ಆಸಯದಂತೆ ನಾವೆಲ್ಲ ನಡೆದುಕೊಳ್ಳೋಣ: ಆದರ್ಶ್



**ನಾಗಮಂಗಲ:** 26 ಭಾರತ ಗಣರಾಜ್ಯವಾಗಿ ಇಂದಿಗೆ 76 ವರ್ಷಗಳನ್ನು ಪೂರೈಸಿದ್ದು ನಾವೆಲ್ಲ ಈ ಗಣತಂತ್ರ ವ್ಯವಸ್ಥೆಯನ್ನು ಅಳವಡಿಸಿಕೊಳ್ಳೋಣವೆಂದು ರಾಷ್ಟ್ರೀಯ ಹಬ್ಬಗಳ ಆಚರಣೆಯ ಅಧ್ಯಕ್ಷರು ಹಾಗೂ ದಂಡಾಧಿಕಾರಿ ಆದರ್ಶ ಅವರು ಗಣರಾಜ್ಯೋತ್ಸವದ ಸಂದೇಶದಲ್ಲಿ ತಿಳಿಸಿದರು.

ಅವರು ನಾಗಮಂಗಲ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ತಾಲೂಕು ಆಡಳಿತ ವತಿಯಿಂದ ನಾಗಮಂಗಲದ ಶ್ರೀ ಸೌಮ್ಯ ಕೇಶವ ಸ್ವಾಮಿ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ನಡೆದಂತಹ 76ನೇ ವರ್ಷದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ಮಾಡಿ ಮಾತನಾಡಿದರು.

ನಮ್ಮ ಸಂವಿಧಾನವು ಎಲ್ಲರೂ ಸಮಾನರು, ಭ್ರಾತೃತ್ವ, ಧಾರ್ಮಿಕ ಸ್ವಾತಂತ್ರ್ಯ ದಂತಹ ತತ್ವಗಳನ್ನು ಹಾಗೂ ಜೀವಿಸುವಹಕ್ಕ ಅವಕಾಶವನ್ನು ಕಲ್ಪಿಸಿಕೊಟ್ಟಿದೆ. ಅದರ ಆಸೆಯಂತೆ ಇಂದು ನಾವು ಭಾರತದಲ್ಲಿ ಗಣತಂತ್ರ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಡೆದುಕೊಂಡು ಹೋಗುತ್ತಿದ್ದೇವೆ . ನಾವು ಸಂವಿಧಾನದಲ್ಲಿ ತಿಳಿಸಿದ ಆಶಯಗಳನ್ನು ಅಳವಡಿಸಿಕೊಂಡು ಅದರಂತೆ ನಡೆಯಬೇಕು. ಈ ಗಣರಾಜ್ಯೋತ್ಸವ ನಮ್ಮ ಗಣತಂತ್ರ ವ್ಯವಸ್ಥೆಯ ಪೂರಕ ರೂಪವನ್ನು ನೀಡಿದೆ ಇದಕ್ಕೆ ಸಂವಿಧಾನ ರಚನಾ ಸಮಿತಿಯ ಸದಸ್ಯರು ಹಾಗೂ ಡಾಕ್ಟರ್ ಬಿ ಆರ್ ಅಂಬೇಡ್ಕರ್ ರವರು ಶ್ರಮಿಸಿ ಒಂದು ಬೃಹತ್ ಸಂವಿಧಾನವನ್ನ ಈ ದೇಶಕ್ಕೆ ನೀಡಿದ್ದಾರೆ ಎಂದು ತಿಳಿಸಿದರು.

ಸ್ವತಂತ್ರ ಭಾರತಕ್ಕೊಂದು ಸದೃಢ ಸಂವಿಧಾನ ಕೊಟ್ಟಿದ್ದು ಡಾ.ಬಿ.ಆರ್. ಅಂಬೇಡ್ಕರ್. ಅವರ ಅವಿರತ ಪ್ರಯತ್ನದಿಂದ ನಮಗೆ ವಿಶ್ವದಲ್ಲಿಯೇ ಅತ್ಯಂತ ಸುದೀರ್ಘವಾದ, ಉತ್ತಮವಾದ ಲಿಖಿತ ಸಂವಿಧಾನ ದೊರೆತಿದ್ದು, ಭಾರತದ ಪ್ರಜೆಗಳಾದ ನಾವು ಭಾರತವನ್ನು ಒಂದು ಸಾರ್ವಭೌಮ, ಸಮಾಜವಾದಿ, ಪ್ರಜಾಸತ್ತಾತ್ಮಕ ಗಣರಾಜ್ಯವನ್ನಾಗಿ ರಚಿಸಲು ಸಮಸ್ತ ನಾಗರಿಕರಿಗೆ: ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ ವಿಚಾರ, ಅಭಿವ್ಯಕ್ತಿ, ಧರ್ಮಶ್ರದ್ಧೆ ಮತ್ತು ಸ್ವಾತಂತ್ರ್ಯ ಸ್ಥಾನಮಾನ ಮತ್ತು ಅವಕಾಶಗಳಲ್ಲಿ ಸಮಾನತೆ ದೊರೆಯುವಂತೆ ಮಾಡಲು ವ್ಯಕ್ತಿಗೌರವವನ್ನು, ರಾಷ್ಟ್ರದ ಏಕತೆ ಹಾಗೂ ಅಖಂಡತೆಯನ್ನು ಖಾತ್ರಿ ಮಾಡಿ ಅವರಲ್ಲಿ ಎಲ್ಲರಲ್ಲೂ ಭ್ರಾತೃತ್ವ ಭಾವನೆಯನ್ನು ವೃದ್ಧಿಗೊಳಿಸುವುದಕ್ಕಾಗಿ ದೃಢ ಸಂಕಲ್ಪ ಮಾಡಿ ನಮ್ಮ ಸಂವಿಧಾನ ಸಭೆಯಲ್ಲಿ 1949ನೇ ಇಸವಿಯ ನವೆಂಬರ್ ತಿಂಗಳ 26ನೇ ದಿನದಂದು ಈ ಸಂವಿಧಾನವನ್ನು ನಮಗೆ ನಾವೇ ಅರ್ಪಿಸಿಕೊಂಡು, ಅಂಗೀಕರಿಸಿ ಶಾಸನವಾಗಿ ವಿಧಿಸಿಕೊಂಡಿದ್ದೇವೆ. ಸಂವಿಧಾನದ ಪೂರ್ವ ಪ್ರಸ್ತಾವನೆಯಲ್ಲಿರುವ ಮೌಲ್ಯಯುತ ಅಂಶಗಳನ್ನು ದೇಶದ ಪ್ರತಿಯೊಬ್ಬ ನಾಗರಿಕನೂ ಅರ್ಥಮಾಡಿಕೊಳ್ಳ ಬೇಕೆಂದು ಪ್ರಧಾನ ಭಾಷಾ ಮಾಡಿದ ವಕೀಲರಾದ ರಮೇಶ್ ಗೌಡರವರು ತಿಳಿಸಿದರು

76ನೇ ಗಣರಾಜ್ಯೋತ್ಸವದ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರಾದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ದೇ. ರಾ.ಜಗದೀಶ್. ಜನಪದ ಕ್ಷೇತ್ರದಲ್ಲಿ ಅನಂತ್ ಕುಮಾರ್. ಕೃಷಿ ಕ್ಷೇತ್ರದಲ್ಲಿ ಸುರೇಶ್. ತೋಟಗಾರಿಕೆ ಕ್ಷೇತ್ರದಲ್ಲಿ ಮಲ್ಲಿಕಾರ್ಜುನ್. ರಂಗಭೂಮಿ ಕ್ಷೇತ್ರದಲ್ಲಿ ಲಕ್ಷ್ಮಣಗೌಡ. ಅವರುಗಳನ್ನು ಸೇವೆ ಸಾಧನೆಯನ್ನು ಗಮನಿಸಿ ಗಣರಾಜ್ಯೋತ್ಸವದ ಸನ್ಮಾನವನ್ನು ತಾಲೂಕು ಆಡಳಿತ ವತಿಯಿಂದ ಇದೇ ಸಂದರ್ಭದಲ್ಲಿ ಮಾಡಲಾಯಿತು.

ಇದೇ ಸಂದರ್ಭದಲ್ಲಿ ವಿವಿಧ ಶಾಲಾ ಮಕ್ಕಳಿಂದ ದೇಶಭಕ್ತಿಯ ಹಾಡುಗಳಿಗೆ ನೃತ್ಯ ಸಂಯೋಜನೆ ಮಾಡಿ ಸಾರ್ವಜನಿಕರಲ್ಲಿ ಪ್ರಶಂಸೆಗೆ ಪಾತ್ರವಾಗಿದ್ದು ವಿಶೇಷವಾಗಿತ್ತು.

ಸಮಾರಂಭದಲ್ಲಿ ತಾಲೂಕು ಪಂಚಾಯತ್ ಅಧಿಕಾರಿ ಸತೀಶ್ ಕುಮಾರ್ ರವರು, ನಾಗಮಂಗಲ ಆರ್‌ಟಿಓ ಅಧಿಕಾರಿಗಳಾದ ಮಲ್ಲಿಕಾರ್ಜುನ್, ಕ್ಷೇತ್ರ ಶಿಕ್ಷಣಾಧಿಕಾರಿ ಯೋಗೇಶ್, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಮಂಜುನಾಥ್, ನರೇಗಾ ಯೋಜನೆ ಸಹಾಯಕ ನಿರ್ದೇಶಕ ಮೇನಕಾ, ತಾಲೂಕಿನ ಎಲ್ಲಾ ಇಲಾಖೆಯ ಅಧಿಕಾರಿಗಳು, ಕಂದಾಯ ಇಲಾಖೆ ಅಧಿಕಾರಿಗಳು ಹಾಜರಿದ್ದರು. ಪುರಸಭೆ ಪಂಚಾಯತಿಯ ಚುನಾಯಿತ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು

## ಜ.26 ಭಾರತೀಯರ ಪಾಲಿಗೆ ಅತ್ಯಂತ ಮಹತ್ವ ದಿನ

**ಚೇಳೂರು:** ರಾಜ್ಯ ಪ್ರಭುತ್ವವು ಅಂತ್ಯವಾಗಿ ಭಾರತದಲ್ಲಿ ಸಂವಿಧಾನವನ್ನು ಸ್ಥಾಪಿಸಿದ ದಿನವೇ ಜನವರಿ 26. ದೇಶದ ಸಂವಿಧಾನ ಅಸ್ತಿತ್ವಕ್ಕೆ ಬಂದ ದಿನವಾಗಿದ್ದು ಭಾರತೀಯರಿಗೆ ಹೆಮ್ಮೆಯ ದಿನವಾಗಿದೆ. 26 ಜನವರಿ 1950 ರಂದು ಸಂವಿಧಾನವನ್ನು ಸ್ಥಾಪನೆ ಮಾಡಲಾಗಿದ್ದು, ಇದರ ಗೌರವಾರ್ಥವಾಗಿ ಗಣರಾಜ್ಯೋತ್ಸವವನ್ನು ಆಚರಿಸಲಾಗುತ್ತದೆಂದು ಚೇಳೂರು ತಾಲ್ಲೂಕು ತಾಹಸೀಲ್ದಾರ್ ಶ್ರೀನಿವಾಸಲು ನಾಯ್ಡು ತಿಳಿಸಿದರು

ಚೇಳೂರು ಪಟ್ಟಣದ ಕೆ.ಪಿ.ಎಸ್.ಸಿ.ಶಾಲಾ ಅವರಣದಲ್ಲಿ ಈ ವರ್ಷ 76ನೇ ಗಣರಾಜ್ಯೋತ್ಸವ ದಿನವನ್ನು ಆಚರಿಸಲಾಗುತ್ತಿದೆ. ಭಾರತೀಯರ ಹೆಮ್ಮೆಯ ದಿನವಾದ ಗಣರಾಜ್ಯ ದಿನದ ಇತಿಹಾಸ ಸೇರಿದಂತೆ ಭಾರತವು ಪ್ರತಿ ವರ್ಷ ಜನವರಿ 26ರಂದು ಗಣರಾಜ್ಯೋತ್ಸವ ದಿನವನ್ನು ಅದ್ದೂರಿಯಾಗಿ ಆಚರಿಸುತ್ತದೆ. ಈ ವರ್ಷ ಭಾರತವು 76ನೇ ವರ್ಷದ ಗಣರಾಜ್ಯೋತ್ಸವದ ಸಂಭ್ರಮದಲ್ಲಿದ್ದು, ಈಗಾಗಲೇ ಈ ದಿನದ ಗಣರಾಜ್ಯೋತ್ಸವ ಭಾರತೀಯರ ಪಾಲಿಗೆ ಅತ್ಯಂತ ಮಹತ್ವ ದಿನವಾಗಿದೆ ಎನ್ನುವುದರಲ್ಲಿ ಎರಡು ಮಾತಿಲ್ಲ. ಆಗಸ್ಟ್ 15 ಬ್ರಿಟಿಷರಿಂದ ತಾತ್ವಿಕವಾಗಿ ಸ್ವಾತಂತ್ರ್ಯ ಪಡೆದುಕೊಂಡ ದಿನವಾದರೆ, 1950 ಜನವರಿ 26 ರಂದು ಭಾರತ ತನ್ನ ಸಂವಿಧಾನವನ್ನು ಜಾರಿಗೊಳಿಸಲಾಗಿದ್ದು, ರಾಜಪ್ರಭುತ್ವವನ್ನು ತ್ಯಜಿಸಿ ಪ್ರಜಾಪ್ರಭುತ್ವವು ಅಸ್ಥಿತ್ವಕ್ಕೆ ಬಂದ ದಿನವಾಗಿದೆ. ಹೀಗಾಗಿ ಈ ದಿನವು ಸ್ವಾತಂತ್ರ್ಯ ದಿನದಷ್ಟೇ ಸಂಭ್ರಮದಿಂದ ಗಣರಾಜ್ಯೋತ್ಸವವನ್ನು ಆಚರಿಸಲಾಗುತ್ತದೆ.

ಭಾರತವು ಪ್ರತಿ ವರ್ಷ ಜನವರಿ 26ರಂದು ಗಣರಾಜ್ಯೋತ್ಸವ ದಿನವನ್ನು ಅದ್ದೂರಿಯಾಗಿ ಆಚರಿಸುತ್ತದೆ. ಈ ವರ್ಷ ಭಾರತವು 76ನೇ ವರ್ಷದ ಗಣರಾಜ್ಯೋತ್ಸವದ ಸಂಭ್ರಮದಲ್ಲಿದ್ದು, ಈಗಾಗಲೇ ಗಣರಾಜ್ಯೋತ್ಸವ ಭಾರತೀಯರ ಪಾಲಿಗೆ ಅತ್ಯಂತ ಮಹತ್ವ ದಿನವಾಗಿದೆ ಎನ್ನುವುದರಲ್ಲಿ ಎರಡು ಮಾತಿಲ್ಲ. ಆಗಸ್ಟ್ 15 ಬ್ರಿಟಿಷರಿಂದ ತಾತ್ವಿಕವಾಗಿ ಸ್ವಾತಂತ್ರ್ಯ ಪಡೆದುಕೊಂಡ ದಿನವಾದರೆ, 1950 ಜನವರಿ 26 ರಂದು ಭಾರತ ತನ್ನ ಸಂವಿಧಾನವನ್ನು ಜಾರಿಗೊಳಿಸಲಾಗಿದ್ದು, ರಾಜಪ್ರಭುತ್ವವನ್ನು ತ್ಯಜಿಸಿ ಪ್ರಜಾಪ್ರಭುತ್ವವು ಅಸ್ತಿತ್ವಕ್ಕೆ ಬಂದ ದಿನವಾಗಿದೆ. ಹೀಗಾಗಿ ಈ ದಿನವು ಸ್ವಾತಂತ್ರ್ಯ ದಿನದಷ್ಟೇ ಸಂಭ್ರಮದಿಂದ ಗಣರಾಜ್ಯೋತ್ಸವವನ್ನು ಆಚರಿಸಲಾಗುತ್ತದೆ.

1950ರ ಜನವರಿ 26ರಂದು ಸಂವಿಧಾನವನ್ನು ಅಂಗೀಕರಿಸುವ ಮೂಲಕ ಗಣರಾಜ್ಯ ಎಂದು ಘೋಷಿಸಲ್ಪಟ್ಟ ದಿನವಾಗಿದೆ. ದೇಶದ ಮೊದಲ ಸಂವಿಧಾನ ಸಭೆ 1946ರ ಡಿಸೆಂಬರ್ 9ರಂದು ತನ್ನ ಮೊದಲ ಅಧಿವೇಶನ ನಡೆಸಿತ್ತು. ಕೊನೆಯ ಅಧಿವೇಶನ 1949ರ ನವೆಂಬರ್ 26ರಂದು ನಡೆದಿತ್ತು. ಡಾ.ಬಿ.ಆರ್. ಅಂಬೇಡ್ಕರ್ ನೇತೃತ್ವದ ಸಂವಿಧಾನ ರಚನಾ ಸಮಿತಿ ರಚಿಸಿದ ಸಂವಿಧಾನವನ್ನು ಒಂದು ವರ್ಷದ ಬಳಿಕ ಅಂಗೀಕರಿಸಲಾಯಿತು. ಹೀಗಾಗಿ 26 ಜನವರಿ 1950 ರಂದು ಸಂವಿಧಾನ ಜಾರಿಗೆ ಬಂದಿತು. ಅಂದಿನ ರಾಷ್ಟ್ರಪತಿ ಡಾ. ರಾಜೇಂದ್ರ ಪ್ರಸಾದ್ ಭಾರತದ ಬಾವುಟವನ್ನು ಹಾರಿಸಿ ಸಂವಿಧಾನ ಜಾರಿಗೆ ಬಂದ ದಿನವನ್ನು ಘೋಷಿಸಿದ್ದರು. ಅಂದಿನಿಂದ ಪ್ರತಿ ವರ್ಷ ಜನವರಿ 26 ಗಣರಾಜ್ಯೋತ್ಸವ ದಿನವನ್ನು ಹಬ್ಬದಂತೆ ದೇಶದಾದಂತ್ಯ ಆಚರಿಸಲಾಗುತ್ತಿದೆ. ಗಣರಾಜ್ಯೋತ್ಸವ ದಿನದ ಮಹತ್ವ ಹಾಗೂ ಆಚರಣೆ

ರಾಜಪ್ರಭುತ್ವವು ಅಂತ್ಯವಾಗಿ ಭಾರತದಲ್ಲಿ ಸಂವಿಧಾನವನ್ನು ಸ್ಥಾಪಿಸಿದ ದಿನವಾಗಿದ್ದು ಈ ದಿನದ ಆಚರಣೆಯೂ ಮಹತ್ವದ್ದಾಗಿದೆ. ಹೀಗಾಗಿ ಭಾರತವು ಪ್ರತಿ ವರ್ಷವು ಗಣರಾಜ್ಯೋತ್ಸವ ದಿನಕ್ಕೆ ವಿದೇಶದಿಂದ ಗಣ್ಯ ವ್ಯಕ್ತಿಗಳನ್ನು ಅತಿಥಿಗಳನ್ನಾಗಿ ಆಹ್ವಾನಿಸುತ್ತದೆ. ಗಣರಾಜ್ಯೋತ್ಸವದಂದು ನವದೆಹಲಿಯ ಇಂಡಿಯಾ ಗೇಟ್‌ನಲ್ಲಿ ಭಾರತದ ರಾಷ್ಟ್ರಪತಿಗಳಿಂದ ರಾಷ್ಟ್ರಧ್ವಜವನ್ನು ಹಾರಿಸಲಾಗುತ್ತದೆ. ನವದೆಹಲಿಯಲ್ಲಿ ರಾಜ್‌ಪಥ್ ನಡೆಯುತ್ತದೆ. ಭಾರತದ ರಾಷ್ಟ್ರೀಯ ಸೇನೆಯನ್ನು ಒಳಗೊಂಡ ಪರೇಡ್, ರಾಜ್ಯಗಳ ಸಾಂಸ್ಕೃತಿಕ ಮೆರಗನ್ನು ಸಾರುವ ಸ್ತಬ್ಧ ಚಿತ್ರಗಳ ಆಕರ್ಷಣೆಯ ಕೇಂದ್ರ ಬಿಂದುವಾಗಿರುತ್ತದೆ. ಈ ವಿಶೇಷ ದಿನದಂದು ದೇಶಕ್ಕಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ಹುತಾತ್ಮರಿಗೆ ಗೌರವ ಸಲ್ಲಿಸಲಾಗುತ್ತದೆ. ಶಾಲಾ ಕಾಲೇಜು ಹಾಗೂ ಸರ್ಕಾರಿ ಕಚೇರಿಗಳು ಸೇರಿದಂತೆ ಹಲವೆಡೇ ಗಣರಾಜ್ಯೋತ್ಸವ ದಿನವನ್ನು ಆಚರಿಸಲಾಗುತ್ತದೆ. ಶಾಲಾ ಕಾಲೇಜುಗಳಲ್ಲಿ ವಿಶೇಷವಾಗಿ ಮಕ್ಕಳಿಗಾಗಿ ಭಾಷಣ ಸ್ಪರ್ಧೆ ಸೇರಿದಂತೆ ವಿವಿಧ ಸ್ಪರ್ಧೆ, ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಈ ದಿನವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಗುತ್ತದೆ ಎಂದರು ಈ ಸಂದರ್ಭದಲ್ಲಿ ಸರ್ಕಲ್ ಇನ್ಸಕಪೇಕ್ಟರ್ ಜನಾರ್ದನ ಗ್ರಾಮ ಪಂಚಾಯತಿ ಅದ್ಯಕ್ಷ ಕೌಸ್ತರ್ ಉಪಾಧ್ಯಕ್ಷ ರಾಮು.ಪಿ.ಡಿ.ಓ.ವೆಂಕಟಾಚಲಪತಿಏಕಖಅ ಶಾಲೆಯ ಪ್ರಾಂಶುಪಾಲರಾದ ಜಿಲಾನ್ ಬಾಷ..ಸಿರಸ್ತೆದಾರ್ ಸತೀಶ್ ಆರ್.ಐ.ಈಶ್ವರಪ್ಪ.ಗ್ರಾಮ ಪಂಚಾಯತಿ ಸದಸ್ಯ ಹೆಚ್.ವಿ.ನಾರಾಯಣ ಸ್ವಾಮಿ ಮುಂತಾದವರು ಇದ್ದ



# ಸಚಿವ ಸಂಪುಟ, ಫಲಾನುಭವಿಗಳ ಸಮಾವೇಶ ಹಿನ್ನೆಲೆ: ಅಗತ್ಯ ಸಿದ್ದತೆಗೆ ಸಚಿವರ ಸೂಚನೆ

**ಚಾಮರಾಜನಗರ:** ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆ ಹಾಗೂ ಚಾಮರಾಜನಗರ ಪಟ್ಟಣದಲ್ಲಿ ನಿಗದಿಯಾಗಿರುವ ಫಲಾನುಭವಿಗಳ ಸಮಾವೇಶ ಹಿನ್ನೆಲೆಯಲ್ಲಿ ಅಗತ್ಯ ಸಿದ್ದತೆಗಳನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಚಾಮರಾಜನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿವಿಧ ಇಲಾಖೆ ವ್ಯಾಪ್ತಿಯಲ್ಲಿ ಪೂರ್ಣವಾಗಿರುವ ಅಭಿವೃದ್ಧಿ ಕಾಮಗಾರಿ, ಕಟ್ಟಡ ವಿವರ ಪಡೆದ ಜಿಲ್ಲಾ ಉಸ್ತುವಾರಿ ಸಚಿವರು ಫಲಾನುಭವಿಗಳ ಸಮಾವೇಶದಲ್ಲಿ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲು ಅವಶ್ಯವಿರುವ ಎಲ್ಲಾ ಸಿದ್ದತೆಗಳನ್ನು ತ್ವರಿತವಾಗಿ ಮಾಡಿಕೊಳ್ಳುವಂತೆ ತಿಳಿಸಿದರು.

ಇಲಾಖೆಗಳು, ನಿಗಮ, ಮಂಡಳಿಗಳು, ನಗರ ಸ್ಥಳೀಯ ಸಂಸ್ಥೆಗಳು ಫಲಾನುಭವಿಗಳಿಗೆ ನೀಡುವ ವಿವಿಧ ಸವಲತ್ತುಗಳನ್ನು ಸಮಾವೇಶದಲ್ಲಿ ವಿತರಿಸಲು ಪೂರಕವಾಗಿರುವ ಎಲ್ಲಾ ಪ್ರಕ್ರಿಯೆಗಳನ್ನು ಕೈಗೊಳ್ಳಬೇಕು. ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಅಧಿಕಾರಿಗಳು ಬಾಕಿ ಇರುವ ಎಲ್ಲಾ ಸಿದ್ದತಾ ಕಾರ್ಯಗಳನ್ನು ಅಚ್ಚುಕಟ್ಟಾಗಿ ಪೂರ್ಣಗೊಳಿಸಬೇಕು ಎಂದರು.



ಇಲಾಖೆಗಳು ವಿತರಿಸಲಿರುವ ಸವಲತ್ತುಗಳು, ಪರಿಕರಗಳು, ಇತರೆ ಯಾವುದೇ ಸಲಕರಣೆಗಳನ್ನು ಮುಂಚಿತವಾಗಿಯೇ ದಾಸ್ತಾನು ಮಾಡಿ ವ್ಯವಸ್ಥಿತವಾಗಿ ಕಾರ್ಯಕ್ರಮದಲ್ಲಿ ವಿತರಣೆ ಮಾಡಬೇಕಿದೆ. ಫಲಾನುಭವಿಗಳಿಗೆ ಮಾಹಿತಿ ನೀಡಿ ಸಮಾವೇಶಕ್ಕೆ ಕರೆತಂದು ವಿತರಿಸುವ ಕಾರ್ಯವನ್ನು ಅತ್ಯಂತ ಹೊಣೆಗಾರಿಕೆಯಿಂದ ನಿರ್ವಹಿಸಬೇಕೆಂದು ಸಚಿವರು ತಿಳಿಸಿದರು.

ಫಲಾನುಭವಿಗಳ ಸಮಾವೇಶದಲ್ಲಿ ಸರ್ಕಾರದ ಸೌಲಭ್ಯಗಳನ್ನು ತಲುಪಿಸುವ ಮೂಲಕ ಇಲಾಖೆಗಳು ಜನರಿಗೆ ನೆರವಾಗಬೇಕಿದೆ. ಇದಕ್ಕಾಗಿ ಪ್ರತಿ ಇಲಾಖೆಗಳು ವಿವರವಾದ ಪಟ್ಟಿ ಮಾಡಬೇಕು. ಸಾಕಷ್ಟು ಸಿದ್ದತೆಯೊಂದಿಗೆ ಫಲಾನುಭವಿಗಳ ಸಮಾವೇಶ ಆಯೋಜಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಲೋಕಸಭಾ ಸದಸ್ಯರಾದ ಸುನೀಲ್ ಬೋಸ್, ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಹೆಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ, ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಚೂಡಾ ಅಧ್ಯಕ್ಷರಾದ ಮಹಮದ್ ಅಸ್ಗರ್, ನಗರಸಭೆ ಉಪಾಧ್ಯಕ್ಷರಾದ ಮಮತ, ಜಿಲ್ಲಾಧಿಕಾರಿ ಶಿಲ್ಪಾ ನಾಗ್. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ತಹಶೀಲ್ದಾರರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಉಸ್ತುವಾರಿ ಸಚಿವರಿಗೆ ಘೇರಾವ್ ಹಾಕಲು ಮುಂದಾಗಿದ್ದ ರೈತ ಮುಖಂಡರ ಬಂಧನ



**ಚಾಮರಾಜನಗರ:** ನಗರಕ್ಕೆ ಆಗಮಿಸಿದ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕ ಟೇಶ್‌ಗೆ ಘೇರಾವ್ ಹಾಕಲು ಮುಂದಾಗಿದ್ದ ರೈತ ಸಂಘದ ಮುಖಂಡರನ್ನು ಪೊಲೀಸರು ಬಂಧಿಸಿದ ಘಟನೆ ನಡೆಯಿತು.

ಜಿಲ್ಲೆಯ ರೈತರ ಸಮಸ್ಯೆಗಳನ್ನು ಬಗೆ ಹರಿಸುವಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ವಿಫಲ ರಾಗಿದ್ದು ಧ್ವಜಾರೋಹಣಕ್ಕೆ ಆಗಮಿಸುವ ಸಂದರ್ಭದಲ್ಲಿ ಸಚಿವರಿಗೆ ಘೇರಾವ್ ಹಾಕುವುದಾಗಿ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ನಿರ್ಧರಿಸಿದ್ದರು. ಇದನ್ನು ಅರಿತ ಪೊಲೀಸರು ಮಾತನಾಡಲು ಅವಕಾಶ ಕಲ್ಪಿಸುವುದಾಗಿ ಭರವಸೆ ನೀಡಿದ್ದರು.

ಆದರೆ,ಜಿಲ್ಲಾ ಉಸ್ತುವಾರಿ ಸಚಿವರು ಗಣರಾಜ್ಯೋತ್ಸವ ಕಾರ್ಯಕ್ರಮ ಮುಗಿಸಿ ಸಭೆ ನಡೆಸಲು ಜಿಲ್ಲಾಡಳಿತ ಭವನಕ್ಕೆ ಆಗಮಿಸುವ ಹಿನ್ನೆಲೆಯಲ್ಲಿ ರೈತರಿಂದ ತೊಂದರೆಯಾಗಬಾರದೆಂದು ಮನಗಂಡು ಚಾಮರಾಜನಗರಕ್ಕೆ ಆಗಮಿಸಿದ ಹೊನ್ನೂರು ಬಸವಣ್ಣ ಹಾಗೂ ಸಂಘದ ಇತರೆ ಪದಾಧಿಕಾರಿಗಳನ್ನು ಪೊಲೀಸರು ವಶಕ್ಕೆ ಪಡೆದು ಕಾಗಲವಾಡಿ ಪೊಲೀಸ್ ಉಪಠಾಣೆಗೆ ಕರೆದೊಯ್ದರು.

ಈ ವೇಳೆ ಪೊಲೀಸರ ವಿರುದ್ಧ ರೈತ ಸಂಘದ ಮುಖಂಡರು ಆಕ್ರೋಶ ಹೊರ ಹಾಕಿದರು. ಕೆಲ ಕಾಲ ಕಾಗಲವಾಡಿ ಪೊಲೀಸ್ ಠಾಣೆಯಲ್ಲಿ ಇರಿಸಿಕೊಂಡು ಆ ನಂತರ ಬಿಡುಗಡೆ ಮಾಡಿದರು. ರೈತ ಸಂಘದ ಪ್ರತಿಭಟನೆ ಹಿನ್ನೆಲೆಯಲ್ಲಿ ಸಚಿವರು ಸಭೆ ನಡೆಸಿದ ಜಿಲ್ಲಾಡಳಿತ ಭವನದ ಮುಖ್ಯಗೇಟ್ ಹಾಗೂ ಜಿಲ್ಲಾಡಳಿತ ಭವನದಲ್ಲಿ ಪೊಲೀಸ್ ಅಲ್ಲದೇ ಸಚಿವರೊಂದಿಗೆ ಬಿಗಿ ಭದ್ರತೆ ಮಾಡಲಾಗಿತ್ತು.

# ಸಂವಿಧಾನದ ಹಕ್ಕುಗಳು ಉಲ್ಲಂಘನೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮದು

ಕೊರಟಗೆರೆ:ಸಂವಿಧಾನವು ಪ್ರಜೆಗಳಿಗಾಗಿ ಅತಿಮೂಲ್ಯವಾದ ಮೂಲಭೂತ ಹಕ್ಕುಗಳನ್ನು ನೀಡಿದ್ದು ಅದರ ಉಲ್ಲಂಘನೆಯಾಗಂತೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ತಹಶೀಲ್ದ್ದರ್ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ ಕೆ.ಮಂಜುನಾಥ್ ತಿಳಿಸಿದರು.

ಅವರು ತಾಲೂಕು ಆಡಳಿತ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜು ಮೈದಾನದಲ್ಲಿ ಏರ್ಪಡಿಸಿದ್ದ 76 ನೇ ಭಾರತ ಗಣರಾಜ್ಯೋತ್ಸವ 2025 ಕಾರ್ಯಕ್ರಮದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಸಂವಿದಾನ ಶಿಲ್ಪಿ ಭಾರತ ರತ್ನ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ರವರಿಗೆ ಗೌರವ ನಮನ ಸಲ್ಲಿಸಿ ಧ್ವಜರೋಹಣ ಮಾಡಿ ಸಂದೇಶ ನೀಡಿ 1950 ಜವನರಿ 26 ರಂದು ಸಂವಿಧಾನವನ್ನು ನಮ್ಮನ್ನು ನಾವು ಅರ್ಪಿಸಿಕೊಂಡು ಅಂಗೀಕರಿಸಿ ಶಾಸನವಾಗಿ ವಿಧಸಿಕೊಂಡಿರ್ತೇವೆ, ಈ ಸವಿ ನೆನಪಿನಲ್ಲಿ 76ನೇ ಗಣರಾಜ್ಯೋತ್ಸವವನ್ನು ಆಚರಿಸಲಾಗುತ್ತಿದೆ, ಭಾರತವು ಬಾರತೀಯ ಸಂವಿಧಾನ ಅಂಗೀಕಾದೊಂದಿಗೆ ತನ್ನನ್ನು ಸಾರ್ವಭೌಮ, ಪ್ರಜಾಪ್ರಭುತ್ವ ಮತ್ತು ಗಣರಾಜ್ಯವೆಂದು ಘೋಷಿಸಿತು ಎಂದ ಅವರು ಭಾರತದಲ್ಲಿ ಸಂವಿಧಾನ ಜಾರಿಗೆ ಬಂದ ಕಾರಣದಿಂದಲೇ ದೇಶದ ಪ್ರತಿ ಪ್ರಜೆಯೂ ಶಿಕ್ಷಣದ ಹಕ್ಕು ಪ್ರತಿಯೊಬ್ಬರಿಗೂ ಬೇಕಾದ ಮೂಲಭೂತ ಹಕ್ಕು, ಧಾರ್ಮಿಕ ಹಕ್ಕು ಸೇರಿದಂತೆ ಹಲವು ಹಕ್ಕುಗಳು ಸಿಕ್ಕಿರುವುದು, ಈ ದೇಶದ ಉತ್ತಮ ಪ್ರಜೆಗಳು ಎಂದು ಎನಿಸಿಕೊಳ್ಳಬೇಕು ಎಂದರೆ ನಾವು ಈ ಸಂವಿಧನವನ್ನು ಗೌರವಿಸಬೇಕು, ಅದರಲ್ಲಿನ ನಿಯಮಗಳನ್ನು ಪಾಲಿಸಬೇಕು, ಮೂಲಭೂತ ಹಕ್ಕುಗಳಂತೆ ದೇಶದ ಪ್ರಜೆಗಳಾಗಿ ಇದರಲ್ಲಿ ನೀಡಲಾದ ಮೂಲಭೂತ ಕರ್ತವ್ಯಗಳನ್ನು ಸಹ ಪಾಲಿಸಬೇಕು ಎಂದರು.

ಸ್ವಾತಂತ್ರ್ಯ, ಸಮಾನತೆ, ಏಕತೆ, ಬ್ರಾತೃತ್ವ, ಸಹೋದರತ್ವ, ನಮ್ಮ ಸಂವಿಧಾನದಲ್ಲಿ ಇರುವ ಪ್ರಮುಖ ಜೀವನ ಮೌಲ್ಯಗಳಾಗಿವೆ, ಇತಂಹ ಮೌಲ್ಯಗಳನ್ನು ನೀಡಿದ ಸಂವಿಧಾನ ಜಾರಿಗೆ ಬಂದ ದಿನದ ಈ ರಾಷ್ಟ್ರೀಯ ಹಬ್ಬವು ದೇಶದ ಏಕತೆ ಮತ್ತು ಹೆಮ್ಮೆಯನ್ನು ಕಾಪಾಡಿಕೊಳ್ಳಲು ಎತ್ತಿಹಿಡಿಯಲು, ಮೆಲುಕು ಹಾಕಲು ನಮ್ಮೆಗೆಲ್ಲರಿಗೂ ಅವಕಾಶವನ್ನು ನೀಡಿದೆ, ಇದೇ ಮಂತ್ರವನ್ನು ನಾವೆಲ್ಲರೂ ಸಹ ಜಪಿಸುತ್ತಾ, ಸದಾ ನೆನಪಿನಲ್ಲಿ ಇಟ್ಟುಕೊಂಡು ಚೆನ್ನಾಗಿ ಓದಿ ಈ ದೇಶವನ್ನು ಇನ್ನಷ್ಟು ಸುಸ್ಥಿತಿಯ ಕಡೆಗೆ ಕೊಂಡ್ಯೊಯೋಣ ಎಂದು ಯುವ ಜನತೆಗೆ ಕರೆ ನೀಡಿ ಸಂವಿಧಾನ ರಚನೆಗೆ ಡಾ.ಬಿ.ಆರ್. ಅಂಬೇಡ್ಕರ್ ರವರೊಮದಿಗೆ ಶ್ರಮಿಸಿದಂತ ಡಾಕ್ಟರ್ ರಾಜೇಂದ್ರ ಪ್ರಸಾದ್, ಬಿ.ಎನ್. ರಾಯ್, ಕೆ.ಎಂ.ಮುನ್ಷಿ, ಅಲಾಡಿ ಕೃಷ್ಣಸ್ವಾಮಿ, ಗೋಪಾಲಸ್ವಾಮಿ ಅಯ್ಯಂಗಾರ್, ಮಹಮದ್ ಸಾದುಲ್ಲ, ಟಿಟಿ ಕೃಷ್ಣಮಚಾರಿ, ಜವಾಹಲಾಲ್ ನೆಹರು ಸೇರಿದಂತೆ ಇನ್ನಿತರ ಮಹಾಅನ್ ನಾಯಕರ ತ್ಯಾಗ ಮತ್ತು ದೂರದೃಷ್ಠಿ ಬಗ್ಗೆ ನೆನೆಪಿಸಿದ ನಾವು ಅವರಿಗೆ ಗೌರವಿಸಲೇಬೇಕು ಎಂದರು.



ಗಣರಾಜ್ಯೋತ್ಸವದ ಅಂಗವಾಗಿ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಿಂದ ಸಂವಿಧಾನ ಸೇರಿದಂತೆ ಕೊರಟಗೆರೆ ತಾಲೂಕಿನ ಇತಿಹಾಸಒಳಗೊಂಡ ಸ್ತಬ್ದ ಚಿತ್ರಗಳೊಂದಿಗೆ ಭವ್ಯ ಮರವಣಿಗೆ ನಡೆಸಿ ನಂತರ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಧ್ವಜಾರೋಹಣ ಮಾಡಲಾಯಿತು, ಪೊಲೀಸರ್ ಇಲಾಖೆ ಮತ್ತು ಶಾಲಾ ವಿದ್ಯಾರ್ಥಿಗಳಿಂದ ಕವಾಯಿತು ನೊಂದಿಗೆ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ವಿವಿಧ ಇಲಾಖೆಗಳಲ್ಲಿ ಉತ್ತಮ ಕಾರ್ಯನಿರ್ಹಿಸಿದ ಸಾಧನೆ ಮಾಡಿದ ಪಶು ಇಲಾಖೆಯ ವೈದ್ಯಾಧಿಕಾರಿ ಹಿತೈಸಿ, ಪೊಲೀಸ್ ಇಲಾಖೆಯ ರಾಮಕೃಷ್ಣ, ಬಿಲ್‌ಕಲ್ಟರ್ ಆನಂತರಾಜು, ಪೌರಕಾರ್ಮಿಕ ಮಂಜುನಾಥ್, ಡಿ.ಗ್ರೂಪ್ ನೌಕರ ಹಯರಾಮಯ್ಯ ಸೇರಿದಂತೆ 5 ಮಂದಿ ಗಣ್ಯರಿಗೆ ಸನ್ಮಾನಿಸಿ ಗೌರವಿಸಲಾಯಿರು.

ಕಾರ್ಯಕ್ರಮದಲ್ಲಿ ತಾ.ಪಂ. ಕಾರ್ಯನಿರ್ವಣಾದಿಕಾರಿ ಅಪೂರ್ವ, ಅರಕ್ಷಕ ವೃತ್ತ ನಿರೀಕ್ಷಕ ಆರ್.ಪಿ.ಅನಿಲ್, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ವಿ.ನಟರಾಜು, ಗ್ರೇಡ್2 ತಹಶೀಲ್ದಾರ್ ರಾಮ್‌ಪ್ರಸಾದ್, ಪ.ಪಂ.ಮುಖ್ಯಾಧಿಕಾರಿ ಉಮೇಶ್, ಪ.ಪಂ.ಅಧ್ಯಕ್ಷೆ ಕೆ.ಓ.ಅನಿತಾ, ಉಪಾಧ್ಯಕ್ಷೆ ಹುಸ್ನಾಫಾರಿಯಾ, ಸ್ಥಾಯಿ ಸಮಿತಿ ಅಧ್ಯಕ್ಷೆ ಎ.ಎಸ್.ಹೇಮಲತಾ, ಸದಸ್ಯರಾದ ಎ.ಡಿ.ಬಲರಾಮಯ್ಯ, ಲಕ್ಷ್ಮಿನಾರಾಯಣ್, ಭಾರತಿಸಿದ್ದಮಲ್ಲಯ್ಯ, ಮಂಜುಳಾ ಗೋವಿಂದರಾಜು, ಪಿ.ಎಲ್.ಡಿ.ಬ್ಯಾಂಕ್ ಅಧ್ಯಕ್ಷ ಚಿಕ್ಕರಂಗಯ್ಯ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹೆಚ್.ಎಂ.ರುದ್ರೇಶ್, ಎಸ್ಸಿ. ಎಸ್ಟಿ ನೌಕರರ ಸಮನ್ವಯ ಸಮಿತಿ ಅಧ್ಯಕ್ಷ ಲಕ್ಷ್ಮೀಪುತ್ರ, ಕಂದಾಯ ಇಲಾಖೆಯ ಆರ್.ಐ.ಬಸವರಾಜು, ಪವನ್, ನಕುಲ್, ರಂಗಭೂಮಿ ಕಲಾವಿಧರ ಸಂಘದ ಅಧ್ಯಕ್ಷ ವೈ.ಎನ್.ಪುಟ್ಟಣ್ಣ ಸೇರಿದಂತೆ ಸಂಘ ಸಂಸ್ಥೆಗಳ ಪಧಾದಿಕಾರಿಗಳು ಇನ್ನಿತರರು ಉಪಸ್ಥಿತರಿದ್ದರು.

# ಶತಾಯುಷಿಯಾಗಿದ್ದರೂ ಉತ್ಸಾಹದ ಚಿಲುಮೆ ಪಟೇಲ್ ಗಂಗರೇವಣ್ಣ

**ಮಾಗಡಿ:** ಶತಾಯುಷಿಯಾಗಿದ್ದರೂ ಇನ್ನೂ ಉತ್ಸಾಹದ ಚಿಲುಮೆಯಂತೆ ಪಟೇಲ್ ಗಂಗರೇವಣ್ಣ ಅವರು ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಂಡಿದ್ದಾರೆ ಎಂದು ಅಭಿಮಾನ ಮೂಡುತ್ತದೆ ಎಂದು ಸಿದ್ದಗಂಗೆ ಮಠಾಧ್ಯಕ್ಷ ಸಿದ್ದಲಿಂಗಸ್ವಾಮೀಜಿ ತಿಳಿಸಿದರು.

ತಾಲೂಕಿನ ಗುಡೇಮಾರನಹಳ್ಳಿಯಲ್ಲಿ ನಡೆದ ಪಟೇಲ್ ಗಂಗರೇವಣ್ಣ ಅವರ ಶತಮಾನೋತ್ಸವದ ಅಭಿನಂದನಾ ಸಮಾರಂಭದಲ್ಲಿ ಶತಾಯಿಸಿ ಗಂಗರೇವಣ್ಣ ಅವರನ್ನು ಅಭಿನಂದಿಸಿ ಮಾತನಾಡಿದ ಅವರು, 100 ವರ್ಷ ಪೂರೈಸುವುದು ಕೇವಲ ಸಂತರು ಎನ್ನುತ್ತಿದ್ದರು. 100 ವರ್ಷ ಗಡಿದಾಟುವ ಜನರು ಜಪಾನ್ ದೇಶದಲ್ಲಿ ಮಾತ್ರ ಸಿಗುವುದು. ಸಿದ್ದಗಂಗೆಯ ಶಿವೈಕ್ಯ ಶ್ರೀಗಳರ ಅಂತರಂಗದ ಶಿಷ್ಯರಾಗಿ, ಭಕ್ತರಾಗಿ ಕಾಯಕನಿಷ್ಠೆಯಿಂದ ಬದುಕಿ ಅವಿಭಕ್ತ ಕುಟುಂಬದಲ್ಲೇ ಬಾಳಿದವರು. ಇವರ ಜ್ಞಾನಶಕ್ತಿ ಜಗತ್ತಿನ ಪುಸ್ತಕದಿಂದ ಮಸ್ತಕಕ್ಕೆ ತುಂಬಿಕೊಂಡಿದ್ದಾರೆ. ಈ ಭಾಗದಲ್ಲಿ ಗಂಗರೇವಣ್ಣ ನ್ಯಾಯ ಮಾಡುತ್ತಿದ್ದಾರೆ ಎಂದರೆ ಅದು ನ್ಯಾಯವಾಗಿಯೇ ಇರುತ್ತದೆ ಎನ್ನುವಷ್ಟರ ಮಟ್ಟಿಗೆ ನ್ಯಾಯದೊರಕಿಸುವ ವ್ಯಕ್ತಿತ್ವ ಹೊಂದಿದ್ದರು. ಯಾರಿಗೂ ಅನ್ಯಾಯವಾಗಲು ಬಿಡುತ್ತಿರಲಿಲ್ಲ, ನೇರ ನಿಷ್ಠೂರವಾದಿಯಾಗಿದ್ದಾರೆ.

ಶತಾಯಿಸಿ ಗಂಗರೇವಣ್ಣ ಅವರು, ಕೇವಲ ಸಮಾಜಮುಖಿಯಾಗಿರದೆ, ತಮ್ಮ ಮಕ್ಕಳನ್ನು ಸಮಾಜಕ್ಕೆ ಕೊಟ್ಟಿದ್ದಾರೆ. ಇತ್ತೀಚಗೆ ತಮ್ಮಗೆ ಮಕ್ಕಳೇ ಬೇಡ ಎನ್ನುವ ಕಾಲದಲ್ಲಿ ತಾಯಿ ಇಲ್ಲದಿದ್ದರು.



50 ವರ್ಷಗಳಿಂದಲೂ ತಮ್ಮ 8 ಜನ ಮಕ್ಕಳಿಗೂ ಉತ್ತಮ ಸಂಸ್ಕಾರ, ಶಿಕ್ಷಣ ಕೊಟ್ಟು ಸಮಾಜಕ್ಕೆ ಅರ್ಪಿಸಿದ್ದಾರೆ. ಇವರು ತನಗಾಗಿ ಬದುಕದೇ ಗಂಗರೇವಣ್ಣ ಇಡೀ ಸಮಾಜಕ್ಕಾಗಿ ಬದುಕಿ ತೋರಿಸಿದ್ದಾರೆ. ಮನೆ,ಸಮಾಜಕ್ಕೆ ಉಪಕಾರಿಯಾಗಿದ್ದಾರೆ. ಶ್ರೀಗಳರ ಆಶೀರ್ವಾದಿಂದ ಆರೋಗ್ಯವಂತರಾಗಿ ಬದುಕು ಮುನ್ನೆಡಸಲಿ ಎಂದು ಹಾರೈಸಿದರು.

ಅಖಿಲ ಭಾರತ ವೀರಶೈವ ಮಹಾ ಸಭಾ ತಾಲೂಕು ಅಧ್ಯಕ್ಷ ಎಸ್.ಸಿ.ಬಿ.ಎಸ್. ಶಿವರುದ್ರಯ್ಯ ಮಾತನಾಡಿದರು.

ಪಟೇಲ್ ಗಂಗರೇವಣ್ಣ ಮಾತನಾಡಿ, ನಿಮ್ಮ ಅಭಿಮಾನವೇ ನನಗೆ ಶ್ರೀರಕ್ಷೆ, ನಿಮ್ಮ ಪ್ರೀತಿ, ಆಶೀರ್ವಾದ ಸದಾ ನನ್ನ ಮೇಲಿರಲಿ, ನಿಮ್ಮ ಅಭಿಮಾನಕ್ಕೆ ಚಿರ ಋಣಿಯಾಗಿದ್ದೇನೆ ಎಂದರು.

ಮುಖ್ಯ ಎಂಜಿನಿಯರ್ ರಾಮೇಗೌಡ ಅವರು ಸನ್ಮಾನ ಸ್ವೀಕರಿಸಿ ಮಾತನಾಡಿ, ಪಟೇಲ್ ಗಂಗರೇವಣ್ಣ ಅವರು ದ್ವೇಷ ರಹಿತ ಜೀವನ, ಸಮಾಜಮುಖಿ ಸೇವೆ ಶತಾಯಿಸಿ ಆಗಿದ್ದು, ಗಿನ್ನಿಸ್ ದಾಖಲೆ ಸೇರಿಲಿ ಎಂದು ದೇವರಲ್ಲಿ ಪ್ರಾರ್ಥಿಸಿದರು.

ಗದ್ದುಗೆ ಮಠದ ಮಹಂತಸ್ವಾಮೀಜಿ, ದೇಗುಲಮಠದ ಕಿರಿಯ ಶ್ರೀ ಚೆನ್ನಬಸವಸ್ವಾಮೀಜಿ, ಬೇಲಿ ಮಠದ ಶಿವರುದ್ರ ಶಿವಾಚಾರ್ಯಸ್ವಾಮೀಜಿ, ಹೊನ್ನಮ್ಮ ಗವಿ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ,ಬಸವಣ್ಣ ದೇವರ ಮಠದ ಸಿದ್ದಲಿಂಗಸ್ವಾಮೀಜಿ,ಬೆಟ್ಟಹಳ್ಳಿ ಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಎಚ್.ಎಸ್‌ಪ್ರಕಾಶ್‌ಕುಮಾರ್, ಮಾಜಿ ಉಪಮೇಯರ್ ಬಿ.ಎಸ್.ಪುಟ್ಟರಾಜ್, ನಿವೃತ್ತ ಪ್ರಾಂಶುಪಾಲ ರೇಣುಕಪ್ಪ, ವಕೀಲ ಪ್ರಕಾಶ್, ನಿವೃತ್ತ ಪಿಡಿಓ ಚಂದ್ರಶೇಖರ್, ಚಂದನ್, ಬಿ.ಎನ್.ಶಿವಣ್ಣ, ಬಸವರಾಜು, ಟಿಎಪಿಸಿಎಂಎಸ್ ಅಧ್ಯಕ್ಷ ಶಿವಪ್ರಸಾದ್,ಕೆ.ಪಿ. ಬ್ಯಾಂಗೇಶ್, ಎಸ್.ಸಿ.ಬಿ.ಎಸ್. ಮಂಜುನಾಥ್, ಅನಸೂಯ ಕಾಂತರಾಜ್, ನಾಗಶರ್ಮ, ಶಿವರಾಜು, ಮಲ್ಲಿಕಾರ್ಜುನಾರಾಧ್ಯ, ಶಂಕರಪ್ಪ, ಕೆಪಿ.ಆನಂದ್ ಸೇರಿದಂತೆ 50ಕ್ಕೂ ಹೆಚ್ಚು ಹರಗುರು–ಚರಮೂರ್ತಿಗಳು ಇದ್ದರು.


# ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಪ್ರಗತಿ ಮತ್ತಷ್ಟು ಕಾಣಬೇಕಿದೆ

ಮಾಲೂರು: ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿ ಕೊಟ್ಟಿರುವ ಸಂವಿಧಾನದಡಿ ತುಳಿತಕ್ಕೆ ಒಳಗಾದ ಎಲ್ಲಾ ಸಮುದಾಯದವರನ್ನು ಗುರುತಿಸಿ ಸಮಾಜದ ಮುಖ್ಯ ವಾಹಿನಿಗೆ ತರುವ ಕೆಲಸ ನಮ್ಮೆಲ್ಲರ ಜವಾಬ್ದಾರಿ ಎಂದು ಶಾಸಕ ಕೆ. ವೈ.ನಂಜೇಗೌಡ ಹೇಳಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಕ್ರೀಡಾಂಗಣದಲ್ಲಿ ತಾಲ್ಲೂಕು ಆಡಳಿತ ಹಾಗೂ ರಾಷ್ಟೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ 76ನೇ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂವಿಧಾನ ಶಿಲ್ಪಿ ಬಿ.ಆರ್.ಅಂಬೇಡ್ಕರ್ ಅವರು ರಚಿಸಿಕೊಟ್ಟ ಸಂವಿಧಾನ 1926 ರಲ್ಲಿ ಅಂಗಿಕಾರವಾಗಿ 1950 ಜನವರಿ 26 ರಂದು ಸಂವಿಧಾನ ಜಾರಿಗೆ ಬಂದ ದಿನವನ್ನು ಪ್ರತಿ ವರ್ಷ ಗಣರಾಜ್ಯ ದಿನ ವನ್ನಾಗಿ ದೇಶಾದ್ಯಂತ ಆಚರಣೆ ಮಾಡಲಾಗುತ್ತಿದೆ, ಪಟ್ಟಣದಲ್ಲಿಯೂ ಸಹ ವಿಶೇಷವಾಗಿ ತಾಲೂಕು ಆಡಳಿತ ಪ್ರತಿವರ್ಷ ವಿಜೃಂಭಣೆ ಯಿಂದ ಆಚರಣೆ ಮಾಡಲಾಗುತ್ತಿದೆ, ಸಂವಿಧಾನ ಜಾರಿಗೆ ಬಂದು 76 ವರ್ಷ ಕಳೆದಿದೆ ಆದರೆ ದೇಶದ ಅಭಿವೃದ್ಧಿ ಜೊತೆಗೆ ಸಾಮಾಜಿಕ, ಶೈಕ್ಷಣಿಕ ,ಆರ್ಥಿಕವಾಗಿ ಪ್ರಗತಿ ಮತ್ತಷ್ಟು ಕಾಣಬೇಕಾಗಿದೆ ಸಂವಿಧಾನದಡಿ ಎಲ್ಲಾ ಜಾತಿ ಜನಾಂಗಗಳು ತುಳಿತಕ್ಕೆ ಒಳಗಾದ ಜನಾಂಗದವರನ್ನು ಗುರುತಿಸಿ ಸಮಾಜದ ಮುಖ್ಯ ವಾಹಿನಿಗೆ ತರುವ ಕೆಲಸ ಮಾಡಬೇಕಾಗಿದೆ, ಸ್ವಾತಂತ್ರ ದೊರಕಿಸಿಕೊಟ್ಟವರನ್ನು ಹಾಗೂ ಸಂವಿಧಾನ ರಚಿಸಿ ಕೊಟ್ಟ ಮಹನೀಯರನ್ನು ಪ್ರತಿರೊಬ್ಬಬರು ಸ್ಮರಿಸಬೇಕು ಸಂವಿಧಾನದಡಿ ಕೆಲಸ ಮಾಡುವ ಜವಾಬ್ದಾರಿ ನಮ್ಮದು ಜನಪ್ರತಿನಿಧಿಗಳು ಅಧಿಕಾರಿಗಳು ಸಾಮಾನ್ಯ ಜನರನ್ನು ಗುರುತಿಸಿ ಅಧಿಕಾರ ಆಡಳಿತ ನೀಡುವ ವಾತಾವರಣ ನಮ್ಮ ದೇಶದಲ್ಲಿ ನಿರ್ಮಾಣವಾಗಬೇಕು, ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸವಲತ್ತುಗಳು ತಲುಪಬೇಕು ನಮ್ಮ ದೇಶದಲ್ಲಿರುವ ಜಾತಿ ಜನಾಂಗಗಳು ಯಾವುದೇ ದೇಶದಲ್ಲಿ ಇಲ್ಲ ಬೇರೆ ದೇಶದಲ್ಲಿ ಸಂವಿಧಾನದಲ್ಲಿ ಮತ್ತಷ್ಟು ಕಾನೂನು ಜಾರಿಗೆ ತರಬೇಕು.





ತಾಲೂಕಿನಲ್ಲಿ ಸಂವಿಧಾನದಡಿ ಮೀಸಲಾತಿ ಯನ್ನು ಬಳಸಿಕೊಂಡು ರಾಜಕೀಯವಾಗಿ ಗ್ರಾಮ ಪಂಚಾಯಿತಿ ಸದಸ್ಯನಿಂದ ಶಾಸಕನವರೆಗೆ ಆಯ್ಕೆಯಾಗಲು 2 ನೇ ಭಾರಿಗೆ ತಾಲೂಕಿನ ಜನತೆ ಅವಕಾಶ ಕಲ್ಪಿಸಿದ್ದಾರೆ. ನನ್ನ ಅಧಿಕಾರ ಅವಧಿಯಲ್ಲಿ ಸರ್ಕಾರದಿಂದ ಬರುವ ಅನುದಾನಗಳನ್ನು ಬಳಸಿಕೊಂಡು ಅಭಿವೃದ್ಧಿ ಮಾಡುವುದರ ಜೊತೆಗೆ ಸರ್ಕಾರಿ ಸವಲತ್ತುಗಳನ್ನು ಕಟ್ಟಕಡೆ ಯ ವ್ಯಕ್ತಿಗೂ ತಲುಪಿಸುವ ಕೆಲಸ ಮಾಡಲಾಗುವುದು ಎಂದರು. ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ತಾಲೂಕು ಆಡಳಿತ ವತಿಯಿಂದ ಅಭಿನಂದಿಸಲಾಯಿತು. ಪೊಲೀಸ್ ಇಲಾಖೆಯ ತೆರೆದ ಜೀಪಿನಲ್ಲಿ ಶಾಸಕ ಕೆ ವೈ ನಂಜೇಗೌಡ ತಹಶೀಲ್ದಾರ್ ಎಂ.ವಿ.ರೂಪ, ಪೊಲೀಸ್ ಇನ್ಸೆಕ್ಟರ್ ವಸಂತ್ ಅವರು ಪಥ ಸಂಚಲನ ತಂಡಗಳಿಂದ ಧ್ವಜ ವಂದನೆ ಸ್ವೀಕರಿಸಿ. ವಿವಿಧ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಿತು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಕೋಮಲ , ಸ್ಥಾಯಿ ಸಮಿತಿ ಅಧ್ಯಕ್ಷ ಎ.ರಾಜಪ್ಪ, ಗ್ರೇಡ್ 2 ತಹಶೀಲ್ದಾರ್ ಹರಿಪ್ರಸಾದ್, ಯೋಜನಾ ಪ್ರಾಧಿಕಾರದ ಅಧ್ಯಕ್ಷ ನಯೀಮ್, ಡಿ.ಸಿ.ಸಿ.ಅಧ್ಯಕ್ಷ ಸಿ.ಲಕ್ಷ್ಮೀನಾರಾಯಣ್, ತಾಪಂ ಇಒ ವಿ.ಕೃಷ್ಣಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವಿ.ಮುನೇಗೌಡ, ಬಿಇಒ ಎಚ್.ಎಸ್ .ಚಂದ್ರಕಲಾ, ಟಿ. ವೆಂಕಟಸ್ವಾಮಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಷಣ್ಮುಖಯ್ಯ, ಸಮಾಜ ಕಲ್ಯಾಣ ಇಲಾಖೆ ಶಿವಕುಮಾರ್, ಪುರಸಭೆ ಸಿಒ ಪ್ರದೀಪ್, ಸದಸ್ಯರಾದ ಎನ್.ವಿ.ಮುರಳೀಧರ್, ಜಾಕೀರ್, ಇಂತಿಯಾಜ್ ಖಾನ್, ಬೆಸ್ಕಾಂ ಎಇಇ ಅನ್ಸರ್ ಪಾಷ, ಕೃಷಿ ಡಾ.ಮಂಜುನಾಥ್, ತೋಟಗಾರಿಕೆ ದಿವ್ಯ,ಜಬ್ಬೀಉಲ್ಲಾ, ವಿಶ್ವನಾಥರೆಡ್ಡಿ, ಶಾಸಕರ ಅಪ್ತ ಕಾರ್ಯದರ್ಶಿ ಹರೀಶ್ ಗೌಡ, ಯುವ ನಾಯಕ ಸುನೀಲ್ ನಂಜೇಗೌಡ, ದೈಹಿಕ ಶಿಕ್ಷಣ ಶಿಕ್ಷಕರು ಎಚ್.ಸಿ.ಸುರೇಂದ್ರ ಗೌಡ, ಆಂಜಿನಪ್ಪ, ಶಬ್ಬೀರ್, ತನ್ವೀರ್, ಹರೀಶ್ ಎನ್.ಗೌಡ , ಅಭಿ ಪುರಸಭೆ ಸದಸ್ಯರು ವಿವಿಧ ಇಲಾಖೆ ಅಧಿಕಾರಿಗಳು ಇನ್ನಿತರರು ಹಾಜರಿದ್ದರು.

# ನೆರೆ ಮನೆಯವರ ಮಾನಸಿಕ ಕಿರುಕುಳ:ಯುವತಿ ಆತ್ಮಹತ್ಯೆ

ಚಾಮರಾಜನಗರ : ನೆರೆ ಮನೆಯವರ ಮಾನಸಿಕ ಕಿರುಕುಳಕ್ಕೆ ಬೇಸತ್ತ ಯುವತಿ ಮಾತ್ರೆ ನುಂಗಿ ಆತ್ಮಹತ್ಯೆಗೆ ಯತ್ನಿಸಿ, ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ ಘಟನೆ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಚನ್ನಮಲ್ಲೇಪುರ ಗ್ರಾಮದಲ್ಲಿ ನಡೆದಿದೆ.



ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ಚನ್ನಮಲ್ಲೇಪುರ ಗ್ರಾಮದ ಗಾಯತ್ರಿಯ ಪುತ್ರಿ ಕವನ (24) ಸಾವನ್ನಪ್ಪಿದ ಯುವತಿ. ಈಕೆ ಮಾತ್ರೆ ನುಂಗಿ ನಿತ್ರಾಣ ಗೊಳ್ಳುವುದಕ್ಕೆ ಮುಂಚೆ ಬಿಳಿ ಹಾಳೆಯಲ್ಲಿ ಹಾಗೂ ಬಾಗಿಲ ಹಿಂಭಾಗದಲ್ಲಿ ನನ್ನ ಸಾವಿಗೆ ಕಾರಣ ನೆರೆ ಮನೆಯ ಕಾವೇರಿ, ಕೀರ್ತಿ, ಕವಿತ, ವೃಷಬೇಂದ್ರ ಎಂದು ಡೆತ್ ನೋಟ್ ಬರೆದಿಟ್ಟಿದ್ದಾಳೆ.

ಈ ಸಂಬಂಧ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪೊಲೀಸ್ ಠಾಣೆಗೆ ಮೃತ ಕವನಳ ತಾಯಿ ಗಾಯತ್ರಿ ನನ್ನ ಮಗಳ ಸಾವಿಗೆ ವೃಷಬೇಂದ್ರ, ವೃಷಬೇಂದ್ರ ಪತ್ನಿ ಕವಿತ, ವೃಷಬೇಂದ್ರನ ಮಕ್ಕಳಾದ ಕಾವೇರಿ, ಕೀರ್ತಿ ಕಾರಣರಾಗಿದ್ದಾರೆ ಎಂದು ದೂರು ನೀಡಿದ್ದಾರೆ.

ಗಾಯತ್ರಿ ದೂರಿನ ಮೇರೆಗೆ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತ (ಬಿಎನ್‌ಎಸ್)ಯಡಿ ಯು/ಎಸ್ 108,3 (5) ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ಘಟನೆಯ ವಿವರ: ಜ.25ರಂದು ಮೃತ ಕವನಳ ತಾಯಿ ಗಾಯತ್ರಿ ಕೂಲಿ ಕೆಲಸಕ್ಕೆ ಹೋಗಿದ್ದ ಸಮಯದಲ್ಲಿ ಆತ್ಮಹತ್ಯೆ ಮಾಡಿಕೊಂಡ ಕವನ ಮನೆಯ ಎರಡು ಬಾಗಿಲಿಗೆ ಚಿಲಕ ಹಾಕಿ ಮಾತ್ರೆ ನುಂಗಿ ನಿತ್ರಾಣಲಾಗಿದ್ದಳು. ಮೃತಳ ಸೋದರಿ ಕಾವ್ಯಗೆ ಕವನ ಜ.25ರ ಬೆಳಗ್ಗೆ ಮೊಬೈಲ್ ನಲ್ಲಿ ವಿಡಿಯೋ ಕಾಲ್ ಮಾಡಿ ನನಗೆ ಅವಮಾನವಾಗಿದೆ ಮಾತ್ರೆ ನುಂಗಿ ಕೊಂಡಿದ್ದೇನೆ ಎಂದು ಹೇಳಿದ್ದಾಳೆ ಎನ್ನಲಾಗಿದೆ.

ಕೆಲಸಕ್ಕೆ ಹೋಗಿದ್ದ ಕಾವ್ಯಳ ತಾಯಿ ಗಾಯತ್ರಿಗೆ ಮೊಬೈಲ್ ಮೂಲಕ ಸಂಪರ್ಕಿಸಿ ಕವನ ಮಾತ್ರೆ ನುಂಗಿದ್ದೀನಿ ಎಂದಿದ್ದಾಳೆ. ಬೇಗ ಮನೆಗೆ ಹೋಗು ಎಂದಾಗ ಕವನ ನಿತ್ರಾಣಗೊಂಡ ರೀತಿ ಕಂಡಿದ್ದಾಳೆ. ಮನೆಯಲ್ಲಿ ಆತ್ಮಹತ್ಯೆಗೆ ಯತ್ನಿಸಿದ್ದ ಕವನಳನ್ನು ಆಸ್ಪತ್ರೆಗೆ ಸೇರಿಸಿದ್ದಾರೆ. ಆಸ್ಪತ್ರೆಯಲ್ಲಿ ವೈದ್ಯರು ನೀಡಿದ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾಳೆ ಕವನ.

# ಶ್ರೀರಾಮಚಂದ್ರ ವಿದ್ಯಾಸಂಸ್ಥೆಯಲ್ಲಿ ಗಣರಾಜ್ಯೋತ್ಸವ

**ಚಾಮರಾಜನಗರ:** ಬ್ರಿಟಿಷ್‌ರ ಆಡಳಿತ ಅಂತ್ಯವಾದ ನಂತರ ಭಾರತದಲ್ಲಿ ಸಂವಿಧಾನವನ್ನು ಸ್ಥಾಪಿಸಿದ ದಿನವೇ ಜನವರಿ 26. ದೇಶದ ಸಂವಿಧಾನ ಅಸ್ತಿತ್ವಕ್ಕೆ ಬಂದ ದಿನವಾಗಿದ್ದು ಭಾರತೀಯರಿಗೆ ಹೆಮ್ಮೆಯ ದಿನವಾಗಿದೆ. 26 ಜನವರಿ 1950 ರಂದು ಸಂವಿಧಾನವನ್ನು ಸ್ಥಾಪನೆ ಮಾಡಲಾಗಿದ್ದು, ಇದರ ಗೌರವಾರ್ಥವಾಗಿ ಗಣರಾಜ್ಯೋತ್ಸವವನ್ನು ಆಚರಿಸಲಾಗುತ್ತದೆ. ಈ ವರ್ಷ 76ನೇ ಗಣರಾಜ್ಯೋತ್ಸವ ದಿನವನ್ನು ಆಚರಿಸಲಾಗುತ್ತಿದೆ. ಭಾರತೀಯರ ಹೆಮ್ಮೆಯ ದಿನವಾದ ಗಣರಾಜ್ಯ ದಿನದಂದು ದೇಶದ ಎಲ್ಲೆಡೆ ಹಬ್ಬದ ರೀತಿಯಲ್ಲಿ ಆಚರಣೆ ಮಾಡುತ್ತಾರೆ ಎಂದು ಶ್ರೀರಾಮಚಂದ್ರ ವಿದ್ಯಾಸಂಸ್ಥೆಯ ಕಾರ್ಯದರ್ಶಿ ರುದ್ರಮೂರ್ತಿ ತಿಳಿಸಿದರು.

ನಗರದ ನ್ಯಾಯಾಲಯ ರಸ್ತೆಯಲ್ಲಿ ಇರುವ ಶ್ರೀರಾಮಚಂದ್ರ ವಿದ್ಯಾ ಸಂಸ್ಥೆಯಲ್ಲಿ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು . ನಮ್ಮ ದೇಶಕ್ಕೆ ಇತಿಹಾಸವಿದೆ. ನಮ್ಮದೇಶ ಸರ್ವಜನಾಂಗದ ಶಾಂತಿ ತೋಟವೆಂದೆ ಕರೆಯುತ್ತಾರೆ. ನಮ್ಮ ದೇಶಕ್ಕೆ ಸಂವಿದಾನವನ್ನು ನೀಡಿದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ನೆನೆಯುವ ದಿನವಾಗಿದೆ. ನಮ್ಮ ದೇಶಕ್ಕೆ ಸ್ವಾತಂತ್ರ್ಯ ಬರಲು ಬಹಳಷ್ಟು ಜನರು ಪ್ರಾಣತ್ಯಾಗ ಮಾಡಿದ್ದಾರೆ. ವಿದ್ಯಾರ್ಥಿಗಳು ಪ್ರತಿಯೊಂದು ವಿಚಾರಗಳನ್ನು ತಿಳಿದುಕೊಳ್ಳಬೇಕು ಎಂದು ಹೇಳಿದರು.



ತ್ರಿವರ್ಣ ಧ್ವಜಾರೋಹಣ ಮಾಡಿದ ಸಂಸ್ಥೆಯ ಅಧ್ಯಕ್ಷರಾದ ಎಂ.ಎಸ್ ಮಾದಯ್ಯ ಅವರು ಮಾತನಾಡಿ ವಿದ್ಯಾರ್ಥಿಗಳು ಓದಿನ ಕಡೆ ಹೆಚ್ಚು ಗಮನ ಕೊಡಬೇಕು. ವಿದ್ಯೇ ಬದುಕುವ ಮಾರ್ಗವನ್ನು ತೋರಿಸುತ್ತದೆ. 76ನೇ ವರ್ಷದ ಗಣರಾಜ್ಯೋತ್ಸವ ಆಚರಿಕೊಳ್ಳುತ್ತಿರುವುದು ಸಂತೋಷದ ವಿಚಾರವಾಗಿದೆ.

ಪ್ರತಿಯೊಬ್ಬ ಯುವಕನಿಗೆ ನಮ್ಮದೇಶ, ನಮ್ಮ ನಾಡು ಎಂಬ ಭಾವನೆ ಇರಬೇಕು. ವಿದ್ಯಾರ್ಥಿಗಳು ನಮ್ಮದೇಶದ ಇತಿಹಾಸವನ್ನು ತಿಳಿದರೆ ಮಾತ್ರ ಉತ್ತಮ ವಿದ್ಯಾರ್ಥಿಯಾಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಸದಸ್ಯರಾದ ಎಸ್.ಮಹೇಶ್, ದೈಹಿಕ ಶಿಕ್ಷಕರಾದ ರಂಗಸ್ವಾಮಿ. ಎಸ್, ಶಿಕ್ಷಕರಾದ ಕುಮಾರ್, ಯಶ್‌ಪಾಲ್, ಮಂಜುಳ, ಪರಶಿವಮೂರ್ತಿ, ವೀರಣ್ಣ ನಾಗರಾಜು, ಉಪಸ್ಥಿತರಿದ್ದರು.

# ಫ್ಯಾಷನ್ ಶೋದಲ್ಲಿ ಗುರುತೇ ಸಿಗದಂತಾದ ದೀಪಿಕಾ



ಬಾಲಿವುಡ್‌ನ ಲೇಡಿ ಸೂಪರ್‌ಸ್ಟಾರ್ ಕೋಟ್ಯಾಂತರ ಅಭಿಮಾನಿಗಳನ್ನು ಹೊಂದಿರುವ ದೀಪಿಕಾ ಪಡುಕೋಣೆ ಮಗಳು ಹುಟ್ಟಿದ ನಂತರ ಇದೇ ಮೊದಲ ಬಾರಿಗೆ ಫ್ಯಾಷನ್ ಶೋವೊಂದರಲ್ಲಿ ಭಾಗವಹಿಸಿದ್ದಾರೆ. ಆದರೆ ಅವರ ಲುಕ್ ಅಭಿಮಾನಿಗಳಿಗೆ ಅಚ್ಚರಿಯಾಗುವಂತೆ ಮಾಡಿದೆ.

ಏಕೆಂದರೆ ಅದು ದೀಪಿಕಾ ಪಡುಕೋಣೆ ಎಂಬುದನ್ನು ಗುರುತಿಸಲಾರದಷ್ಟು ಅವರ ಲುಕ್ ಬದಲಾಗಿದ್ದು, ಈ ವೀಡಿಯೋ ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಅಭಿಮಾನಿಗಳು ಈ ವೀಡಿಯೋ ನೋಡಿ ಅಚ್ಚರಿ ವ್ಯಕ್ತಪಡಿಸುವುದರ ಜೊತೆಗೆ ತರಹೇವಾರಿ ಕಾಮೆಂಟ್ ಮಾಡುತ್ತಿದ್ದಾರೆ.

ಖ್ಯಾತ ಡಿಸೈನರ್ ಸಭ್ಯಸಾಚಿ ಮುಖರ್ಜಿ 25ನೇ ವಾರ್ಷಿಕೋತ್ಸವದ ಸಂಭ್ರಮಾಚರಣೆಯ ಅಂಗವಾಗಿ ಶನಿವಾರ ಸಂಜೆ ಫ್ಯಾಷನ್ ಶೋ ಆಯೋಜಿಸಲಾಗಿತ್ತು. ಈ ಅದ್ದೂರಿ ಫ್ಯಾಷನ್ ಶೋ ಮೂಲಕ ಪ್ರಸಿದ್ಧ ವಿನ್ಯಾಸಕ ಸಭ್ಯಸಾಚಿ ಮುಖರ್ಜಿತಮ್ಮ 25 ವರ್ಷಗಳ ಮೈಲಿಗಲ್ಲನ್ನು ಆಚರಿಸಿದರು. ಇದರಲ್ಲಿ ನಟಿ ದೀಪಿಕಾ ಪಡುಕೋಣೆ ರಾಂಪ್ ಮೇಲೆ ಹೆಜ್ಜೆ ಹಾಕಿ ಗಮನಸೆಳೆದರು.

ಸೊಬಗು ಮತ್ತು ಅತ್ಯಾಧುನಿಕತೆ ಎರಡನ್ನೂ ಹೊರಹಾಕುವ ಚಿಕ್ ಏಕವರ್ಣದ ಬಿಳಿ ಉಡುಪನ್ನು ತೊಟ್ಟು ದೀಪಿಕಾ ಪಡುಕೋಣೆ ಈ ಕಾರ್ಯಕ್ರಮವನ್ನು ಅಲಂಕರಿಸಿದರು ದೀಪಿಕಾ ಧರಿಸಿದ ಧಿರಿಸಿನಲ್ಲಿ ಟೇಲರ್ಡ್ ಪ್ಯಾಂಟ್, ಟಾಪ್ ಮತ್ತು ಟ್ರೆಂಚ್ ಕೋಟ್ ಇತ್ತು. ಜೊತೆಗೆ ಹಲವು ಎಳೆಗಳ ಹಾರಗಳಿಂದ ಸುಂದರವಾಗಿ ಅಲಂಕರಿಸಲಾಗಿತ್ತು, ಅದರಲ್ಲಿ ಆಕರ್ಷಕವಾದ ಮಾಣಿಕ್ಯ ಮತ್ತು ವಜ್ರದ ಚೋಕರ್ ಮತ್ತು ಅಡ್ಡ ಪೆಂಡೆಂಟ್‌ಗಳು ಇದ್ದವು. ತನ್ನ ಲುಕನ್ನು ಇನ್ನಷ್ಟು ಚೆಂದಗಾಣಿಸಲು ದೀಪಿಕಾ ಕಪ್ಪು ಚರ್ಮದ ಕೈಗವಸುಗಳ ಮೇಲೆ ಹೊಂದಿಕೆಯಾಗುವ ಬಳೆಗಳನ್ನು ಧರಿಸಿದ್ದರು ಜೊತೆಗೆ ಫ್ಯಾಶನ್ ಹೆಡ್‌ಬ್ಯಾಂಡ್ ಅವರ ಲುಕ್ ಅನ್ನು ಪೂರ್ತಿಗೊಳಿಸಿತು. ಇವರ ಲುಕ್ ಬಾಲಿವುಡ್‌ನ ಫ್ಯಾಷನಲ್ ಲೋಕಕ್ಕೆ ಓಕೆ ಎನಿಸಿದರು ಜನರಿಗೆ ಅಷ್ಟೊಂದು ಇಷ್ಟವಾದಂತೆ ಕಾಣುತ್ತಿಲ್ಲ.

ಅನೇಕರು ದೀಪಿಕಾ ಪಡುಕೋಣೆ ಅವರ ಲುಕ್ ಅನ್ನು 80 ರ ದಶಕದ 'ಖೂನ್ ಭಾರಿ ಮಾಂಗ್' ಸಿನಿಮಾದಲ್ಲಿ ರೇಖಾ ಅವರ ಲುಕ್ ಗೆ ಹೋಲಿಸಿದರೆ, ಇನ್ನು ಕೆಲವರು ದೀಪಿಕಾ ಹೊಸಬರಂತೆ ನಡೆಯುತ್ತಿದ್ದಾರೆ ಎಂದು ಹೇಳಿದ್ದಾರೆ. ನಾನು ಈಕೆಯನ್ನು ಖೂನ್ ಭಾರಿ ಮಾಂಗ್' ಸಿನಿಮಾದ ರೇಖಾ ಎಂದು ಭಾವಿಸಿದೆ ಎಂದು ಒಬ್ಬರು ಕಾಮೆಂಟ್ ಮಾಡಿದ್ದಾರೆ. "ಏಕೆ ಇಷ್ಟೊಂದು ಎಳೆಗಳು??? ಯಾಕೆ ಇಷ್ಟೊಂದು ದೊಡ್ಡ ಕನ್ನಡಕ?? ಯಾಕೆ ಆ ವಿಚಿತ್ರ ಕೂದಲು?? ಎಷ್ಟೊಂದು ಪ್ರಶ್ನೆಗಳು ಎಂದು ಮತ್ತೊಬ್ಬರು ದೀಪಿಕಾ ಅವರ ಪ್ರತಿಯೊಂದನ್ನು ಪ್ರಶ್ನೆ ಮಾಡಿದ್ದಾರೆ. ದೀಪಿಕಾ ಒಂದು ಕಾಲದಲ್ಲಿ ಮಾಡೆಲ್ ಆಗಿರಲಿಲ್ಲವೇ? ಆದರೂ ಅವಳು ಹೊಸಬನಂತೆ ನಡೆಯುತ್ತಿದ್ದಾಳೆ ಎಂದು ಮತ್ತೊಬ್ಬರು ಕಾಮೆಂಟ್ ಮಾಡಿದ್ದಾರೆ. ಹಾಗೆಯೇ ಮತ್ತೆ ಕೆಲವರು ಆಕೆ ಒಮ್ಮೆ ನನಗೆ ಅಮಿತಾಭ್ ರೀತಿ ಕಂಡಳು ಎಂದು ಕಾಮೆಂಟ್ ಮಾಡಿದ್ದಾರೆ.

ಬಹುಶಃ ನಾನು ಹೈ-ಎಂಡ್ ಫ್ಯಾಷನ್ ಅನ್ನು ಅರ್ಥಮಾಡಿಕೊಳ್ಳುವಷ್ಟು ಸುಸಂಸ್ಕೃತನಲ್ಲದ ಕಾರಣ ಇರಬಹುದು, ಆದರೆ ಫ್ಯಾಷನ್ ವಿನ್ಯಾಸಕರು ರ್‍ಯಾಂಪ್ ವಾಕ್‌ಗಳಲ್ಲಿ ಅಂತಹ ಬಕ್ವಾಸ್ ಉಡುಪುಗಳನ್ನೇ ಏಕೆ ಪ್ರದರ್ಶಿಸುತ್ತಾರೆಂದು ನನಗೆ ಅರ್ಥವಾಗುತ್ತಿಲ್ಲ. ಈ ಉಡುಪು ಡಿಪಿಯಂತಹವರಿಗೆ ಚೆಂದ ಕಾಣದೇ ಹೋದರೆ ಬೇರೆ ಯಾರಾದರೂ ಅದನ್ನು ಏಕೆ ಪಡೆಯಲು ಬಯಸುತ್ತಾರೆ? ಎಂದು ಬಳಕೆದಾರರೊಬ್ಬರು ಪ್ರಶ್ನಿಸಿದ್ದಾರೆ.

# ರಂಗಭೂಮಿಗೆ ಪ್ರಶಸ್ತಿ ಅರ್ಪಣೆ



ಅನಂತ್ ನಾಗ್ ಕನ್ನಡ ಚಿತ್ರರಂಗದ ದಂತಕಥೆ. 50 ವರ್ಷಗಳಿಂದ ಕಲಾ ಸೇವೆಯನ್ನು ಮಾಡುತ್ತಿರುವ ಅನಂತ್ ನಾಗ್ ಕನ್ನಡ ಚಿತ್ರರಂಗದ ಅತ್ಯಂತ ಸುರದ್ರೂಪಿ ನಾಯಕ ಕೂಡ ಹೌದು.

ಬಯಲು ದಾರಿ, ನಾ ನಿನ್ನ ಬಿಡಲಾರೆ, ಬೆಂಕಿಯ ಬಲೆ, ಚಂದನದ ಗೊಂಬೆ, ಹೀಗೆ ಅನೇಕ ಚಿತ್ರಗಳ ಮೂಲಕ ಹೆಣ್ಣು ಮಕ್ಕಳ ಹೃದಯದಲ್ಲಿ ಶಾಶ್ವತ ಸ್ಥಾನ ಪಡೆದ ಅನಂತ್ ನಾಗ್ ಅವರಿಗೆ ಹಾಗೇ ನೋಡಿದರೆ ಪದ್ಮ ಪ್ರಶಸ್ತಿಯನ್ನು ಯಾವತ್ತೋ ಕೊಡಬೇಕಿತ್ತು. ಆದರೆ, ದುರ್ದೈವ ಅನಂತ್ ನಾಗ್ ಅವರ ಸಾಧನೆ ಕೇಂದ್ರ ಸರ್ಕಾರದ ಕಣ್ಣಿಗೆ ಯಾವತ್ತು ಕಾಣಿಸಲಿಲ್ಲ.

ಹೀಗಾಗಿಯೇ ಕಳೆದ ಕೆಲ ವರ್ಷಗಳಿಂದ ಪದ್ಮ ಪ್ರಶಸ್ತಿಯ ವಿಚಾರದಲ್ಲಿ ಕನ್ನಡಿಗರು ಅನಂತ್ ನಾಗ್ ಅವರ ಪರ ವಕಾಲತ್ತು ವಹಿಸಿದ್ದರು. ಅನಂತ್ ನಾಗ್ ಅವರಂತಹ ದಿಗ್ಗಜರಿಗೆ ಪದ್ಮ ಪ್ರಶಸ್ತಿ ಕೊಡದಿದ್ದರೆ ಆ ಪ್ರಶಸ್ತಿಗೆ ಇರುವ ಗೌರವ ಕಡಿಮೆಯಾಗುತ್ತೆ ಎಂದು ಕಿಡಿ ಕಾರಲು ಶುರು ಮಾಡಿದ್ದರು.

ಪುನೀತ್ ರಾಜ್ ಕುಮಾರ್, ರಿಷಬ್ ಶೆಟ್ಟಿ, ರಕ್ಷಿತ್ ಶೆಟ್ಟಿ ಹೀಗೆ ಕನ್ನಡ ಚಿತ್ರರಂಗದ ಅನೇಕರು ಅನಂತ್ ನಾಗ್ ಅವರಿಗೆ ಪದ್ಮ ಪ್ರಶಸ್ತಿಯನ್ನು ನೀಡಬೇಕು ಎಂದು ಅಭಿಯಾನವನ್ನು ಮಾಡಿದ್ದರು. ಇದೆಲ್ಲದರ ಪರಿಣಾಮ ಎಂಬಂತೆ ಈಗ ಅನಂತ್ ನಾಗ್ ಅವರಿಗೆ ಪದ್ಮ ಪ್ರಶಸ್ತಿ ನೀಡಲಾಗಿದೆ. ಈ ಹಿನ್ನೆಲೆ ತಮ್ಮ ಖುಷಿಯನ್ನು ಹಂಚಿಕೊಂಡಿರುವ ಅನಂತ್ ನಾಗ್ ತಮ್ಮ ಮನದ ಮಾತನ್ನು ಹಂಚಿಕೊಂಡಿದ್ದಾರೆ. ಹರಸಿ ಹಾರೈಸಿದ, ಬೆಂಬಲಿಸಿದ ಎಲ್ಲರಿಗೆ ಧನ್ಯವಾದ ಹೇಳಿದ್ದಾರೆ.

ಈ ಕುರಿತು ನೀಡಿದ ಸಂದರ್ಶನವೊಂದರಲ್ಲಿ ಮಾತನಾಡಿರುವ ಅನಂತ್ ನಾಗ್, ಈ ಪ್ರಶಸ್ತಿ ಸಿಕ್ಕಿದ್ದಕ್ಕೆ ನನಗೆ ಖುಷಿ ಇದೆ ಎಂದು ಹೇಳಿದ್ದಾರೆ.

ಕನ್ನಡಿಗರು ವಿಶೇಷವಾಗಿ ಈ ಪ್ರಶಸ್ತಿ ನನಗೆ ಬರಬೇಕು ಎಂದು ತುಂಬಾ ಆಸೆ ಪಟ್ಟಿದ್ದರು. ಆ ಆಸೆ ಈಡೇರಿದೆ ಎಂದಿರುವ ಅನಂತ್ ನಾಗ್ ನಮ್ಮ ದೇಶದಲ್ಲಿ ಹಿಂದಿನಿಂದ ಪದ್ಮ ಪ್ರಶಸ್ತಿ ಕೊಡುವ ವ್ಯವಸ್ಥೆ ಬೇರೆ ಇತ್ತು. ಆದರೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಮೂರು ವರ್ಷಗಳ ಹಿಂದೆ ಪದ್ಮ ಪ್ರಶಸ್ತಿಯಲ್ಲಿ ಸಾರ್ವಜನಿಕರು ಭಾಗಿಯಾಗಬೇಕು ಎಂದು ಘೋಷಣೆ ಮಾಡಿದ್ದರು, ಬಳಿಕ ಕನ್ನಡಿಗರು ನನ್ನ ಹೆಸರನ್ನು ಸೂಚಿಸಿದ್ದರು ಎಂದು ಹೇಳಿದ್ದಾರೆ.

ಆ ವರ್ಷ ನನಗೆ ಪ್ರಶಸ್ತಿ ಬರಲಿಲ್ಲ ಕಳೆದ ಮೂರು ವರ್ಷಗಳಿಂದ ಹೀಗೆ ಆಗ್ತಿತ್ತು ಎಂದು ಮಾತನಾಡಿದ್ದಾರೆ.ಮುಂದುವರೆದು ಸಾಮಾಜಿಕ ಜಾಲತಾಣದಲ್ಲಿ ಕನ್ನಡಿಗರು ನನಗೆ ಪದ್ಮ ಪ್ರಶಸ್ತಿ ಬರಲಿ ಎಂದು ಅಭಿಯಾನ ನಡೆಸಿದ್ದರು, ಕನ್ನಡಿಗರಿಗೆ, ಅಭಿಮಾನಿಗಳಿಗೆ ಈಗ ಸಂತೋಷವಾದಂತೆ ನನಗೂ ಕೂಡ ಸಂತೋಷವಾಗಿದೆ ಈ ಪ್ರಶಸ್ತಿಯನ್ನು ನಾನು ಕನ್ನಡದ ಪ್ರೇಕ್ಷಕರಿಗೆ, ಅಭಿಮಾನಿಗಳಿಗೆ, ನನ್ನ ಗುರುಗಳಿಗೆ ಮತ್ತು ರಂಗಭೂಮಿಗೆ ಅರ್ಪಿಸುತ್ತೇನೆ ಎಂದು ಹೇಳಿದ್ದಾರೆ.ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಧನ್ಯವಾದವನ್ನು ಹೇಳಿದ್ದಾರೆ.

ಇನ್ನುಳಿದಂತೆ 2025ರಲ್ಲಿ 139 ಗಣ್ಯರು ಪದ್ಮ ಪ್ರಶಸ್ತಿಗಳಿಂದ ಪುರಸ್ಕೃತಗೊಂಡಿದ್ದಾರೆ. ಆ ಪೈಕಿ 07 ಪದ್ಮ ವಿಭೂಷಣ ಪ್ರಶಸ್ತಿಗಳಿದ್ದರೆ 19 ಪದ್ಮಭೂಷಣ ಪ್ರಶಸ್ತಿಗಳಿವೆ. 113 ಪದ್ಮಶ್ರೀ ಪ್ರಶಸ್ತಿಗಳು ಇದರಲ್ಲಿ ಸೇರಿವೆ. ಮಾರ್ಚ್ ಅಥವಾ ಏಪ್ರಿಲ್‌ನಲ್ಲಿ ರಾಷ್ಟ್ರಪತಿ ಭವನದಲ್ಲಿ ಈ ಪ್ರಶಸ್ತಿ ಪ್ರಧಾನ ಸಮಾರಂಭ ನಡೆಯಲಿದೆ.

# ಬಿಗ್‌ಬಾಸ್ ಗೆದ್ದ ಹನುಮಂತು

ಬಿಗ್ ಬಾಸ್', ಕನ್ನಡ ಕಿರುತೆರೆಯ ಅತ್ಯಂತ ಜನಪ್ರಿಯ ಕಾರ್ಯಕ್ರಮ. ಬಹು ಭಾಷೆಗಳಲ್ಲಿ ಪ್ರಸಾರ ಕಾಣುವ ಈ ರಿಯಾಲಿಟಿ ಶೋಗೆ ಸಪರೇಟ್ ಫ್ಯಾನ್ ಬೇಸ್ ಇದೆ. ಅಭಿನಯ ಚಕ್ರವರ್ತಿ ಸುದೀಪ್ ನಿರೂಪಣೆಯಲ್ಲಿ ಮೂಡಿಬರುವ ಬಿಗ್ ಬಾಸ್ ಕನ್ನಡ ತನ್ನದೇ ಆದ ಮನ್ನಣೆ ಸಂಪಾದಿಸಿದೆ. ಸೀಸನ್ 11 ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಹಳ್ಳಿ ಹೈದ ಹನುಮಂತು ವಿಜೇತರಾಗಿ ಹೊರಹೊಮ್ಮಿದ್ದಾರೆ. ಅಪಾರ ಸಂಖ್ಯೆಯ ಅಭಿಮಾನಿಗಳು ಸೋಷಿಯಲ್ ಮೀಡಿಯಾದಲ್ಲಿ ಅಭಿನಂದೆಗಳ ಮಹಾಪೂರ ಹರಿಸಿದ್ದಾರೆ. ಜೊತೆಗೆ ತಮ್ಮ ಮೆಚ್ಚಿನ ಸ್ಪರ್ಧಿ ಮೇಲೆ ಪ್ರೀತಿಯ ಧಾರೆಯೆರೆಯುತ್ತಿದ್ದಾರೆ.

ತಮ್ಮ ಮುಗ್ಧತೆಯಿಂದಲೇ ಸದ್ದು ಮಾಡಿದ ಸೀಸನ್ 11ರ ಸ್ಪರ್ಧಿಯೆಂದ್ರೆ ಹನುಮಂತು. ಮಾತು ಕಡಿಮೆ ಆದ್ರೂ ತೂಕದ ಮಾತು, ಬುದ್ಧಿವಂತಿಕೆ ಮತ್ತು ಪ್ರಬುದ್ಧತೆಯ ಮಾತು ಇವರದ್ದು ಎಂದು ಅಭಿಮಾನಿಗಳು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ವೈಲ್ಡ್ ಕಾರ್ಡ್ ಮೂಲಕ ಎಂಟ್ರಿ ಕೊಟ್ಟು ಫಿನಾಲೆಗೆ ತಲುಪಿದ ಮೊದಲ ಸ್ಪರ್ಧಿಯಾಗಿದ್ದರು. ಕಂಪ್ಲೀಟ್ ಟಾಸ್ಕ್‌ಗಳಿಂದಲೇ ತುಂಬಿದ್ದ ವಾರದಲ್ಲಿ ಅತ್ಯುತ್ತಮ ಪ್ರದರ್ಶನ ಕೊಟ್ಟು, ತಮ್ಮ ಸಾಮರ್ಥ್ಯ ಸಾಬೀತುಪಡಿಸಿ, ಫಿನಾಲೆಗೆ ಎಂಟ್ರಿ ಕೊಟ್ಟಿದ್ದ ಹನುಮಂತು ಅವರೀಗ ಟ್ರೋಫಿ ಗೆದ್ದಿದ್ದಾರೆ.

ಸುದೀಪ್ ಕೈಯಿಂದ ಟ್ರೋಫಿ ಸ್ವೀಕರಿಸಿದ ಕೊನೆಯ ವಿಜೇತ: ಬಿಗ್ ಬಾಸ್ ಸೀಸನ್ 11 ಆರಂಭವಾದ ಕೆಲವೇ ದಿನಗಳಲ್ಲಿ ಇದು ನನ್ನ ನಿರೂಪಣೆಯಲ್ಲಿ ಮೂಡಿ ಬರಲಿರುವ ಕೊನೆ ಶೋ ಎಂದು ಕನ್ನಡ ಚಿತ್ರರಂಗದ ಅತ್ಯಂತ ಬೇಡಿಕೆಯ ನಟ ಸುದೀಪ್ ಘೋಷಿಸಿದ್ದರು. ತಮ್ಮ ಕೊನೆಯ ಕಿಚ್ಚನ ಪಂಚಾಯ್ತಿ ಪ್ರಸಾರ ಕಂಡ



ಸಂದರ್ಭದಲ್ಲೂ ಟ್ವೀಟ್ ಮಾಡಿ ಅಭಿಪ್ರಾಯ ಹಂಚಿಕೊಂಡಿದ್ದರು. ಮುಂದಿನ ಸೀಸನ್ ಯಾರು ನಡೆಸಿಕೊಡಲಿದ್ದಾರೆ ಅನ್ನೋದಕ್ಕೆ ಇನ್ನೂ ಉತ್ತರ ಸಿಕ್ಕಿಲ್ಲ. ಸೀಸನ್ 11 ಸುದೀಪ್ ನಿರೂಪಣೆಯಲ್ಲಿ ಮೂಡಿಬಂದ ಕೊನೆ ಸೀಸನ್ ಆಗಿದ್ದು, ಹನುಮಂತು ಸುದೀಪ್ ಕೈಯಿಂದ ಟ್ರೋಫಿ ಸ್ವೀಕರಿಸಿದ ಕೊನೆ ವಿಜೇರಾಗಿ ಹೊರಹೊಮ್ಮಿದ್ದಾರೆ.

ಬಿಗ್ ಬಾಸ್ ಫಿನಾಲೆ ತಲುಪಿದ್ದ ಜನಮೆಚ್ಚಿದ ಸ್ಪರ್ಧಿಗಳಿವರು: ರಜತ್ ಕಿಶನ್, ಮೋಕ್ಷಿತಾ, ಹನುಮಂತು, ತ್ರಿವಿಕ್ರಮ್, ಮಂಜು, ಭವ್ಯಾ.

**ತ್ರಿವಿಕ್ರಮ್ ರನ್ನರ್ ಅಪ್:** ಈ ರಿಯಾಲಿಟಿ ಶೋನ ಆರಂಭದಿಂದಲೂ ಟಫೆಸ್ಟ್ ಕಂಟಸ್ಟೆಂಟ್ ಎಂದು ಗುರುತಿಸಿಕೊಂಡವರು ತ್ರಿವಿಕ್ರಮ್. ಹೆಚ್ಚು ಮಾತನಾಡದೇ, ಆಟದಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದರು. ಆಟಕ್ಕೆ ನಿಂತ್ರೆ ಎದುರಾಳಿಗಳ ಎದೆಯಲ್ಲಿ ಭಯ ಹುಟ್ಟುತ್ತಿತ್ತು ಅನ್ನೋ ಅಭಿಪ್ರಾಯಗಳು ವ್ಯಕ್ತವಾಗಿದೆ. ಮನೆಯವರ ಜೊತೆ ಬೆರೆತಿದ್ದ ಇವರ ಭವ್ಯಾ ಜೊತೆಗಿನ ಸ್ನೇಹ ಗಮನ ಸೆಳೆದಿದೆ.





ಸುದೀಪ್ ಕೈಯಿಂದ ಟ್ರೋಫಿ ಸ್ವೀಕರಿಸಿದ ಕೊನೆಯ ವಿಜೇತ

# 'ಇದು ನನಗೆ ಸಿಕ್ಕ ಆಸ್ಕರ್'

## ಬಾಲ ಕಲಾವಿದನಿಗೆ ಸುದೀಪ್ ವಿಶೇಷ ಉಡುಗೊರೆ

ಕಳೆದ ರಾತ್ರಿ ಬಿಗ್ ಬಾಸ್ ಗ್ರ್ಯಾಂಡ್ ಫಿನಾಲೆ ಪ್ರಸಾರ ಕಂಡಿದೆ. ಹನುಮಂತು ವಿಜೇತರಾಗಿ ಟ್ರೋಫಿ ಮುಡಿಗೇರಿಸಿಕೊಂಡಿದ್ದಾರೆ. ವರ್ಣರಂಜಿತ ಕಾರ್ಯಕ್ರಮ ಒಂದು ಭಾವನಾತ್ಮಕ ಕ್ಷಣಕ್ಕೂ ಸಾಕ್ಷಿಯಾಗಿತ್ತು. ಹೌದು, ಇತ್ತೀಚೆಗಷ್ಟೇ ನಿರೂಪಕ ಸುದೀಪ್ ಅವರ ತಾಯಿ ವಿಧಿವಶರಾಗಿರೋದು ನಿಮಗೆ ತಿಳಿದಿರುವ ವಿಚಾರವೇ. ಅವರ ಸ್ಮರಣೆ ಈ ವೇದಿಕೆಯಲ್ಲಿ ನಡೆಯಿತು.



ಸರೋಜಾ ಅವರ ಸ್ಮರಣೆ : 2024ರ ಅಕ್ಟೋಬರ್ 20ರಂದು ಸುದೀಪ್ ಅವರ ತಾಯಿ ಸರೋಜಾ (75) ಕೊನೆಯುಸಿರೆಳೆದರು. ಕೆಲವೇ ದಿನಗಳಲ್ಲಿ ಬಿಗ್ ಬಾಸ್ ವೇದಿಕೆಯಲ್ಲಿ ಶ್ರದ್ಧಾಂಜಲಿ ಅರ್ಪಿಸಲಾಗಿತ್ತು. ಕಳೆದ ಭಾನುವಾರ ಪ್ರಸಾರವಾದ ಗ್ರ್ಯಾಂಡ್ ಫಿನಾಲೆ ವೇದಿಕಚೆಯಲ್ಲೂ ಸರೋಜಾ ಅವರ ಸ್ಮರಣೆ ನಡೆಯಿತು.

ಭಾವುಕ ಕ್ಷಣ : ಬಿಗ್ ಬಾಸ್ ಸೀಸನ್ 11 ತಾವು ನಿರೂಪಿಸುತ್ತಿರುವ ಕೊನೆಯ ಸೀಸನ್ ಎಂದು ಸುದೀಪ್ ಈಗಾಗಲೇ ಘೋಷಿಸಿದ್ದಾರೆ. ಈ ಹಿನ್ನೆಲೆ, ಕಾರ್ಯಕ್ರಮ ವೀಕ್ಷಿಸಲು ಬಿಗ್ ಬಾಸ್ ಸೆಟ್‌ಗೆ ಸುದೀಪ್ ಅವರ ತಂದೆ ಸಂಜೀವ್ ಮತ್ತು ಮಗಳು ಸಾನ್ವಿ ಆಗಮಿಸಿದ್ದರು. ಸರೋಜಾ ಅವರ ನೆನಪಲ್ಲಿ ವಿಶೇಷ ಹಾಡೊಂದನ್ನು ಅರ್ಪಿಸಲಾಯ್ತು. ಆ ಸಂದರ್ಭ ಸುದೀಪ್, ಸಂಜೀವ್, ಸಾನ್ವಿ ಬಹಳ ಭಾವುಕರಾಗಿ ಕಣ್ಣೀರಿಟ್ಟರು. ವೇದಿಕೆ ಬಳಿ ಇದ್ದ ಇತರರೂ ಸೇರಿದಂತೆ ಟಿವಿ ಮೂಲಕ ಈ ದೃಶ್ಯ ಕಣ್ತುಂಬಿಕೊಂಡವರೂ ಭಾವುಕರಾದರು. ಆದಷ್ಟೂ ಪ್ರಯತ್ನಿಸಿದರೂ ಸುದೀಪ್ ಕಣ್ಣೀರು ಕಣ್ಣಂಚನ್ನು ದಾಟೇಬಿಟ್ಟಿತು.

**ಅಮ್ಮನ ದನಿ ಕೇಳಿ ಭಾವುಕ :** ಕನ್ನಡ ಚಿತ್ರರಂಗದ ಖ್ಯಾತ ನಿರ್ದೇಶಕ ಯೋಗರಾಜ್ ಭಟ್ ಅವರು ಸುದೀಪ್ ಅವರಿಗಾಗಿ ಹಾಡೊಂದನ್ನು ಬರೆದಿದ್ರು. ಗ್ರ್ಯಾಂಡ್ ಫಿನಾಲೆಗೆ ಆಗಮಿಸಿದ ಅವರು ಪ್ರೇಕ್ಷಕರಂತೆ ಕುಳಿತು ಈ ಕಾರ್ಯಕ್ರಮ ವೀಕ್ಷಿಸಿ ಎಂದು ಕಿಚ್ಚನ ಬಳಿ ಮನವಿ ಮಾಡಿಕೊಂಡ್ರು. ಹಾಡಿನ ನಡುವೆ ಬಂದ ಅಮ್ಮನ ದನಿ ಕೇಳಿ ಸುದೀಪ್ ಬಹಳ ಭಾವುಕರಾದ್ರು.

**ಮಗಳಿಗೆ ಪ್ರೀತಿಯ ಮಳೆಗೈದ ಕಿಚ್ಚ :** ಯೋಗರಾಜ್ ಭಟ್ ಬರೆದ ಸಾಹಿತ್ಯಕ್ಕೆ ಸುದೀಪ್ ಪುತ್ರಿ ಸಾನ್ವಿ ದನಿ ನೀಡಿದ್ದರೆ, ವಾಸುಕಿ ಅವರ ಮ್ಯೂಸಿಕ್ ಈ ಹಾಡಿಗಿದೆ. ಹಾಡಿನ ಪ್ರತೀ ಸಾಲುಗಳು ನನಗಿಡಿಸಿತು. ಎಂದ ಸುದೀಪ್ ಹಾಡು ಹಾಡಿದ ಮಗಳಿಗೆ ವೇದಿಕೆಯಿಂದಲೇ ಪ್ರೀತಿಯ ಮಳೆಗೈದರು.

**ನನಗೆ ಸಿಕ್ಕ ದೊಡ್ಡ ಆಸ್ಕರ್** : ಈ ರೀತಿ ಸಾಹಿತ್ಯ ರಚಿಸಲು ನಿಮ್ಮಿಂದ (ಯೋಗರಾಜ್ ಭಟ್) ಮಾತ್ರ ಸಾಧ್ಯ. ಬಹಳ ಧನ್ಯವಾದಗಳು. ಈ ಹಾಡು ನನಗೆ ಸಿಕ್ಕ ದೊಡ್ಡ ಆಸ್ಕರ್. ತಂಡದವರು ಮರೆಯದೇ ಈ ಹಾಡನ್ನು ಪೆನ್‌ಡ್ರೈವ್‌ಗೆ ಹಾಕಿಕೊಡಿ ಎಂದು ತಿಳಿಸಿದ್ರು.

**ಬಾಲ ಕಲಾವಿದನಿಗೆ ವಿಶೇಷ ಉಡುಗೊರೆ :** ಇನ್ನು ಈ ಹಾಡಿನಲ್ಲಿ ಸುದೀಪ್ ಆಗಿ ವೇದಿಕೆಗೆ ಬಂದ ಯುವನ್ ಎಂಬ ಬಾಲ ಕಲಾವಿದನಿಗೆ ಮುತ್ತಿಟ್ಟು ತಮ್ಮ ಪ್ರೀತಿ ವ್ಯಕ್ತಪಡಿಸಿದರು. ಜೊತೆಗೆ ತಮ್ಮ ಕೈಯಲ್ಲಿದ್ದ ಬ್ರೇಸ್‌ಲೈಟ್ ಅನ್ನು ಉಡುಗೊರೆಯಾಗಿ ನೀಡೋ ಮೂಲಕ ಮನದುಂಬಿ ಧನ್ಯವಾದ ಅರ್ಪಿಸಿದರು.

# ಫ್ರೆಶ್ ಹೂವು, ಹಳೆ ಪ್ರೀತಿ ಬೇಕು



ಕನ್ನಡ ಕಿರುತೆರೆಯಲ್ಲಿ ಬಾಲನಟಿಯಾಗಿ ಮಿಂಚಿ, ಬಳಿಕ ಪುಟ್ಟ ಗೌರಿಯ ಮದುವೆ, ನಾಗಿಣಿ ಸೀರಿಯಲ್ ಮೂಲಕ ಜನರನ್ನು ರಂಜಿಸಿದ ಬೆಡಗಿ ನಮ್ರತಾ ಗೌಡ. ಇವರಿಗೆ ಮತ್ತಷ್ಟು ಫೇಮ್ ತಂದುಕೊಟ್ಟಿದ್ದು ಬಿಗ್ ಬಾಸ್.

ಬಿಗ್ ಬಾಸ್ ಸೀಸನ್ 10ರಲ್ಲಿ ಸ್ಪರ್ಧಿಯಾಗಿ ಭಾಗವಹಿಸಿ ಜನಮನ ಗೆದ್ದಿದ್ದ ಚೆಲುವೆ ನಮ್ರತಾ ಗೌಡ, ಸದ್ಯಕ್ಕಂತೂ ಸೋಶಿಯಲ್ ಮೀಡಿಯಾದಲ್ಲಿ ತಮ್ಮ ಫೋಟೊ ಶೂಟ್, ವಿಡಿಯೋ, ಡ್ಯಾನ್ಸ್, ರೀಲ್ಸ್ ಗಳ ಮೂಲಕವೇ ಸುದ್ದಿಯಲ್ಲಿರುತ್ತಾರೆ. ಹೆಚ್ಚಾಗಿ ಕಿಶನ್ ಬಿಳಗಲಿ ಜೊತೆ ವಿವಿಧ ಹಾಡುಗಳಿಗೆ ಹೆಜ್ಜೆಹಾಕುವ ವಿಡೀಯೋ ಶೂಟ್ ಮಾಡಿ ಶೇರ್ ಮಾಡುತ್ತಿರುತ್ತಾರೆ. ಇವರಿಬ್ಬರ ಡ್ಯಾನ್ಸ್ ಮೆಚ್ಚದವರೇ ಇರಲಾರರು, ಅಷ್ಟೊಂದು ಮುದ್ದಾಗಿರುತ್ತೆ ವಿಡಿಯೋ.

ಇದೀಗ ನಮ್ರತಾ ತಮ್ಮ ಇನ್‌ಸ್ಟಾಗ್ರಾಂನಲ್ಲಿ ರೇಡಿಯಂ ಗ್ರೀನ್ ಬಣ್ಣದ ಫುಲ್ ನೆಕ್ ಫುಲ್ ಸ್ಲೀವ್ಸ್ ಧರಿಸಿ ಫೋಟೊ ಶೂಟ್ ಮಾಡಿಸಿ, ಶೇರ್ ಮಾಡಿದ್ದು, ನಟಿ ಈ ಫೋಟೊದಲ್ಲಿ ತುಂಬಾನೆ ಡಿಫರೆಂಟ್ ಆಗಿ ಕಾಣಿಸುತ್ತಿದ್ದಾರೆ. ಹಿಂದೆ ಯಾವತ್ತೂ ಕಾಣದೇ ಇದ್ದ ಲುಕ್ ನಲ್ಲಿ ನಮ್ರತಾ ಗೌಡ ಕಾಣಿಸಿಕೊಂಡಿದ್ದಾರೆ. ಈ ಫೋಟೊಗಳ ಜೊತೆಗೆ ನಟಿ ನನಗೆ ಫ್ರೆಶ್ ಹೂವುಗಳು ಮತ್ತು ಹಳೆಯ ಪ್ರೀತಿಯನ್ನು ಕೊಡಿ ಎಂದು ಬರೆದುಕೊಂಡಿದ್ದು, ಈ ಕ್ಯಾಪ್ಶನ್ ವೀಕ್ಷಕರಲ್ಲಿ ಅಚ್ಚರಿ ಮೂಡಿಸಿದೆ. ಏನಾಗಿದ್ಯಪ್ಪಾ ನಾಗಿಣಿ ನಟಿಗೆ ಎಂದು ಕೇಳುತ್ತಿದ್ದಾರೆ. ಈ ಕ್ಯಾಪ್ಶನ್ ಗೆ ಅಭಿಮಾನಿಗಳು ಚಿತ್ರ ವಿಚಿತ್ರವಾಗಿ ಕಾಮೆಂಟ್ ಕೂಡ ಮಾಡಿದ್ದಾರೆ.

ಒಬ್ಬರು ಹಳೆ ಪ್ರೀತಿ ಬೇಕಾದ್ರೆ ಕೊಡೋಣ, ಆದ್ರೆ ಫ್ರೆಶ್ ಫ್ಲವರ್ ಈಗಾಗಲೇ ನನ್ನ ಗರ್ಲ್ ಫ್ರೆಂಡ್ ಗೆ ಕೊಟ್ಟಾಗಿದೆ ಎಂದಿದ್ದಾರೆ. ಇನ್ನು ಹಲವರು ಕ್ರಶ್, ಫಾರೆವರ್ ಕ್ರಶ್, ನಿಮಗೋಸ್ಕರ ಎಲ್ಲವನ್ನೂ ಕೊಡೋದೆ ಎಂದು ಕಾಮೆಂಟ್ ಮಾಡಿದ್ದಾರೆ. ಅಷ್ಟಕ್ಕೂ ನಮ್ರತಾ ಯಾಕೆ ಹಳೆ ಲವ್ ಬೇಕು ಎಂದಿದ್ದು ಗೊತ್ತಿಲ್ಲ.

ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-60 Email-mussanje2010@gmail.com, Phone: 9448074878